ಸಂಪುಟ: 04 ಸಂಚಿಕೆ: 150 ಪುಟಗಳು: 08 ಸೋಮವಾರ 12 ಆಗಸ್ಟ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಹಿಂದಿರುಗಿ ನೋಡುವ ಅವಶ್ಯಕತೆ ಇಲ್ಲ, ಮುಂದೆ ನೋಡಿ ನಮಗೆ ಅನಂತ ಶಕ್ತಿ ಅನಂತ ಉತ್ಸಾಹ ಅನಂತ ತಾಳ್ಮೆ ಬೇಕು, ಆಗ ಮಾತ್ರ ಮಹತ್ಕಾರ್ಯಗಳನ್ನು ನಾವು ಸಾಧಿಸಬಹುದು

## ಸಿ.ಪಿ. ಯೋಗೇಶ್ವರ್‌ಗೆ ಬಿಜೆಪಿ ಹೈಕಮಾಂಡ್ ಬುಲಾವ್

• ಉದಯವಾಹಿನಿ, ರಾಮನಗರ

ಚೆನ್ನಪಟ್ಟಣ ಉಪಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧೆಗೆ ಸಿದ್ಧತೆ ನಡೆಸಿರುವ ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಗೆ ಬಿಜೆಪಿ ಹೈಕಮಾಂಡ್ ಬುಲಾವ್ ನೀಡಿದ್ದು ಕುತೂಹಲಕ್ಕೆ ಕಾರಣವಾಗಿದೆ. ಬಿಜೆಪಿ ಹೈಕಮಾಂಡ್ ಬುಲಾವ್ ಹಿನ್ನೆಲೆಯಲ್ಲಿ ಸಿ.ಪಿ.ಯೋಗೇಶ್ವರ್ ಬೆಂಬಲಿಗರು ಆಯೋಜಿಸಿದ್ದ ಸಮಾನ ಮನಸ್ಕರರ ಸಮಾವೇಶ ಕೊನೇ ಕ್ಷಣದಲ್ಲಿ ರದ್ದಾಗಿದೆ. ರಾಮನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ 'ನಮ್ಮ ಶಾಸಕ ನಮ್ಮ ಹಕ್ಕು' ಹೆಸರಲ್ಲಿ ಸಮಾನ ಮನಸ್ಕರರ ಹಾಗೂ ಯೋಗೇಶ್ವರ್ ಅಭಿಮಾನಿ ಬಳಗದಿಂದ ಸಮಾವೇಶ ಆಯೋಜಿಸಲಾಗಿತ್ತು.ಒಂದು ವೇಳೆ ಉಪಚುನಾವಣೆಯಲ್ಲಿ ಬಿಜೆಪಿ ಟಿಕೆಟ್ ಸಿಗದಿದ್ದರೆ ಸ್ವತಂತ್ರ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ನಿಟ್ಟಿನಲ್ಲಿ ಅಭಿಪ್ರಾಯ ಸಂಗ್ರಹಿಸಲು ಸಮಾವೇಶ ನಡೆಸಲು ಉದ್ದೇಶಿಸಲಾಗಿತ್ತು. ಆದರೆ ಇಂದು ಬಿಜೆಪಿ ಹೈಕಮಾಂಡ್ ದೆಹಲಿಗೆ ಬರುವಂತೆ ಸಿ.ಪಿ.ಯೋಗೇಶ್ವರ್ ಗೆ ಬುಲಾವ್ ನೀಡಿದೆ. ಈ ಹಿನ್ನೆಲೆಯಲ್ಲಿ ಸಮಾವೇಶ ಕೊನೇ ಕ್ಷಣದಲ್ಲಿ ರದ್ದಾಗಿದೆ.

## ವಿಜಯೇಂದ್ರ ವಿರುದ್ಧ ರೆಬಲ್ ನಾಯಕರಿಂದ ರಹಸ್ಯ ಸಭೆ

• ಉದಯವಾಹಿನಿ, ಬೆಳಗಾವಿ

ರಾಜ್ಯ ಬಿಜೆಪಿಯಲ್ಲಿ ಭಿನ್ನಮತ ಭುಗಿಲೆದ್ದಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ಹತ್ತುಕ್ಕೂ ಹೆಚ್ಚು ಬಿಜೆಪಿ ನಾಯಕರು ಸಭೆ ನಡೆಸಿದ್ದಾರೆ.ಬೆಳಗಾವಿ ಜಿಲ್ಲೆಯ ಜಾಂಬೋಟಿ ರಸ್ತೆಯಲ್ಲಿರುವ ರೆಸಾರ್ಟ್ ನಲ್ಲಿ ಬಿಜೆಪಿ ರೆಬಲ್ ನಾಯಕರು ಸಭೆ ನಡೆಸಿದ್ದು, ಸಭೆಯಲ್ಲಿ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಆಪ್ತ ಎನ್.ಆರ್. ಸಂತೋಷ್ ಕೂಡ ಭಾಗಿಯಾಗಿದ್ದು, ತೀವ್ರ ಕುತೂಹಲ ಮೂಡಿಸಿದೆ. ಈಗಾಗಲೇ ಬಿ.ವೈ.ವಿಜಯೇಂದ್ರ ವಿರುದ್ಧ ಶಾಸಕರಾದ ಯತ್ನಾಳ್, ರಮೇಶ್ ಜಾರಕಿಹೊಳಿ ಸಿಡಿದೆದ್ದಿದ್ದಾರೆ. ಈ ಇಬ್ಬರು ನಾಯಕರಿಗೆ ಇನ್ನೂ ಹಲವು ಬಿಜೆಪಿ ನಾಯಕರು ಬೆಂಬಲ ನೀಡಿದ್ದಾರೆ. ರೆಬಲ್ ನಾಯಕರ ರಹಸ್ಯ ಸಭೆಯಲ್ಲಿ ಮಾಜಿ ಸಚಿವ ಅರವಿಂದ ಲಿಂಬಾವಳಿ, ಮಾಜಿ ಸಂಸದರಾದ ಪ್ರತಾಪ್ ಸಿಂಹ, ಅಣ್ಣಾಸಾಹೇಬ ಜೊಲ್ಲೆ, ಜಿ.ಎಂ.ಸಿದ್ದೇಶ್ವರ್, ಕುಮಾರ್ ಬಂಗಾರಪ್ಪ ಸೇರಿದಂತೆ ಹತ್ತಕ್ಕೂ ಹೆಚ್ಚು ನಾಯಕರು ಭಾಗಿಯಾಗಿದ್ದಾರೆ ಎಂದು ತಿಳಿದುಬಂದಿದೆ. ಮುಡಾ ಹಗರಣದ ವಿರುದ್ಧ ಬಿಜೆಪಿ-ಜೆಡಿಎಸ್ ದೋಸ್ತಿ ನಾಯಕರು ಪಾದಯಾತ್ರೆ ಮುಗಿಸುತ್ತಿದ್ದಂತೆ ರೆಬಲ್ ನಾಯಕರು ಆಕ್ಟೀವ್ ಆಗಿದ್ದು, ಬೆಳಿಗ್ಗೆಯಿಂದ ನಡೆಯುತ್ತಿರುವ ಬಿಜೆಪಿ ರೆಬಲ್ ನಾಯಕರ ಗೌಪ್ಯ ಸಭೆ ಕಮಲ ಪಾಳಯದಲ್ಲಿ ಸಂಚಲನ ಮೂಡಿಸಿದೆ.

## 17,800 ಕೇಂದ್ರಗಳಲ್ಲಿ ಸರ್ಕಾರಿ ಎಲ್‌ಕೆಜಿ, ಯುಕೆಜಿ ಶಾಲೆ ಆರಂಭ

• ಉದಯವಾಹಿನಿ, ಭದ್ರಾವತಿ

ಇಡೀ ದೇಶದಲ್ಲೇ ಮೊದಲ ಬಾರಿಗೆ ಜಾರಿಗೆ ತರಲಾಗಿರುವ ಅಂಗನವಾಡಿ ಕೇಂದ್ರಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳು ಶೀಘ್ರವೇ ರಾಜ್ಯಾದ್ಯಂತ ಆರಂಭಿಸಲಾಗುತ್ತಿದ್ದು, ಇದಕ್ಕಾಗಿ 17,800 ಅಂಗನವಾಡಿ ಕೇಂದ್ರಗಳನ್ನು ಗುರುತಿಸಲಾಗಿದೆ. ಈಗಾಗಲೇ ಬೆಂಗಳೂರು ನಗರದಲ್ಲಿ 250 ಕೇಂದ್ರಗಳಲ್ಲಿ ಪ್ರಾಯೋಗಿಕವಾಗಿ ಪೂರ್ವಪ್ರಾಥಮಿಕ ತರಗತಿಗಳನ್ನು ಆರಂಭಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ. ಭದ್ರಾವತಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಭಾನುವಾರ ಮಾತನಾಡಿದ ಸಚಿವರು, ಇಡೀ ದೇಶದಲ್ಲೇ ಮೊದಲ ಬಾರಿಗೆ ಅಂಗನವಾಡಿ ಕೇಂದ್ರಗಳಲ್ಲಿ ಪೂರ್ವಪ್ರಾಥಮಿಕ ತರಗತಿಗಳನ್ನು ಆರಂಭಿಸಲಾಗಿದ್ದು, ಇದಕ್ಕೆ ಕೇಂದ್ರ ಸರ್ಕಾರ ಕೂಡ ಮೆಚ್ಚುಗೆ ವ್ಯಕ್ತಪಡಿಸಿದೆ ಎಂದರು.

## ವಿಐಎಸ್‌ಎಲ್, ಎಂಪಿಎಂ ಪುನಃ ಚೇತನಕ್ಕೆ ಸರ್ಕಾರದಿಂದ ಕ್ರಮ

• ಉದಯವಾಹಿನಿ, ಶಿವಮೊಗ್ಗ

ಭದ್ರಾವತಿಯ ಎರಡು ಕಣ್ಣುಗಳಂತಿರುವ ಹಾಗೂ ಕೇಂದ್ರ ಸರ್ಕಾರದ ಅಧೀನ ಸಂಸ್ಥೆಗಳಾಗಿರುವ ವಿಐಎಸ್‌ಎಲ್ ಮತ್ತು ಎಂಪಿಎಂ ಕಾರ್ಖಾನೆಗಳನ್ನು ಸರ್ಕಾರದ ವತಿಯಿಂದಲೇ ಪುನಶ್ಚೇತನಗೊಳಿಸಲು ಸರ್ಕಾರದ ವತಿಯಿಂದಲೇ ಕ್ರಮ ವಹಿಸಲಾಗುವುದು ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಧು ಎಸ್ ಬಂಗಾರಪ್ಪ ಅವರು ಹೇಳಿದರು.

ಭದ್ರಾ ಜಲಾಶಯಕ್ಕೆ ಬಾಗಿನ ಅರ್ಪಿಸುವ ಪೂರ್ವದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಅವಳಿ ಸಂಸ್ಥೆಗಳನೆ ನಂಬಿಕೊಂಡು ಬದುಕು ಸಾಗಿಸುತ್ತಿದ್ದ ಸುಮಾರು 15 ಸಾವಿರ ಕುಟುಂಬಗಳು ಈ ಸಂಸ್ಥೆಯ ಉದ್ಯೋಗಾವಕಾಶ ಕಳೆದುಕೊಂಡು ಅತಂತ್ರ ಆಗಲಿದ್ದಾರೆ ಎಂಬ ಆತಂಕ ವ್ಯಕ್ತಪಡಿಸಿದರು.

ವಿಮಾನ ನಿಲ್ದಾಣದಲ್ಲಿ ಬಾಕಿ ಇರುವ ನೈಟ್ ಲ್ಯಾಂಡಿಂಗ್ ಸೇರಿ ಮತ್ತಿತರ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಿದೆ ನೈಟ್ ಲ್ಯಾಂಡಿಂಗ್ ಗೆ ಸಂಬಂಧಪಟ್ಟಂತೆ ಈಗಾಗಲೇ ಟೆಂಡರ್ ಪ್ರಕ್ರಿಯೆ ಚಾಲನೆಯಲ್ಲಿದೆ ಎಂದವರು ನುಡಿದರು.

# ಅಭದ್ರೆಯಾದಳೇ ತುಂಗಭದ್ರೆ

1. ಡಿಕೆಶಿಗೆ ತಮ್ಮ ಇಲಾಖೆಗಳ ನಿರ್ವಹಣೆಗಿಂತ ಕಾಂಗ್ರೆಸ್ ಹೈಕಮಾಂಡ್ ಏಜೆಂಟ್ ಕೆಲಸವೇ ಹೆಚ್ಚಾಗಿದೆ
2. ಪ್ರಜೆಗಳ ಹಿತಕ್ಕಿಂತ, ಪಕ್ಷದ ಹಿತವೇ ಆದ್ಯತೆ
3. ಪಕ್ಷದ ರಾಜ್ಯಗಳ ಚುನಾವಣೆಗೆ ಹಣ ಹೊಂದಿಸುವಲ್ಲಿ ಬ್ಯುಸಿ: ಆರ್. ಅಶೋಕ್ ಚಾಟಿ



**● ಸರ್ಕಾರದ ಬೇಜವಾಬ್ದಾರಿಯಿಂದ ತುಂಗಾಭದ್ರಾ ಅಣೆಕಟ್ಟು ಅಪಾಯ ವಿಪಕ್ಷಗಳ ಟೀಕೆ ● ತುಂಗಭದ್ರ ಗೇಟ್ ದುರಸ್ತಿಗೆ ಶೀಘ್ರ ಕ್ರಮ ● ನೀರಿಲ್ಲ ಎಂದು ರೈತರು ಗಾಬರಿಯಾಗೋದು ಬೇಡ ● ಟಿಬಿ ಡ್ಯಾಂನಿಂದ ಅಪಾರ ನೀರು ಬಿಡುಗಡೆ, ಆಂಧ್ರದಲ್ಲಿ ಕಟ್ಟೆಚ್ಚರ**

• ಉದಯವಾಹಿನಿ, ಬೆಂಗಳೂರು

ಈ ಬಾರಿ ಧಾರಾಕಾರ ಮಳೆ ಸುರಿದ ಹಿನ್ನೆಲೆ ತುಂಗಭದ್ರಾ ಅಣೆಕಟ್ಟೆ ಸಂಪೂರ್ಣ ಭರ್ತಿಯಾಗಿದ್ದು, ಸುತ್ತಮುತ್ತಲ 4 ಜಿಲ್ಲೆಗಳ ರೈತರ ಮೊಗದಲ್ಲಿ ಸಂತಸದ ಹೊನಲೇ ಹರಿದಿತ್ತು. ಈಗ 105 ಅಡಿ ಟಿಎಂಸಿ ನೀರಿನ ಸಾಮರ್ಥ್ಯವಿದೆ. ಈಗ ಜಲಾಶಯದಿಂದ 65 ಟಿಎಂಸಿ ನೀರು ಹೊರ ಬಿಟ್ಟರೆ ರೈತರು ಸಂಕಷ್ಟಕ್ಕೆ ಗುರಿಯಾಗುವ ಸಾಧ್ಯತೆ ಇದೆ. ಕಂಪ್ಲಿ ಪಟ್ಟಣ ಜಲಾವೃತಗೊಳ್ಳುವ ಆತಂಕವೂ ಎದುರಾಗಿದೆ. ಕ್ರಸ್ಟ್ ಗೇಟ್ ತುಂಡಾಗಿರುವ ಹಿನ್ನೆಲೆ ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗಿದ್ದು, ಜಲಾಶಯದ ಆಸುಪಾಸಿನಲ್ಲಿ ಯಾರೂ ತೆರಳದಂತೆಯೂ ಕಟ್ಟೆಚ್ಚರ ವಹಿಸಲಾಗಿದೆ. ಗೇಟ್ ಚೈನ್‌ಲಿಂಕ್ ಕಟ್ಟಾಗಿರುವುದಕ್ಕೆ ಅಧಿಕಾರಿಗಳ ನಿರ್ಲಕ್ಷ್ಯ ಕಾರಣ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಚೈನ್ ಲಿಂಕ್ ತುಂಡಾದ ಈ ಗೇಟ್‌ನಿಂದಲೇ ಅಂದಾಜು 35 ಸಾವಿರದಿಂದ 40 ಸಾವಿರ ಕ್ಯುಸೆಕ್ ನೀರು ನದಿಗೆ ಹೋಗುತ್ತಿದೆ. ಉಳಿದ ಗೇಟ್‌ಗಳಿಂದ 75 ಸಾವಿರ ಕ್ಯುಸೆಕ್ ನೀರು ಬಿಡಲಾಗಿದೆ.

ಪ್ರತಿವರ್ಷವೂ ಜಲಾಶಯದ ಗೇಟ್‌ಗಳ ನಿರ್ವಹಣೆ ಮಾಡಲಾಗುತ್ತದೆ. ಜಲಾಶಯದ ಸುರಕ್ಷತೆಗೆ ಯಾವುದೇ ತೊಂದರೆಯಿಲ್ಲ. ಆತಂಕಗೊಳ್ಳುವ ಅಗತ್ಯವೂ ಇಲ್ಲ. ಜಲಾಶಯದಲ್ಲಿ ಸಾಕಷ್ಟು ಪ್ರಮಾಣದಲ್ಲಿರುವ ಈಗಿನ ನೀರಿನಲ್ಲಿ ಆಗಿರುವ ಸಮಸ್ಯೆ ಪರಿಹರಿಸಲು ಸಾಧ್ಯವಾಗುತ್ತದೆಯೊ ಇಲ್ಲವೊ ಎನ್ನುವುದನ್ನು ತಜ್ಞರ ತಂಡ ನಿರ್ಧಾರ ಮಾಡಲಿದೆ. ಸದ್ಯ 70 ಸಾವಿರ ಕ್ಯುಸೆಕ್ ನೀರು ಹೊರಗಡೆ ಬಿಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಜಲಾಶಯದ ಸಂಪೂರ್ಣ ಭರ್ತಿಯಾಗಿ ಕಳೆದ ವಾರ ಹತ್ತು ದಿನಗಳಿಂದಲೂ ನೀರು ಹೊರಹೋಗುತ್ತಿತು. 105.788 ಟಿಎಂಸಿ ಅಡಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿದೆ.

ಸಚಿವ ಶಾಸಕರ ಭೇಟಿ: ಜಲಾಶಯಕ್ಕೆ ಬೆಳಗಿನ ಜಾವ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ವಿಜಯನಗರ ಶಾಸಕ ಹೆಚ್.ಆರ್.ಗವಿಯಪ್ಪ, ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ್ ಭೇಟಿ ನೀಡಿದರು. ಸಚಿವ ಶಿವರಾಜ್ ತಂಗಡಗಿ '19ನೇ ಕ್ರಸ್ಟ್ ಗೇಟ್ ಚೈನ್ ಲಿಂಕ್ ಮುರಿದಿರುವ ಕಾರಣ ಕುರಿತು ಅಧಿಕಾರಿಗಳ ಜೊತೆ ಚರ್ಚಿಸಿದ್ದೇನೆ. ಸದ್ಯದ ಮಟ್ಟಿಗೆ 60ರಿಂದ 65 ಟಿಎಂಸಿ ಅಡಿಗೂ ಹೆಚ್ಚು ನೀರು ಖಾಲಿ ಮಾಡಬೇಕಾಗುತ್ತದೆ. ಕನಿಷ್ಠ 20 ಅಡಿ ನೀರು ಖಾಲಿಯಾದರೆ ಮಾತ್ರ ನಿಖರವಾಗಿ ಸಮಸ್ಯೆ ಏನಾಗಿದೆ ಎನ್ನುವುದು ಗೊತ್ತಾಗುತ್ತದೆ ಎಂದಿದ್ದಾರೆ.'ಅಣೆಕಟ್ಟು ಕಟ್ಟಿದ ವಿನ್ಯಾಸವನ್ನು ತರಿಸಿಕೊಳ್ಳಲಾಗಿದ್ದು, ನೀರಿನ ರಭಸ ಹೆಚ್ಚಿರುವ ಕಾರಣ ಕೆಳಗಡೆ ಇಳಿದು ಕೆಲಸ ಮಾಡಲು ಆಗುವುದಿಲ್ಲ. ಸದ್ಯಕ್ಕೆ ಒಂದು ಲಕ್ಷ ಕ್ಯುಸೆಕ್ ನೀರು ಹೊರಬಿಡಲಾಗುತ್ತಿದೆ ಎಂದರು.

> ಸಂಪೂರ್ಣ ಹೊಸ ಕ್ರಸ್ಟ್‌ಗೇಟ್ ಅಳವಡಿಸಬೇಕಾಗಿದ್ದು, ಇದು 60 ಅಡಿ ಎತ್ತರ ಮತ್ತು 20 ಅಡಿ ಅಗಲದ ಗೇಟ್ ಇದಾಗಿರುತ್ತದೆ. ತಲಾ 12 ಅಡಿ ಅಗಲದ 5 ಬೃಹತ್ ಕಬ್ಬಿಣದ ಹಲಗೆಗಳನ್ನು ಜೋಡಿಸಿ ಈ ಗೇಟ್ ಸಿದ್ಧಪಡಿಸಲಾಗುತ್ತದೆ. ನೀರು 20 ಅಡಿಯಷ್ಟು ಇಳಿಕೆಯಾದ ಬಳಿಕ ಗೇಟ್ ಅಳವಡಿಸಲಾಗುತ್ತದೆ.
>
> -ಒಆರ್‌ಕೆ ರೆಡ್ಡಿ, ತುಂಗಭದ್ರಾ ಮಂಡಳಿ ಕಾರ್ಯದರ್ಶಿ

### ದುರಸ್ತಿಗೆ ಶತ ಪ್ರಯತ್ನ ಡಿಕೆಶಿ

ತುಂಗಭದ್ರಾ ಜಲಾಶಯದ ಕಳಚಿ ಬಿದ್ದಿರುವ ಕ್ರಸ್ಟ್ ಗೇಟ್ ದುರಸ್ತಿ ಕೆಲಸ ಆರಂಭವಾಗಿದ್ದು, ಮುಂದಿನ ನಾಲ್ಕೈದು ದಿನದಲ್ಲಿ ಏನಾದ್ರೂ ಮಾಡಿ ದುರಸ್ತಿಗೊಳಿಸಲು ಶತ ಪ್ರಯತ್ನ ಮಾಡಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಹೇಳಿದ್ದಾರೆ. ಟಿಬಿ ಡ್ಯಾಂ ಬಳಿಯ ವೈಕುಂಠ ಅಥಿತಿ ಗೃಹದಲ್ಲಿ ಅಧಿಕಾರಿಗಳು, ಜನಪ್ರತಿನಿಧಿಗಳ ಜೊತೆ ಸಭೆ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಶನಿವಾರ ರಾತ್ರಿ 10.50ಕ್ಕೆ ಗೇಟ್ ನಂಬರ್ 19 ಕಳಚಿ ಬಿದ್ದಿದೆ. ತಕ್ಷಣ ಟಿಬಿ ಬೋರ್ಡ್ ಅಧಿಕಾರಿಗಳು ಈ ಭಾಗದ ಜಿಲ್ಲಾಡಳಿತಗಳಿಗೆ ಮಾಹಿತಿ ರವಾನಿಸಿದ್ದಾರೆ. ಈಗ ನಾವು ರೈತರನ್ನ ಬದುಕಿಸಬೇಕು. ಟಿಬಿ ಡ್ಯಾಂ 105 ಟಿಎಂಸಿ ಸಾಮರ್ಥ್ಯ ಇದೆ. ಕೂಡಲೇ ನೀರನ್ನು ಡಿಸ್ಚಾರ್ಜ್ ಮಾಡಲು ತಿಳಿಸಲಾಗಿದೆ. ಒಟ್ಟು 98 ಸಾವಿರ ಕ್ಯುಸೆಕ್ ನೀರು ನದಿಗೆ ಬಿಡಲಾಗಿದೆ, ಗೇಟ್ 19 ಒಂದರಲ್ಲೇ 38 ಸಾವಿರ ಕ್ಯುಸೆಕ್ ನೀರು ಹೊರ ಹೋಗುತ್ತಿದೆ ಎಂದು ಡಿಕೆಶಿ ಮಾಹಿತಿ ನೀಡಿದರು.


> ನೀರು ಹೊರಬಿಡುವ ಪ್ರಮಾಣ 2.50 ಲಕ್ಷ ಕ್ಯುಸೆಕ್ ದಾಟಿದರೆ ಮಾತ್ರ ಜನರಿಗೆ ತೊಂದರೆಯಾಗುತ್ತದೆ. ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಅವರಿಗೆ ಮಾಹಿತಿ ನೀಡಲಾಗಿದೆ ಕಡಿಮೆ ಸಮಯದಲ್ಲಿ ಸಮಸ್ಯೆ ಪರಿಹರಿಸಲು ಬೆಂಗಳೂರು, ಹೈದರಾಬಾದ್, ಚೆನ್ನೈನಿಂದ ತಜ್ಞರ ತಂಡ ಬರಲಿದೆ. ಏನು ಮಾಡಬೇಕು ಎನ್ನುವುದನ್ನು ನಿರ್ಧರಿಸಲಾಗುವುದು
>
> -ಶಿವರಾಜ್ ತಂಗಡಗಿ, ಸಚಿವ

> ನೀರಾವರಿ ಇಲಾಖೆ ಉನ್ನತ ಅಧಿಕಾರಿಗಳು ಬೆಂಗಳೂರಿನಿಂದ ಹೊರಟಿದ್ದು, ಡ್ಯಾಂನಲ್ಲಿನ ನೀರು ಕಡಿಮೆಯಾದ ಬಳಿಕವಷ್ಟೇ ತುಂಡಾದ ಚೈನ್ ಲಿಂಕ್ ಮತ್ತು ಗೇಟ್ ಸರಿಪಡಿಸಲು ಸಾಧ್ಯವಾಗುತ್ತದೆ. ದುರಸ್ತಿಗೆ ಅಗತ್ಯವಾಗಿ ಬೇಕಾದ ನೀರು ಕಡಿಮೆಯಾಗಲು ಕನಿಷ್ಠ 3-4 ದಿನವಾದರೂ ಬೇಕು.
>
> -ಎಲ್. ಬಸವರಾಜ್, ಅಧೀಕ್ಷಕ ಎಂಜಿನಿಯರ್

### ವೆಲ್ಡಿಂಗ್ ಬಿಟ್ಟಿದ್ದೇ ಗೇಟ್ ಕುಸಿತಕ್ಕೆ ಕಾರಣ

ತುಂಗಭದ್ರಾ ಅಣೆಕಟ್ಟೆಯ 19ನೇ ಸಂಖ್ಯೆಯ ಕ್ರಸ್ಟ್ ಗೇಟ್‌ನಲ್ಲಿ ಚೈನ್‌ಲಿಂಕ್ ಬೆಸುಗೆ (ವೆಲ್ಡಿಂಗ್) ಬಿಟ್ಟಿದ್ದೇ ಗೇಟ್ ಸಂಪೂರ್ಣ ಕುಸಿಯಲು ಕಾರಣವಾಗಿದೆ. ಅಣೆಕಟ್ಟೆಯ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಇಂತಹ ದುರ್ಘಟನೆ ಸಂಭವಿಸಿದೆ ಎಂದು ತುಂಗಭದ್ರಾ ಮಂಡಳಿಯ ಕಾರ್ಯದರ್ಶಿ ಒ.ಆರ್.ಕೆ ರೆಡ್ಡಿ ತಿಳಿಸಿದರು. ವೈಕುಂಠ ಅತಿಥಿ ಗೃಹದಲ್ಲಿ ಇಂದು ಬೆಳಿಗ್ಗೆ ಹಿರಿಯ ಅಧಿಕಾರಿಗಳು ಇಂಜಿನಿಯರ್‌ಗಳ ಜತೆ ಸಮಾಲೋಚನೆ ನಡೆಸಿ ಅಣೆಕಟ್ಟೆಯ ಗೇಟ್ ತುಂಡಾಗಿರುವುದನ್ನು ದುರಸ್ಥಿ ಮಾಡುವ ಕುರಿತು ಸಮಾಲೋಚನೆ ನಡೆಸಿದರು. ಬಳಿಕ ಪ್ರತಿಕ್ರಿಯೆ ನೀಡಿದ ಅವರು, ಮಳೆ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಜಲಾಶಯದಲ್ಲಿ ನೀರನ್ನು ಖಾಲಿ ಮಾಡಲು 3-4 ದಿನ ಬೇಕಾಗಬಹುದು. ಬದಲಿ ಗೇಟ್ ಅಳವಡಿಸಲು ತಕ್ಷಣವೇ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದರು. ತುಂಗಭದ್ರಾ ಅಣೆಕಟ್ಟೆಯ ಗೇಟ್‌ಗಳ ಸುರಕ್ಷತೆ ಬಗ್ಗೆ ಪರಿಶೀಲನೆ ನಡೆಸುತ್ತಿರುತ್ತೇವೆ, ಈ ಬಾರಿಯೂ ಸಹ ಎಲ್ಲಾ ಪರೀಕ್ಷೆಗಳು ಮಾಡಲಾಗಿತ್ತು. 19ನೇ ಗೇಟ್‌ನಲ್ಲಿ ವೆಲ್ಡಿಂಗ್ ಬಿಟ್ಟುಕೊಂಡು ಚೈನ್‌ಲಿಂಕ್ ತುಂಡಾಗಿದೆ. 70 ವರ್ಷಗಳ ಹಿಂದೆ ಚೈನ್‌ಲಿಂಕ್ ಅಳವಡಿಸಲಾಗಿತ್ತು. ಈ ಚೈನ್ ಲಿಂಕ್ ತುಂಡಾದರೂ ಕಾರಣ ಏನು ಎಂಬ ಬಗ್ಗೆ ಕೂಲಂಕುಷ ತನಿಖೆ ನಡೆಯುತ್ತಿದೆ.

### ಕೆಆರ್‌ಎಸ್ ಡ್ಯಾಂಗೂ ಸ್ಟಾಫ್ ಲಾಕ್ ಗೇಟ್ ಇಲ್ಲ



ತುಂಗಭದ್ರಾ ಡ್ಯಾಂ ನ ಕ್ರಸ್ಟ್ ಗೇಟ್ ಚೈನ್ ಲಿಂಕ್ ಕಟ್ಟಾಗಿ ಅವಘಡ ಸಂಭವಿಸಿರುವ ಬೆನ್ನಲ್ಲೇ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕೆ.ಆರ್.ಎಸ್ ಡ್ಯಾಂ ಗೂ ಸ್ಟಾಫ್ ಲಾಕ್ ಗೇಟ್ ಇಲ್ಲ. ಈ ಬಗ್ಗೆ ಈಗಲೇ ಗಮನಹರಿಸುವುದು ಒಳ್ಳೆಯದು ಎಂದು ಸಲಹೆ ನೀಡಿದ್ದಾರೆ. ಕೆ.ಆರ್.ಎಸ್.ಡ್ಯಾಂ ಕಟ್ಟುವಾಗ ಸ್ಟಾಫ್ ಲಾಕ್ ಗೇಟ್ ಹಾಕಿಲ್ಲ. ಈಗ ತುಂಗಭದ್ರಾ ಡ್ಯಾಂ ಪರಿಸ್ಥಿತಿ ಗಮನಿಸಿದರೆ ಈಗಲೇ ಎಚ್ಚೆತ್ತುಕೊಳ್ಳುವುದು ಒಳಿತು. ದೂರದೃಷ್ಟಿಯಿಂದ ಕೆ.ಆರ್.ಎಸ್ ಗೆ ಸ್ಟಾಫ್ ಲಾಕ್ ಹಾಕಬೇಕು ಎಂದು ಹೇಳಿದರು.

### ತಜ್ಞರ ತಂಡದಿಂದ ಪರಿಶೀಲನೆ ಆತಂಕ ಬೇಡ ಎಂದ ಗೃಹ ಸಚಿವ



ಗ್ರಾಮಸ್ಥರು ಆತಂಕ ಪಡುವ ಅಗತ್ಯವಿಲ್ಲ. ಪ್ರವಾಹವುಂಟಾಗುವುದಿಲ್ಲ ಎಂದು ಹೇಳಿದ್ದಾರೆ. ತುಂಗಭದ್ರಾ ಡ್ಯಾಂ ನ 19ನೇ ಗೇಟ್ ನ ಚೈನ್ ಲಿಂಕ್ ಕಟ್ಟಾಗಿದೆ. ರಿಪೇರಿ ಮಾಡಬಹುದು ಎಂದು ಕೆಲವರು ಹೇಳುತ್ತಿದ್ದಾರೆ. ತಜ್ಞರ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಲಿದೆ. ತಜ್ಞರು ಭೇಟಿ ನೀಡಿ ಮಾಹಿತಿ ತಿಳಿಸುವವರೆಗೂ ಏನೂ ಹೇಳಲು ಆಗುವುದಿಲ್ಲ. ಈಗಾಗಲೇ ಸರ್ಕಾರ ಮುಂಜಾಗ್ರತಾ ಕ್ರಮವಾಗಿ ಎಲ್ಲಾ ರೀತಿ ಸಿದ್ಧತೆ ಮಾಡಿಕೊಂಡಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು.

### ಡಿಕೆಶಿ ವಿರುದ್ಧ ಆರ್.ಅಶೋಕ್ ಹಿಗ್ಗಾಮುಗ್ಗಾ ವಾಗ್ದಾಳಿ



ರಾಜ್ಯ ಕಾಂಗ್ರೆಸ್ ಸರ್ಕಾರದ ದಿವ್ಯ ನಿರ್ಲಕ್ಷ್ಯದಿಂದ ತುಂಗಭದ್ರಾ ಅಣೆಕಟ್ಟಿನ 19ನೇ ಗೇಟ್ ಚೈನ್ ಲಿಂಕ್ ಮುರಿದು ಬಿದ್ದಿದ್ದು, ಡ್ಯಾಂನ ಹೊರ ಹರಿವು ಏರಿಕೆಯಾಗಿ ಅಪಾರ ಪ್ರಮಾಣದ ನೀರು ಪೋಲಾಗುತ್ತಿರುವುದರಿಂದ ನದಿ ಪಾತ್ರದ ರೈತರನ್ನು ಚಿಂತೆಗೀಡು ಮಾಡಿದೆ ಎಂದಿದ್ದಾರೆ. ಕಳೆದ ವರ್ಷವೆಲ್ಲ ಬರಗಾಲದಿಂದ ತತ್ತರಿಸಿದ್ದ ರೈತರು ಈ ವರ್ಷ ಉತ್ತಮ ಮಳೆಯಾಗಿ ಜಲಾಶಯ ಭರ್ತಿಯಾಗಿರುವುದರಿಂದ ಎರಡು ಬೆಳೆ ತೆಗೆಯಬಹುದು ಎಂದು ನಿಟ್ಟುಸಿರು ಬಿಡುತ್ತಿರುವಾಗಲೇ ರಾಜ್ಯ ಕಾಂಗ್ರೆಸ್ ಸರ್ಕಾರದ ನಿರ್ಲಕ್ಷ್ಯದಿಂದ ಈಗ ಬಿತ್ತನೆಯಾಗಿರುವ ಒಂದು ಬೆಳೆಯು ಸಹ ಕೈತಪ್ಪಬಹುದು ಎಂಬ ಆತಂಕದಲ್ಲಿದ್ದಾರೆ ಎಂದು ವಿಪಕ್ಷ ನಾಯಕ ಆರ್ ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

### ರಾಜ್ಯ ಸರ್ಕಾರದ ನಿರ್ಲಕ್ಷ್ಯದಿಂದ ಟಿಬಿ ಡ್ಯಾಮ್ ಸಮಸ್ಯೆ ಎದುರಾಗಿದೆ



ರಾಜ್ಯ ಸರ್ಕಾರ ತುಂಗಭದ್ರಾ ಅಣೆಕಟ್ಟೆಯ ಡ್ಯಾಮ್ ಮ್ಯಾನೇಜ್ ಮೆಂಟ್ ಕಮಿಟಿ ನೀಡಿರುವ ಸಲಹೆಗಳನ್ನು ಗಂಭೀರವಾಗಿ ತೆಗೆದುಕೊಳ್ಳದಿರುವುದರಿಂದ ಡ್ಯಾಮ್ ನ ಕ್ರಸ್ಟ್ ಗೇಟ್ ಮುರಿದು ಸಮಸ್ಯೆ ಎದುರಿಸುವಂತಾಗಿದೆ. ತುಂಗಭದ್ರಾ ಡ್ಯಾಂ ಸ್ವತಂತ್ರ ಪೂರ್ವದಲ್ಲಿ ನಿರ್ಮಾಣ ಆಗಿದೆ. ಅದು ಕಾಲ ಕಾಲಕ್ಕೆ ಹಲವಾರು ಸಮಸ್ಯೆ ಎದುರಿಸುತ್ತಾ ಬಂದಿದೆ. ಹೂಳು ತುಂಬಿರುವ ಬಗ್ಗೆ ಬಹಳ ದೊಡ್ಡ ಸಮಸ್ಯೆ ಆಗಿತ್ತು. ಹೀಗಾಗಿ ಸಮಾನಾಂತರವಾದ ಅಣೆಕಟ್ಟು ಕಟ್ಟಬೇಕು ಅಂತ ನಮ್ಮ ಅವಧಿಯಲ್ಲಿ ಡಿಪಿಆರ್ ಮಾಡಿ ಸಿದ್ಧತೆ ಮಾಡಲಾಗಿತ್ತು. ಡ್ಯಾಂ ಮ್ಯಾನೇಜ್ ಮೆಂಟ್ ಕಮಿಟಿ ಕೇಂದ್ರ ಸರ್ಕಾರದಿಂದ ಬಂದು ಹಲವು ಸಲಹೆ ಕೊಟ್ಟಿರುತ್ತಾರೆ. ಅವರ ಸಲಹೆಗಳನ್ನು ರಾಜ್ಯ ಸರ್ಕಾರ ಒತ್ತು ಕೊಟ್ಟು ಜಾರಿ ಮಾಡಬೇಕು. ಆದರೆ, ಸರ್ಕಾರ ಗಂಭೀರವಾಗಿ ಅವರ ಸಲಹೆ ತೆಗೆದುಕೊಂಡಿಲ್ಲ ಅನಿಸುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.


## ಕರ್ನಾಟಕದಲ್ಲಿ ಭೂ ಕುಸಿತ ತಡೆಗೆ ಶೀಘ್ರವೇ ಹೊಸ ನೀತಿ ಜಾರಿ

**ಹೆಚ್ಚುತ್ತಿರುವ ಭೂ ಕುಸಿತದ ಪರಿಣಾಮಗಳನ್ನು ತಗ್ಗಿಸುವ ಸಂಬಂಧ ಅಭಿವೃದ್ಧಿ ಕೇಂದ್ರಿತ ಚಟುವಟಿಕೆ ನಿಯಂತ್ರಿಸುವ ನೀತಿ**

• ಉದಯವಾಹಿನಿ, ಬೆಂಗಳೂರು

ಕೇರಳದ ವಯನಾಡಿನಲ್ಲಿ ಉಂಟಾದಂತ ಭೂ ಕುಸಿತದ ನಂತ್ರ, ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದೆ. ಕರ್ನಾಟಕದಲ್ಲಿ ಭೂ ಕುರಿತ ತಡೆಗೆ ಶೀಘ್ರವೇ ಹೊಸ ನೀತಿ ಜಾರಿಗೆ ತರಲು ನಿರ್ಧರಿಸಿದೆ.

ಈ ಕುರಿತಂತೆ ಮಾಹಿತಿ ನೀಡಿರುವಂತ ಕಂದಾಯ ಸಚಿವ ಕೃಷ್ಣಭೈರೇಗೌಡ ಅವರು, ಘಟ್ಟ ಪ್ರದೇಶಗಳಲ್ಲಿ ಹೆಚ್ಚುತ್ತಿರುವ ಭೂ ಕುಸಿತದ ಪರಿಣಾಮಗಳನ್ನು ತಗ್ಗಿಸುವ ಸಂಬಂಧ ಅಭಿವೃದ್ಧಿ ಕೇಂದ್ರಿತ ಚಟುವಟಿಕೆ ನಿಯಂತ್ರಿಸುವ ನೀತಿಯೊಂದನ್ನು ರೂಪಿಸಲಾಗುತ್ತಿದೆ, ಗುಡ್ಡಗಳನ್ನು ಕಡಿದು ನಿರ್ಮಾಣ ಚಟುವಟಿಕೆ ಕೈಗೊಳ್ಳುವುದು ಸೇರಿ ಹಲವು ಅವೈಜ್ಞಾನಿಕ ಅಭಿವೃದ್ಧಿಗೆ



ನಿರ್ಬಂಧಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದ್ದಾರೆ. ಗುಡ್ಡಗಳನ್ನು 90 ಡಿಗ್ರಿಯಲ್ಲಿ ಲಂಬವಾಗಿ ಕತ್ತರಿಸುವುದನ್ನು ತಡೆಯುವುದು, ಗುಡ್ಡದಿಂದ ನೀರು ಸರಾಗವಾಗಿ ಹರಿದುಹೋಗುವಂತೆ ವ್ಯವಸ್ಥೆ ಮಾಡುವುದು ಸೇರಿ ನಿರ್ಮಾಣ ಪರವಾನಗಿಯಲ್ಲಿ ಷರತ್ತು ವಿಧಿಸುವುದು, ಅನಧಿಕೃತ ನಿರ್ಮಾಣ ಚಟುವಟಿಕೆಗಳನ್ನು ನಿರ್ಬಂಧಿಸುವುದು ಒಳಗೊಂಡಂತೆ ಹಲವು ಉಪಕ್ರಮಗಳು ನೀತಿಯಲ್ಲಿ ಇರಲಿವೆ ಎಂದು ಅವರು ಹೇಳಿದ್ದಾರೆ

**ಸಹಾಯಹಸ್ತ ನೀಡಲು ಉದ್ಯಮಿಗಳಿಗೆ ಮನವಿ**

ಕಂಡುಕೇಳರಿಯದ ಭೂಕುಸಿತದಿಂದ ನಲುಗಿರುವ ಕೇರಳದ ವಯನಾಡ್ ಜನತೆಯ ನೆರವಿಗೆ ರಾಜ್ಯದ ಕೈಗಾರಿಕೋದ್ಯಮಿಗಳು ಧಾವಿಸಿ, ಸಹಾಯಹಸ್ತ ಚಾಚಬೇಕು ಎಂದು ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಮನವಿ ಮಾಡಿದ್ದಾರೆ.ಈ ಬಗ್ಗೆ ಶನಿವಾರ ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಈ ಸಂಬಂಧ ಯಾವುದೇ ಮಾಹಿತಿ/ಮಾರ್ಗದರ್ಶನ ಬೇಕಾದಲ್ಲಿ ಕೈಗಾರಿಕಾ ಇಲಾಖೆಯ ಆಯುಕ್ತೆ ಗುಂಜನ್ ಕೃಷ್ಣ ಅವರನ್ನು ದೂರವಾಣಿ ಸಂಖ್ಯೆ 080-22386796 ಅಥವಾ ಮಿಂಚಂಚೆ officeofdicommissioner@gmail.com ಮೂಲಕ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

### ಉದ್ಯಮಲೋಕವು ಮಾನವೀಯತೆಯನ್ನು ಎತ್ತಿ ಹಿಡಿಯಬೇಕಾಗಿದೆ



ವಯನಾಡ್ ದುರಂತದಲ್ಲಿ 412 ಮಂದಿ ಜೀವ ಕಳೆದುಕೊಂಡಿದ್ದು, ಇನ್ನೂ 138 ಜನ ಕಣ್ಮರೆಯಾಗಿದ್ದಾರೆ. ಇಂತಹ ಸಂದರ್ಭದಲ್ಲಿ ಉದ್ಯಮಲೋಕವು ಮಾನವೀಯತೆಯನ್ನು ಎತ್ತಿ ಹಿಡಿಯಬೇಕಾಗಿದೆ ಎಂದು ಅವರು ಹೇಳಿದ್ದಾರೆ. ಉದ್ಯಮಿಗಳು ಸಂತ್ರಸ್ತರ ಪುನರ್ವಸತಿ, ಅಗತ್ಯ ವಸ್ತುಗಳ ಪೂರೈಕೆ, ಮನೆಗಳ ಪುನರ್ನಿರ್ಮಾಣ, ಮೂಲಸೌಕರ್ಯ, ಜೀವನೋಪಾಯಕ್ಕೆ ನೆರವು, ವೈದ್ಯಕೀಯ ನೆರವು ಹೀಗೆ ಯಾವ ರೂಪದಲ್ಲಾದರೂ ಸಹಾಯ ಮಾಡಬಹುದು ಎಂದು ಸಚಿವರು ತಿಳಿಸಿದ್ದಾರೆ. ನೆರೆಯ ರಾಜ್ಯವು ಈಗ ಪ್ರಾಕೃತಿಕ ವಿಕೋಪಕ್ಕೆ ಸಿಲುಕಿ ತತ್ತರಿಸಿದೆ. ಆ ರಾಜ್ಯಕ್ಕೆ ನೆರವು ನೀಡಲು ಕರ್ನಾಟಕ ಸರಕಾರ ಬದ್ಧವಾಗಿದೆ ಎಂದು ಅವರು ವಿವರಿಸಿದ್ದಾರೆ.

## ಸಿದ್ಧರಾಮಯ್ಯ ಬದಲಿ ನಿವೇಶನ ಕೋರಿ ಬರೆದಿದ್ದ ಪತ್ರ ರಿಲೀಸ್

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣ ಸಂಬಂಧ ಸಿದ್ಧರಾಮಯ್ಯ ಅವರು 1984ರಲ್ಲಿ ಶಾಸಕರಾಗಿದ್ದಂತ ಸಂದರ್ಭದಲ್ಲಿ ಬದಲಿ ನಿವೇಶನ ಕೋರಿ, ಮುಡಾ ಅಧ್ಯಕ್ಷರಿಗೆ ಬರೆದಿದ್ದಂತ ಪತ್ರವನ್ನು ಜೆಡಿಎಸ್ ಬಿಡುಗಡೆ ಮಾಡಿದೆ.

ಗುಳಿಗೆ ಸಿದ್ದ ಒಳಗೆ ಮೇಯಿದ ಈ ಮಾತು ನಿಮ್ಮಂಥವರನ್ನು ನೋಡಿಯೇ ಹೇಳಿರಬೇಕು ಸಿದ್ದರಾಮಯ್ಯನವರೇ ನನಗೆ ಒಂದು ನಿವೇಶನವೂ ಇಲ್ಲ. ಯಾವುದೇ ಲೆಟರ್ ಬರೆದಿಲ್ಲ ಎಂದು ಸುಳ್ಳು ಹೇಳುವ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರೇ, ಸಮಾಜವಾದಿ ಮುಖವಾಡ ತೊಟ್ಟು ನೀವು ಮಾಡಿರುವ ಅಕ್ರಮಗಳಿಗೆ ಈ ಲೆಟರ್ ಸಾಕ್ಷಿ ಎಂದಿದೆ. ಬದಲಿ ನಿವೇಶನ ಕೋರಿ ನೀವೇ ಸ್ವತಃ ಬರೆದಿರುವ ಪತ್ರ, ನಿಮ್ಮದೇ ಸಹಿ ಇಷ್ಟು ಸಾಕಲ್ಲವೇ ಇದು ನಿಮಗೆ ಕಪ್ಪು ಚುಕ್ಕೆ ಅಲ್ಲವೇ ದಿನ ಪತ್ರಿಕೆಗಳು, ಮಾಧ್ಯಮಗಳ ಸಂದರ್ಶನಗಳಲ್ಲಿ ನಾನು ಶುದ್ಧ ಹಸ್ತ, ಸಮಾಜವಾದಿ ಎಂದು ಸತ್ಯ ಹರಿಶ್ಚಂದ್ರನಂತೆ ಮಾತಾಡುವ ನಿಮ್ಮ ಅಸಲೀ ಬಂಡವಾಳ ಈಗ ಬಯಲಾಗಿದೆ ಎಂದು ಹೇಳಿದೆ.



**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,031/Gram24ct ₹6,445/Gram22ct ಬೆಳ್ಳಿ: ₹83.10/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಮೂರವಸ್ಥೆಗಳಳಿದುಳಿದಿರವದು ತಾನಭ್ಯಾಸ ಸಂಜನಿತವು

ನಿಜಗುಣರ ಪರಮಾನುಭವ ಬೋಧೆಯ ಮಾತು. ತುರ್ಯಾವಸ್ಥೆಯ ಮುಂದುವರಿದ ವಿವರಣೆ. ಜಾಗ್ರ ಸ್ವಪ್ನ ಸುಪ್ತಿ ಇವು ಪ್ರತಿ ಜೀವಿಗೂ ತೋರುವ ಸಹಜ ಅವಸ್ಥೆಗಳು. ಇವುಗಳ ನಂತರದ ಇದ್ದೂ ಇಲ್ಲದಂತ ವಿಶೇಷ ಅವಸ್ಥೆ ನಾಲ್ಕನೆಯದು ತುರ್ಯ. ಇದು ಎಲ್ಲರಿಗೂ ಸಹಜವಲ್ಲ, ಅಭ್ಯಾಸದಿಂದ ತೋರುವಂಥದ್ದು. ಈ ಅವಸ್ಥೆಯಲ್ಲಿ ಮಾಯಾ ಉಪಾಧಿ ಇದೆ. ಉಪಾಧಿ ಕಳಚಿದಾಗ ಅವಸ್ಥೆಯೂ ಇಲ್ಲ. ಆಗ ತಾನು ತುರ್ಯಾತೀತ. ತೋರುವ ದೇಹ ವಿಷಯ ಎಲ್ಲವನ್ನೂ ಅರಿಯುವ ಅರಿವು ಜಾಗ್ರ ಮುಂತಾದ ನಾಲ್ಕೂ ಅವಸ್ಥೆಗಳಲ್ಲಿ ದೃಶ್ಯವಾಗಿ ತೋರುವವು. ಅವೆಲ್ಲಕ್ಕೂ ತಾನು ಸಾಕ್ಷಿ. ಮಾಯೆಯೂ ಆತ್ಮನಿಗೆ ಸಾಕ್ಷಿ. ಆದ್ದರಿಂದ ತನಗೆ ಈ ಯಾವುಗಳ ಸುಖ ದುಃಖಾದಿಗಳ ಲೇಪವಿಲ್ಲ.

# ಭಾರೀ ಕುತೂಹಲ ಕೆರಳಿಸಿದೆ ಸಿ.ಪಿ.ಯೋಗೇಶ್ವರ್ ದೆಹಲಿ ಭೇಟಿ

## ■ ಮೂಲಗಳ ಪ್ರಕಾರ ನಾಳೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ನೇತೃತ್ವದಲ್ಲಿ ನಡೆಯಲಿರುವ ಸಭೆ

• **ಉದಯವಾಹಿನಿ, ಬೆಂಗಳೂರು**

ಯಾವುದೇ ಕ್ಷಣದಲ್ಲಿ ನಡೆಯಬಹುದಾದ ರಾಮನಗರ ಜಿಲ್ಲೆ ಚನ್ನಪಟ್ಟಣ ಉಪಚುನಾವಣೆ ಸಂಬಂಧ ಮಾಜಿ ಸಚಿವ ಹಾಗೂ ಹಾಲಿ ವಿಧಾನಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ದೆಹಲಿಗೆ ದೌಡಾಯಿಸಿರುವುದು ಕುತೂಹಲಕ್ಕೆ ಎಡೆ ಮಾಡಿಕೊಟ್ಟರು. ಮೂಲಗಳ ಪ್ರಕಾರ ನಾಳೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ನೇತೃತ್ವದಲ್ಲಿ ನಡೆಯಲಿರುವ ಸಭೆಯಲ್ಲಿ ಸಿ.ಪಿ.ಯೋಗೇಶ್ವರ್ ಜೊತೆ ಮಾತುಕತೆ ನಡೆಸುವ ಸಂಭವವಿದೆ.

ಹೀಗಾಗಿಯೇ ಅವರನ್ನು ಪಕ್ಷದ ವರಿಷ್ಠರು ದೆಹಲಿಗೆ ಬರುವಂತೆ ಬುಲಾವ್ ನೀಡಿದ್ದು, ಯೋಗೇಶ್ವರ್ ಅವರ ಮುಂದಿನ ರಾಜಕೀಯ ನಡೆ ರಾಜಕೀಯ ವಲಯದಲ್ಲಿ ಕುತೂಹಲ ಕೆರಳಿಸಿದೆ. ದೆಹಲಿಯಲ್ಲಿ ನಡೆಯಲಿರುವ ಮಾತುಕತೆ ಸಂದರ್ಭದಲ್ಲಿ ಚನ್ನಪಟ್ಟಣ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿಸಬೇಕೇ ಇಲ್ಲವೇ ಜೆಡಿಎಸ್‌ಗೆ ಕ್ಷೇತ್ರವನ್ನು ಬಿಟ್ಟುಕೊಡಬೇಕೇ ಎಂಬ ಬಗ್ಗೆ ಚರ್ಚೆ ನಡೆಯಲಿದೆ ಎಂದು ಗೊತ್ತಾಗಲಿದೆ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ರಾಜೀನಾಮೆಯಿಂದ ತೆರವಾಗಿರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಮೈತ್ರಿ ಪಕ್ಷದಿಂದ ಕಣಕ್ಕಿಳಿಯಲು ಬಯಸಿದ್ದ ಯೋಗೇಶ್ವರ್‌ಗೆ ಮೈತ್ರಿ ನಾಯಕರಿಂದ ಸೂಕ್ತ ಸ್ಪಂದನೆ ಸಿಕ್ಕಿರಲಿಲ್ಲ. ಪಕ್ಷೇತರರಾಗಿ ಕಣಕ್ಕಿಳಿಯುವ ಉದ್ದೇಶದಿಂದ ಬೃಹತ್ ಸಮಾವೇಶ ನಡೆಸಿ ಶಕ್ತಿ ಪ್ರದರ್ಶಿಸಲು ಮುಂದಾಗಿದ್ದರು.



ಉದಯವಾಹಿನಿ ಚಿತ್ರ

**ಮೈತ್ರಿ ಅಭ್ಯರ್ಥಿ ಎಂದು ಘೋಷಣೆ**

ಆದರೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಆಸೆಗೆ ತಣ್ಣೀರು ಎರಚಿದ್ದರು.ಮಗ ನಿಖಿಲ್ ಕುಮಾರಸ್ವಾಮಿಗೆ ಚನ್ನಪಟ್ಟಣ ಉಪಚುನಾವಣೆಯಲ್ಲಿ ಟಿಕೆಟ್ ನೀಡಲು ಅವರು ಲಾಬಿ ನಡೆಸಿದ್ದಾರೆ. ಇದಕ್ಕೆ ಪ್ರತಿಯಾಗಿ ಯೋಗೇಶ್ವರ್ ಅವರು ವಿರೋಧಿಗಳಿಗೆ ಸ್ಪಷ್ಟ ಸಂದೇಶ ಸಾರಲು ತಮ್ಮ ರಾಜಕೀಯ ನಿರ್ಧಾರ ಘೋಷಿಸಲು ಮುಂದಾಗಿದ್ದರು. ರಾಜ್ಯಸಭಾ ಅಧ್ಯಕ್ಷ ಧನ್‌ಕರ್ ವಿರುದ್ಧ ಅವಿಶ್ವಾಸ ನಿರ್ಣಯ ಇದಕ್ಕಾಗಿ

**ಯಾವುದೇ ರೀತಿಯ ಆತುರದ ನಿರ್ಧಾರ ತೆಗೆದುಕೊಳ್ಳದಂತೆ ಅಭಿಮಾನಿಗಳ ಪಾಲಿನ ಸೈನಿಕನಿಗೆ ವರಿಷ್ಠರು ಕಿವಿಮಾತು ಹೇಳಲಿದ್ದಾರೆ. ಏಕೆಂದರೆ ಟಿಕೆಟ್ ಸಿಗದಿದ್ದರೆ ಅವರು ಸ್ವತಂತ್ರ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ಬಗ್ಗೆ ಚಿಂತನೆ ನಡೆಸಿದ್ದರು. ಇದಕ್ಕೆ ಪುಷ್ಟಿ ನೀಡುವಂತೆ ಯೋಗೇಶ್ವರ್ ಅಭಿಮಾನಿ ಬಳಗ ಮತ್ತು ಸಮಾನ ಮನಸ್ಕರ ವೇದಿಕೆ ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ನಮ ಶಾಸಕ ನಮ ಹಕ್ಕು ಹೆಸರಿನಲ್ಲಿ ಸಮಾವೇಶ ನಡೆಸಿದೆ. ಉಪಚುನಾವಣೆಯಲ್ಲಿ ಟಿಕೆಟ್ ಸಿಗದಿದ್ದರೇ ಸ್ವತಂತ್ರ ಸ್ಪರ್ಧೆ ಬಗ್ಗೆ ಅಭಿಪ್ರಾಯ ಸಂಗ್ರಹಿಸಲು ಸಮಾವೇಶ ನಡೆಸಲು ಮುಂದಾಗಿದ್ದ ಯೋಗೇಶ್ವರ್‌ಗೆ ಬಿಜೆಪಿ ಹೈಕಮಾಂಡ್ ದೆಹಲಿಗೆ ಬರುವಂತೆ ಸೂಚನೆ ನೀಡಿದೆ.**

ಸಿ.ಪಿ.ಯೋಗೇಶ್ವರ್ ಬೆಂಬಲಿಗರು ಚನ್ನಪಟ್ಟಣದಲ್ಲಿ ಬೃಹತ್ ಸಮಾವೇಶವನ್ನು ಆಯೋಜನೆ ಮಾಡಿದ್ದರು. ಈ ಕಾರ್ಯಕ್ರಮದ ಮೂಲಕ ವಿರೋಧಿಗಳಿಗೆ ಪಾಠ ಕಲಿಸುವುದು ಸಿಪಿ ಯೇಗೇಶ್ವರ್ ಮಹದಾಸೆಯಾಗಿತ್ತು.ಆದರೆ ಪಕ್ಷದ ಕೇಂದ್ರ ನಾಯಕರು ಕರೆ ನೀಡಿದ್ದ ಬೆನ್ನಲ್ಲೇ ಸಮಾವೇಶ ರದ್ದಾಗಿದೆ. ಇದರಿಂದಾಗಿ ತಮ್ಮ ರಾಜಕೀಯ ನಿರ್ಧಾರ ತೆಗೆದುಕೊಳ್ಳಲು ತರಾತುರಿಯಲ್ಲಿದ್ದ ಸಿಪಿ ಯೇಗೇಶ್ವರ್ ಅವರಿಗೆ ನಿರಾಸೆಯಾಗಿದೆ. ದೆಹಲಿಯಲ್ಲಿ ಸಭೆ ನಡೆಯಲಿದ್ದು, ಬಹುಮತ ಟಿಕೆಟ್ ಯಾರಿಗೆ ಎನ್ನುವುದು ನಿರ್ಧಾರವಾಗಲಿದೆ. ಸಭೆ ಬಳಿಕ ಸಿ.ಪಿ.ಯೋಗೇಶ್ವರ್ ಅವರ ಮುಂದಿನ ನಿರ್ಧಾರ ಗೊತ್ತಾಗಲಿದೆ. ಹೀಗಾಗಿ ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆ ಭಾರೀ ಕುತೂಹಲ ಉಂಟು ಮಾಡಿದೆ.

**ಸ್ವತಂತ್ರ ಸ್ಪರ್ಧೆಗೆ ಚಿಂತನೆ**

**ಬಿಜೆಪಿ-ಜೆಡಿಎಸ್ ಪಾದಯಾತ್ರೆಯಿಂದ ದೂರ ಉಳಿದು ಬಂಡಾಯದ ಬಾವುಟ ಹಾರಿಸಿದ್ದ ಯೋಗೇಶ್ವರ್, ಸದ್ಯದಲ್ಲೇ ಎದುರುಗಾವು ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಲು ನಿರ್ಧರಿಸಿದ್ದರು. ಚನ್ನಪಟ್ಟಣ ಟಿಕೆಟ್ ತಮಗೇ ಸಿಗುತ್ತದೆ ಎಂಬ ಅದಮ್ಯ ವಿಶ್ವಾಸದಲ್ಲದ್ದ ಸಿ.ಪಿ.ಯೋಗೇಶ್ವರ್ ತಾವೇ ಮೈತ್ರಿ ಅಭ್ಯರ್ಥಿ ಎಂದು ಘೋಷಣೆ ಕೂಡ ಮಾಡಿಕೊಂಡಿದ್ದರು.**

### ರಸ್ತೆಯಲ್ಲಿ ಹೋಗುತ್ತಿದ್ದ ಯುವತಿಯನ್ನು ಮುಟ್ಟಿ ಅಸಭ್ಯ ವರ್ತನೆ: ಕಾಮುಕ ಅರೆಸ್ಟ್

• **ಉದಯವಾಹಿನಿ, ಬೆಂಗಳೂರು**

ಇತ್ತೀಚಿನ ದಿನಗಳಲ್ಲಿ ರಾಜಧಾನಿ ಬೆಂಗಳೂರಿನಲ್ಲಿ ಮಹಿಳೆಯರು ಒಂಟಿಯಾಗಿ ಓಡಾಡುವುದೂ ಕಷ್ಟವಾಗಿದೆ. ಕಾಮುಕರ ಹಾವಳಿ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ರಸ್ತೆಯಲ್ಲಿ ಹೋಗುತ್ತಿದ್ದ ವಿದ್ಯಾರ್ಥಿನಿಯೋರ್ವಳನ್ನು ಯುವಕನೊಬ್ಬ ಮುಟ್ಟಿ ಅಸಭ್ಯವಗಿ ವರ್ತಿಸಿದ್ದ ಪ್ರಕರಣ ಸಂಬಂಧ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಜಿ.ಎನ್.ಎಂ. ನರ್ಸಿಂಗ್ ಕಾಲೇಜು ವಿದ್ಯಾರ್ಥಿನಿ ಒಂಟಿಯಾಗಿ ರಸ್ತೆಯಲ್ಲಿ ಹೋಗುತ್ತಿದ್ದಾಗ ಕಾಮುಕನೊಬ್ಬ ಆಕೆಯ ಎದೆಭಾಗವನ್ನು ಮುಟ್ಟಿ ಅಸಭ್ಯವಾಗಿ ವರ್ತಿಸಿ ಪರಾರಿಯಾಗಿದ್ದ. ಜುಲೈ 30ರಂದು ನೆಲಮಂಗಲದ ಬಳಿ ಸೋಲದೇವನಹಳ್ಳಿ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿತ್ತು. ವಿದ್ಯಾರ್ಥಿನಿ ಚೀರಾಡುತ್ತಿದ್ದಂತೆ ಆರೋಪಿ ಬೈಕ್ ಹತ್ತಿ ಪರಾರಿಯಾಗಿದ್ದ. ವಿದ್ಯಾರ್ಥಿನಿ ಸೋಲದೇವನಹಳ್ಳಿ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಇದೀಗ ಆರೋಪಿ ಬಸವರಾಜು ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ. ಕಲಬುರ್ಗಿ ಜಿಲ್ಲೆಯ ಜೇವರ್ಗಿ ಮೂಲದ ಈತ 8ನೇ ಮೈಲಿಯ ಅಪೋಲೋ ಮೆಡಿಕಲ್ ಶಾಪ್‌ನಲ್ಲಿ ಕೆಲಸ ಮಾಡುತ್ತಿದ್ದ. ಚಿಕ್ಕಬಾಣಾವರದ ಮಾರುತಿ ನಗರದಲ್ಲಿ ವಾಸವಾಗಿದ್ದ. ಜುಲೈ 30ರಂದು ರಾತ್ರಿ 9ಗಂಟೆ ಸುಮಾರಿಗೆ ವಿದ್ಯಾರ್ಥಿನಿ ರಸ್ತೆ ಬಳಿ ನಡೆದು ಹೋಗುತ್ತಿದ್ದಾಗ ಏಕಾಏಕಿ ಬೈಕ್ ನಲ್ಲಿ ಬಂದ ಬಸವರಾಜು ವಿದ್ಯಾರ್ಥಿನಿಯ ಎದೆಭಾಗ ಮುಟ್ಟಿದ್ದಾನೆ. ವಿದ್ಯಾರ್ಥಿನಿ ಕಿರುಚಾಡುತ್ತಿದ್ದಂತೆ ಪರಾರಿಯಾಗಿದ್ದ.

### ಕಾಫಿ ಶಾಪ್ ವಾಷ್ ರೂಮ್‌ನಲ್ಲಿ ಮೊಬೈಲ್ ಇಟ್ಟು ವಿಡಿಯೋ ರೆಕಾರ್ಡ್

• **ಉದಯವಾಹಿನಿ, ಬೆಂಗಳೂರು**

ಕಾಫಿ ಶಾಪ್‌ನ ವಾಶ್ ರೂಮ್‌ನಲ್ಲಿ ಮೊಬೈಲ್ ಇಟ್ಟು ಚಿತ್ರೀಕರಣ ಮಾಡುತ್ತಿದ್ದ ಆರೋಪಿಯನ್ನು ಬೆಂಗಳೂರಿನ ಸದಾಶಿವನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಶಿವಮೊಗ್ಗ ಮೂಲದ ಮನೋಜ್ ಬಂಧಿತ ಆರೋಪಿ. ಬೆಂಗಳೂರಿನ ಬಿಇಎಲ್ ರಸ್ತೆಯ ಥರ್ಡ್ ವೇವ್ ಕೆಫೆಯಲ್ಲಿ ಈ ಘಟನೆ ನಡೆದಿದೆ. ಕೆಫೆಯಲ್ಲಿ ಕಾಫಿ ಮೇಕರ್ ಆಗಿದ್ದ ಮನೋಜ್ ತನ್ನ ಮೊಬೈಲ್‌ನ್ನು ಫ್ಲೈಟ್ ಮೋಡ್‌ನಲ್ಲಿ ರೆಕಾರ್ಡಿಂಗ್ ಆನ್ ಮಾಡಿ, ವಾಶ್ ರೂಮ್‌ನಲ್ಲಿ ಇಟ್ಟಿದ್ದ. ಮಹಿಳೆಯೊಬ್ಬರು ವಾಶ್ ರೂಮ್‌ಗೆ ಹೋದಾಗ ಮೊಬೈಲ್ ಇರುವುದು ಪತ್ತೆಯಾಗಿದೆ. ತಕ್ಷಣ ಸದಾಶಿವನಗರ ಪೊಲೀಸ್ ಠಾಣೆಗೆ ವಿಚಾರ ತಿಳಿಸಿದ್ದಾರೆ. ಸ್ಥಳಕ್ಕಾಗಮಿಸಿದ ಪೊಲೀಸರು ಶಿವಮೊಗ್ಗ ಮೂಲದ ಆರೋಪಿ ಮನೋಜ್ ನನ್ನು ಬಂಧಿಸಿದ್ದಾರೆ. ಘಟನೆ ಬಗ್ಗೆ ಮಹಿಳೆಯ ಕ್ಷಮೆ ಕೇಳಿದ ಕಾಫಿ ಶಾಪ್ ಮಾಲೀಕರು, ಇತರ ಸಿಬ್ಬಂದಿಗಳು, ಮನೋಜ್ ನನ್ನು ಕೆಲಸದಿಂದ ವಜಾ ಮಾಡಿದ್ದಾರೆ.

### ಹಿಂದೂಗಳ ಮೇಲೆ ಸಂಘಟಿತ ದಾಳಿ: ನೀರಜ್ ಪಾಟೀಲ್ ಖಂಡನೆ, ಕ್ರಮಕ್ಕೆ ಆಗ್ರಹ

• **ಉದಯವಾಹಿನಿ, ಬೆಂಗಳೂರು**

ಬಾಂಗ್ಲಾದಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ಸಂಘಟಿತ ದಾಳಿಗೆ ಬ್ರಿಟನ್ ಲೇಬರ್ ಪಾರ್ಟಿಯ ರಾಷ್ಟ್ರೀಯ ಕಾರ್ಯಕಾರಿ ಮಂಡಳಿಯ ಸದಸ್ಯರಾಗಿರುವ ಡಾ.ನೀರಜ್ ಪಾಟೀಲ್ ಅವರು ಖಂಡನೆ ವ್ಯಕ್ತಪಡಿಸಿದ್ದು, ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಬೆಂಗಳೂರಿಗೆ ಭೇಟ ನೀಡಿರುವ ನೀರಜ್ ಪಾಟೀಲ್ ಅವರು ವಿದೇಶಾಂಗ ಕಚೇರಿಗೆ ಪತ್ರ ಬರೆದಿದ್ದು, ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಅಲ್ಲದೆ, ಉಚ್ಚಾಟಿತ ಪ್ರಧಾನಿ ಶೇಖ್ ಹಸೀನಾ ಅವರನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸುವಂತೆಯೂ ಒತ್ತಾಯಿಸಿದ್ದಾರೆ. ವಿದೇಶಾಂಗ ಕಾರ್ಯದರ್ಶಿ ಡೇವಿಡ್ ಲ್ಯಾಮಿ ಅವರಿಗೂ ಪತ್ರ ಬರೆದು ಬಾಂಗ್ಲಾದೇಶದಲ್ಲಿರುವ ಶೇ.8ರಷ್ಟು ಹಿಂದೂ ಅಲ್ಪಸಂಖ್ಯಾತರು ಮತ್ತು ಇತರೆ ಜನಾಂಗದ ಜನರಿಗೂ ಸುರಕ್ಷತೆ ಖಚಿತಪಡಿಸುವಂತೆ ಒತ್ತಾಯಿಸಲಾಗಿದೆ ಎಂದು ನೀರಜ್ ಪಾಟೀಲ್ ಅವರು ಹೇಳಿದ್ದಾರೆ. ಬಾಂಗ್ಲಾದಲ್ಲಿ ಶೇಖ್ ಹಸೀನಾ ಸರ್ಕಾರ ಪತನ ನಂತರ ಅಲ್ಪಸಂಖ್ಯಾತರ ಮೇಲೆ 205 ದಾಳಿಗಳು ಅಂಕಿಅಂಶ ಸಲ್ಲಿಕೆ ಈ ಹಿಂದೆ ಬ್ರಿಟನ್ ಸರ್ಕಾರ ಶೇಖ್ ಹಸೀನಾ ಅವರಿಗೆ ಆಶ್ರಯ ನೀಡಲು ನಿರಾಕರಿಸಿದ್ದು, ಆದರೆ, ಹಿಂದೂಸ್ ಫಾರ್ ಲೇಬರ್ ಸದಸ್ಯರು, ಶೇಖ್ ಹಸೀನಾ ಅವರಿಗೆ ಆಶ್ರಯ ನೀಡುವುದು ಬಾಂಗ್ಲಾದೇಶದಲ್ಲಿ ಹಿಂದೂಗಳ ಸುರಕ್ಷತೆಯನ್ನು ಹೆಚ್ಚಿಸುತ್ತದೆ ಎಂದು ಸಲಹೆ ನೀಡಿದ್ದರು. ಹಸೀನಾ ಅವರ ಸಹೋದರಿ ಶೇಖ್ ರೆಹಾನಾ ಅವರು ಬ್ರಿಟಿಷ್ ಪ್ರಜೆಯಾಗಿದ್ದು, ಅವರ ಸೋದರ ಸೊಸೆ ಟುಲಿಪ್ ಸಿದ್ದಿಕ್ ಬ್ರಿಟನ್‌ನಲ್ಲಿ ಆರ್ಥಿಕ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

### ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರಿಂದ ವಿಳಂಬ ನೀತಿ ಅನುಸರಣೆ

• **ಉದಯವಾಹಿನಿ, ಬೆಂಗಳೂರು**



ಮುಡಾ ಹಗರಣ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿ ಕ್ಯೂಷನ್‌ಗೆ ಅನುಮತಿ ನೀಡಲು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ವಿಳಂಬ ನೀತಿ ಅನುಸರಿಸುತ್ತಿರುವ ಹಿನ್ನೆಲೆಯಲ್ಲಿ ನ್ಯಾಯಾಲಯದ ಮೊರೆ ಹೋಗಲು ಭ್ರಷ್ಟಾಚಾರ ವಿರೋಧಿ ಹೋರಾಟಗಾರ ಟಿಜೆ ಅಬ್ರಹಾಂ ಅವರು ಮುಂದಾಗಿದ್ದಾರೆಂದು ತಿಳಿದುಬಂದಿದೆ. ಜುಲೈ 26 ರಂದು ಮಂಜೂರಾತಿ ಕೋರಿ ರಾಜ್ಯಪಾಲರಿಗೆ ಮನವಿ ಸಲ್ಲಿಸಿದ್ದು, ಅದೇ ದಿನ ಸಿಎಂಗೆ ಶೋಕಾಸ್ ನೋಟಿಸ್ ಜಾರಿ ಮಾಡಿದ್ದರು. ನೋಟಿಸ್‌ನಲ್ಲಿ ಸಿಎಂ ವಿರುದ್ಧದ ಆರೋಪಗಳು ಗಂಭೀರ ಸ್ವರೂಪದ್ದು ಎಂಬುದು ಮೇಲ್ನೋಟಕ್ಕೆ ತೋರುತ್ತಿದೆ ರಾಜ್ಯಪಾಲರು ತಿಳಿಸಿದ್ದರು. ಆದರೂ, ಪ್ರಾಸಿಕ್ಯೂಷನ್‌ಗೆ ವಿಳಂಬ ನೀತಿ ಅನುಸರಿಸುತ್ತಿರುವುದೇಕೆ ಎಂಬುದು ತಿಳಿಯುತ್ತಿಲ್ಲ ಎಂದು ಅಬ್ರಹಾಂ ಅವರು ಹೇಳಿದ್ದಾರೆ. ಇದೀಗ ನಾನು ವಕೀಲರೊಂದಿಗೆ ಚರ್ಚೆ ನಡೆಸಿದ್ದು, ಜನಪ್ರತಿನಿಧಿಗಳ ವಿಚಾರಣೆಗಾಗಿ ವಿಶೇಷ ನ್ಯಾಯಾಲಯ ಅಥವಾ ಹೈಕೋರ್ಟ್‌ನಲ್ಲಿ ವಿಶೇಷ ಮೊಕದ್ದಮೆ ಹೂಡಲು ಚಿಂತನೆ ನಡೆಸುತ್ತಿದ್ದೇನೆಂದು ತಿಳಿಸಿದ್ದಾರೆ. ಬಿಎಸ್ ಯಡಿಯೂರಪ್ಪ ವಿರುದ್ಧದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ತೋಕಿ ನಾನು ಮನವಿ ಸಲ್ಲಿಸಿದ್ದೆ. ಆದರೆ, ಮನವಿಯನ್ನು ತಿರಸ್ಕರಿಸಿದ್ದರು. ಆದರೆ, ಈ ಕ್ರಮ ಸರಿಯಲ್ಲ ಎಂದು ಕೋರ್ಟ್ ಮೆಟ್ಟಿಲೇರಿದ್ದೆ. ಇದೀಗ ಮುಡಾ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲು ನಿರ್ಧರಿಸಿದ್ದೇನೆ.

## ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿಸಿದರೆ ಕಾನೂನು ಹೋರಾಟ

• **ಉದಯವಾಹಿನಿ, ಬೆಂಗಳೂರು**

ಮುಡಾ ಪ್ರಕರಣವನ್ನು ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವುದಿಲ್ಲ ಎಂಬ ವಿಶ್ವಾಸವಿದೆ. ಒಂದು ವೇಳೆ ಅನುಮತಿ ನೀಡಿದ್ದೇ ಆದರೆ ಕಾನೂನು ಹೋರಾಟ ನಡೆಸುತ್ತೇವೆಂದು ಗೃಹ ಸಚಿವ ಪರಮೇಶ್ವರ್ ಅವರು ಶನಿವಾರ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ನೀಡುವುದಿಲ್ಲ ಎಂಬ ವಿಶ್ವಾಸವಿದೆ. ಒಂದು ವೇಳೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದರೆ, ಕಾನೂನು ಹೋರಾಟ ನಡೆಸುತ್ತೇವೆ.

ಕಾನೂನು ಹೋರಾಟ ಪ್ರಾರಂಭವಾದ ಬಳಿಕ ಮುಂದಿನ ಬೆಳವಣಿಗೆ ಏನೆಂಬುದನ್ನು ಗಮನಿಸಿ ರಾಷ್ಟ್ರಪತಿಯವರನ್ನು ಭೇಟಿ ಮಾಡಲು ನಿರ್ಧರಿಸಲಾಗುವುದು ಎಂದು ಹೇಳಿದರು.

ಹತ್ತಾರು ಪ್ರಕರಣಗಳು ರಾಜ್ಯಪಾಲರ ಕಚೇರಿಯಲ್ಲಿ ಬಾಕಿ ಉಳಿದಿವೆ. ಯಾವುದಕ್ಕೂ ಕೂಡ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರು ಮುಂದಾಗಿಲ್ಲ.

ಮೂಡಾ ವಿಚಾರದಲ್ಲಿ ತುರಾತುರಿಯಲ್ಲಿ



ಉದಯವಾಹಿನಿ ಚಿತ್ರ

ನೋಟಿಸ್ ನೀಡಿದ್ದಾರೆ. ಜುಲೈ 26ರಂದು ರಾಜ್ಯಪಾಲರಿಗೆ ಟಿ.ಜೆ.ಅಬ್ರಹಾಂ ಮನವಿ ಕೊಡುತ್ತಾರೆ. ಅದೇ ದಿನ ರಾಜ್ಯಪಾಲರು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಪತ್ರ ಬರೆಯುತ್ತಾರೆ. ಮುಖ್ಯ ಕಾರ್ಯದರ್ಶಿಯವರು ಹೋಗಿ ಸ್ಪಷ್ಟನೆ ನೀಡಿ ಬಂದಿದ್ದಾರೆ.

ಅದೇ ದಿನ ಸಂಜೆ ಸಿಎಂ ಅವರಿಗೆ ಶೋಕಾಸ್ ನೋಟಿಸ್ ನೀಡಿದ್ದಾರೆ. ಇದರ ಹಿಂದಿನ ಉದ್ದೇಶ ಏನೆಂಬುದನ್ನು ರಾಜ್ಯಪಾಲರು ಹೇಳಬೇಕಲ್ಲವೇ ಎಂದು ಪ್ರಶ್ನಿಸಿದರು.

ಬಿಜೆಪಿ ನಾಯಕ ಬಿಎಸ್ ಯಡಿಯೂರಪ್ಪ ವಿರುದ್ಧದ ಪೋಕ್ಸೋ ಪ್ರಕರಣದ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಕೋರ್ಟ್ ನೀಡಿರುವ ತಡೆಯಾಜ್ಞೆಯನ್ನು ತೆರವು ಮಾಡಿಸಲು ಅಡ್ವೋಕೇಟ್ ಜನರಲ್‌ಗೆ ತಿಳಿಸಲಾಗಿದೆ. ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

**ರಾಜ್ಯಪಾಲರು ಸಾಮಾನ್ಯ ರಾಜಕಾರಣಿಯೋ ಅಥವಾ ಅಧಿಕಾರಿಯೋ ಅಲ್ಲ. ಸಂವಿಧಾನದ ಮುಖ್ಯಸ್ಥರು. ಅನೇಕ ಪ್ರಕರಣಗಳು ಅವರ ಕಚೇರಿಯಲ್ಲಿ ಬಾಕಿ ಉಳಿದು, ಯಾವುದಕ್ಕೂ ಗಮನ ಹರಿಸದೇ ಏಕಾಏಕಿ ಮುಖ್ಯಮಂತ್ರಿಯವರಿಗೆ ಶೋಕಾಸ್ ನೋಟಿಸ್ ನೀಡಿದ್ದಾರೆ. ಇದರ ಹಿಂದೆ ಷಡ್ಯಂತ್ರ ಇದೆ. ರಾಜ್ಯಪಾಲರ ಮುಂದಿನ ನಡೆ ಏನು ಎಂಬುದನ್ನು ಕಾದು ನೋಡುತ್ತೇವೆ. ಬಿಜೆಪಿ ಕಾಲದಲ್ಲಿ ಸಾಕಷ್ಟು ಹಗರಣಗಳಾಗಿವೆ. ತನಿಖೆಗೆ ಆದೇಶ ಮಾಡಿದ್ದೇವೆ. ವರದಿಯನ್ನು ಆಧರಿಸಿ ಮುಂದಿನ ಕ್ರಮದ ಬಗ್ಗೆ ಸಂಪುಟದಲ್ಲಿ ನಿರ್ಧರಿಸುತ್ತೇವೆ ಎಂದು ತಿಳಿಸಿದರು.**


## ಜನವರಿಯಿಂದ 9 ಸಾವಿರಕ್ಕೂ ಹೆಚ್ಚು ಡೆಂಗ್ಯೂ ಕೇಸ್ ಪತ್ತೆ..!

• **ಉದಯವಾಹಿನಿ, ಬೆಂಗಳೂರು**

ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಜನವರಿಯಿಂದ ಇಲ್ಲಿಯವರೆಗೆ 9,035 ಡೆಂಗ್ಯೂ ಕೇಸ್ ಗಳು ವರದಿಯಾಗಿವೆ ಎಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಆರೋಗ್ಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.ಇತ್ತೀಚಿನ ದಿನಗಳಲ್ಲಿ ಭಾರೀ ಮಳೆಯಾಗುತ್ತಿರುವುದರಿಂದ ಸೊಳ್ಳೆಗಳ ಲಾರ್ವಾಗಳು ಕೊಚ್ಚಿಕೊಂಡು ಹೋಗುತ್ತಿದೆ.ಹೀಗಾಗ ದೈನಂದಿನ ಸರಾಸರಿ ಪ್ರಕರಣಗಳ ಸಂಖ್ಯೆಯಲ್ಲಿ ಇಳಿಕೆಯಾಗುತ್ತಿವೆ ಎಂದು ಹೇಳಿದ್ದಾರೆ.

ಜೂನ್ ತಿಂಗಳಿನಲ್ಲಿ ಪ್ರತೀನಿತ್ಯ 200 ಪಾಸಿಟಿವ್ ಕೇಸ್‌ಗಳು ವರದಿಯಾಗುತ್ತಿದ್ದವು. ಆದರೆ, ಆಗಸ್ಟ್ 1 ರಿಂದ 6 ರ ನಡುವೆ 771 ಪ್ರಕರಣಗಳು ವರದಿಯಾಗಿವೆ. ಕಳೆದ ವಾರ ದೈನಂದಿನ ಸರಾಸರಿ 130ಕ್ಕೆ ಇಳಿದಿದೆ ಎಂದು ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ.

ಡೆಂಗ್ಯೂ ಲಾರ್ವಾಗಳನ್ನು ನಾಶಪಡಿಸುವ ಮೂಲಕ ಹರಡುವಿಕೆಯನ್ನು ತಡೆಯಲು ಬಿಬಿಎಂಪಿ ವ್ಯಾಪ್ತಿಯಲ್ಲಿ 600 ಸ್ಪ್ರೇ ಮತ್ತು ಫಾಗಿಂಗ್ ಯಂತ್ರಗಳನ್ನು ಬಳಸಲಾಗುತ್ತಿದೆ ಎಂದು ಹೇಳಿದ್ದಾರೆ. ಆಗಸ್ಟ್ ಮೊದಲ ಆರು ದಿನಗಳಲ್ಲಿ 179 ಪ್ರಕರಣ ಪತ್ತೆಯಾದ ಹಿನ್ನೆಲೆಯಲ್ಲಿ ಮಹದೇವಪುರ ಡೆಂಗ್ಯೂ ಹಾಟ್‌ಸ್ಪಾಟ್ ಆಗಿಯೇ ಉಳಿದಿದೆ. ಇದೇ ಅವಧಿಯಲ್ಲಿ ದಕ್ಷಿಣ ವಲಯದಲ್ಲಿ 151 ಪ್ರಕರಣಗಳು ವರದಿಯಾಗಿದ್ದು, ಪೂರ್ವ ವಲಯದಲ್ಲಿ 139 ಪ್ರಕರಣಗಳು ವರದಿಯಾಗಿವೆ. ನೀರು ನಿಲ್ಲುವುದು ಸೊಳ್ಳೆಗಳ ಉತ್ಪತ್ತಿಗೆ ಕಾರಣವಾಗಿದೆ. ಹೀಗಾಗಿ ಕೊಳಚೆ ಪ್ರದೇಶಗಳಂತಹ ದುರ್ಬಲ ಪ್ರದೇಶಗಳತ್ತ ಹೆಚ್ಚಿನ ಗಮನ ಹರಿಸಲಾಗಿದೆ ಎಂದು ಹೇಳಿದ್ದಾರೆ.




ಉದಯವಾಹಿನಿ ಚಿತ್ರ

**ಡೆಂಗ್ಯೂ ತಡೆಯಲು ಪಾಲಿಕೆ ಹಲವು ಪ್ರಕರಣಗಳನ್ನು ಕೈಗೊಂಡಿದ್ದು, ಪಾಲಿಕೆ ವ್ಯಾಪ್ತಿಯಲ್ಲಿ 957 ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಇದಲ್ಲದೆ, ಕಾಲೇಜುಗಳ ನರ್ಸಿಂಗ್ ವಿದ್ಯಾರ್ಥಿಗಳು ಸೇರಿ 988 ಸ್ವಯಂಸೇವಕರು ಬಿಬಿಎಂಪಿಯೊಂದಿಗೆ ಕೈಜೋಡಿಸಿ ಕೆಲಸ ಮಾಡುತ್ತಿದ್ದಾರೆಂದು ಮಾಹಿತಿ ನೀಡಿದ್ದಾರೆ.**

## ಮೊಟ್ಟೆ ವಂಚನೆ ವಿಡಿಯೋ ವೈರಲ್: ಸಿಡಿಪಿಒ, ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಸಸ್ಪೆಂಡ್

• **ಉದಯವಾಹಿನಿ, ಬೆಂಗಳೂರು**

ಅಂಗನವಾಡಿ ಮಕ್ಕಳಿಗೆ ನೀಡಲಾಗಿದ್ದ ಮೊಟ್ಟೆಯನ್ನು ತಟ್ಟೆಯಿಂದ ಎತ್ತಿಕೊಳ್ಳುತ್ತಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೊಪ್ಪಳದ ಶಿಶು ಅಭಿವೃದ್ಧಿಕಾರಿ (ಸಿಡಿಪಿಒ) ಅಮಾನತು ಮಾಡಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಸೂಚನೆ ನೀಡಿದ್ದಾರೆ.ಜೊತೆಗೆ ಕೊಪ್ಪಳ ಜಿಲ್ಲಾ ಉಪ ನಿರ್ದೇಶಕರಿಗೆ (ಡಿಡಿ) ನೋಟೀಸ್ ನೀಡಲು ಸೂಚಿಸಿದರು.

ಕೊಪ್ಪಳದ ಗುಂಡೂರು ಗ್ರಾಮದ ಅಂಗನವಾಡಿಯ ಕಾರ್ಯಕರ್ತೆ ಲಕ್ಷ್ಮೀ ಹಾಗೂ ಸಹಾಯಕಿ ಶಹನಾಜ್ ಬೇಗಂ ಅವರ ಮೊಟ್ಟೆ ವಂಚನೆ ವಿಡಿಯೋ ವೈರಲ್ ಆಗಿತ್ತು. ಇದನ್ನು ಗಮನಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ತಕ್ಷಣ ಇಲಾಖೆ ಅಧಿಕಾರಿಗಳಿಗೆ ಫೋನ್ ಮಾಡಿ, ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯನ್ನು ಸಸ್ಪೆಂಡ್ ಮಾಡುವಂತೆ ಸೂಚಿಸಿದರು. ಇಡೀ ಪ್ರಕರಣದ ವರದಿ ನೀಡುವಂತ ಆದೇಶಿಸಿದ್ದಾರೆ. ಯಾರು ತಪ್ಪು ಮಾಡಿದ್ದಾರೋ ಅವರಿಗೆ ಶಿಕ್ಷೆ ಆಗಲೇಬೇಕು. ಕೆಳ ಹಂತದಿಂದ ಇಲಾಖೆಯಲ್ಲಿ ಸುಧಾರಣೆ ತರ ಬೇಕು ಅಂತ ಕಷ್ಟ ಪಡುತ್ತಿದ್ದೇನೆ. ಪೌಷ್ಟಿಕ ಆಹಾರ, ಗುಣಮಟ್ಟದ ಶಿಕ್ಷಣ ಅಂಗನವಾಡಿಯ ಮೂಲ ಉದ್ದೇಶ. ಆದರೆ, ಬಡಮಕ್ಕಳಿಗೆ ಅನ್ಯಾಯ ಆಗಲು ಬಿಡುವುದಿಲ್ಲ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಒಂದು ಮಗುವಿಗೆ ಊಟಕ್ಕೆ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ 8 ರೂ. ಭರಿಸಲಾಗುತ್ತಿದೆ. ಕಳೆದ 9 ವರ್ಷಗಳಿಂದ ಯೂನಿಟ್ ದರ ಏರಿಕೆ ಮಾಡಿಲ್ಲ. ಬೇಳೆಗಳ ಬೆಲೆ ಬಹಳಷ್ಟು ಹೆಚ್ಚಳವಾಗಿದೆ. ಮೊಟ್ಟೆ, ಗುಣಮಟ್ಟದ ಕೆನೆ ಭರಿತ ಹಾಲು ಕೊಡುವುದು ಸಿಎಂ ಸಿದ್ದರಾಮಯ್ಯ ಸರ್ಕಾರದ ಯೋಜನೆ. ಮಕ್ಕಳಿಗೆ ಊಟ ಬಡಿಸುವ ವೇಳೆ ಕಡ್ಡಾಯವಾಗಿ ವೀಡಿಯೋ ಚಿತ್ರೀಕರಣ ಮಾಡಬೇಕು ಎಂದು ತಿಳಿಸಿದರು.

ಚಿತ್ರೀಕರಣದ ಬಳಿಕ ತಾಲ್ಲೂಕು ಮಟ್ಟದಿಂದ ಜಿಲ್ಲಾ ಮಟ್ಟಕ್ಕೆ ವಾಟ್ಸಪ್ ಗ್ರೂಪ್‌ಗಳ ಮೂಲಕ ಅಪ್ ಲೋಡ್ ಆಗಬೇಕು. ಇದೇ ರೀತಿಯ ಪ್ರಕರಣ ಕಳೆದ ಬಾರಿಯೂ ಕೇಳಿಬಂದಿದ್ದು, ನಂತರ ವೀಡಿಯೋ ಚಿತ್ರೀಕರಣ ಕಡ್ಡಾಯ ಮಾಡಿದ್ದೇವೆ. ಇದೀಗ ವೀಡಿಯೋ ಚಿತ್ರೀಕರಣ ಕಡ್ಡಾಯದಿಂದಲೇ ಈ ಪ್ರಕರಣ ಬೆಳಕಿಗೆ ಬಂದಿದೆ ಎಂದರು.



ಕೈಗೆ ಬಂದ ತುತ್ತು ಬಾಯಿಗೆ ಬಂದಿಲ್ಲ ಅನ್ನೋ ಸ್ಥಿತಿ ಮಕ್ಕಳಿಗೆ ಆಗಿದೆ. 69 ಸಾವಿರ ಅಂಗನವಾಡಿಗಳನ್ನ ಕರ್ನಾಟಕ ರಾಜ್ಯದಲ್ಲಿ ನಡೆಸುತ್ತಿದ್ದೇವೆ ಎಲ್ಲೋ ಒಂದು ಕಡೆ ಆದ್ರೆ ಸಂಪೂರ್ಣ ಇಲಾಖೆಗೆ ಕಷ್ಟ ಆಗುತ್ತೆ. ನಿನ್ನೆ ರಾತ್ರಿಯೇ ಈ ಪ್ರಕರಣ ನನ್ನ ಗಮನಕ್ಕೆ ಬಂದಿದ್ದು ತಕ್ಷಣವೇ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವರು ಹೇಳಿದರು.


**ಕಾರ್ಯಕರ್ತೆ, ಸಹಾಯಕಿಯನ್ನ ಈಗಾಗಲೇ ಕೆಲಸದಿಂದ ಸಸ್ಪೆಂಡ್ ಮಾಡಲಾಗಿದ್ದು, ಇಂತಹ ತಪ್ಪನ್ನ ಮಾಡಿದ್ರೆ ಕಡ್ಡಾಯವಾಗಿ ಕೆಲಸದಿಂದ ನಿವೃತ್ತಿಗೊಳಿಸುತ್ತೇನೆ. ಬೇರೆಯವರಿಗೆ ಈ ಪ್ರಕರಣ ಪಾಠ ಆಗಬೇಕು. ಸಿಡಿಪಿಒ ಅಮಾನತು ಮಾಡಿ, ಡಿಡಿಗೆ ನೋಟೀಸ್ ನೀಡಲು ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಸೂಚನೆ ನೀಡಿದ್ದೇನೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.**

## ರೈಲಿನಲ್ಲಿ ಬಂದಿದ್ದು ನಾಯಿ ಕುರಿ ಮಾಂಸನಾ ಇಲ್ಲಿದೆ ಹೈದರಾಬಾದ್ ಲ್ಯಾಬ್ ರಿಪೋರ್ಸ್ಟ್

• **ಉದಯವಾಹಿನಿ, ಬೆಂಗಳೂರು**

ನಗರಕ್ಕೆ ಹೊರ ರಾಜ್ಯಗಳಿಂದ ರೈಲಿನಲ್ಲಿ ಬಂದಂತ ಮಾಂಸದ ಬಗ್ಗೆ ಭಾರೀ ವಿವಾದವೇ ಉಂಟಾಗಿತ್ತು. ನಾಯಿ ಮಾಂಸ ಎಂಬುದಾಗಿ ಅನೇಕರು ವಾದಿಸಿದ್ದರೇ, ಕುರಿ ಮಾಂಸ ಅಂತ ಕೆಲವರು. ರಾಜ್ಯ ಸರ್ಕಾರದ ಸರ್ಕಾರಿ ಲ್ಯಾಬ್ ರಿಪೋರ್ಸ್ಟ್ ಕೂಡ ಕುರಿ ಮಾಂಸ ಎಂಬುದಾಗಿ ಸ್ಪಷ್ಟಪಡಿಸಿತ್ತು.

ಈಗ ಹೈದರಾಬಾದ್ ಲ್ಯಾಬ್ ವರದಿ ಕೂಡ ಬಂದಿದೆ. ಹಾಗಾದ್ರೇ ನಾಯಿ ಅಥವಾ ಕುರಿ ಮಾಂಸನ ಎನ್ನುವ ಬಗ್ಗೆ ಆಹಾರ ಇಲಾಖೆಯ ಆಯುಕ್ತ ಶ್ರೀನಿವಾಸ್ ಅವರು ಈಗಾಗಲೇ



ಉದಯವಾಹಿನಿ ಚಿತ್ರ

ಬೆಂಗಳೂರಿಗೆ ಹೊರ ರಾಜ್ಯಗಳಿಂದ ರೈಲಿನಲ್ಲಿ ಬಂದಂತ ಕುರಿ ಮಾಂಸ ಎಂಬುದಾಗಿ ಲ್ಯಾಬ್ ರಿಪೋರ್ಸ್ಟ್ ವರದಿಯಿಂದ ತಿಳಿದು ಬಂದಿದೆ ಎಂಬುದಾಗಿ ಸ್ಪಷ್ಟಪಡಿಸಿದ್ದರು. ರಾಜಸ್ಥಾನದಿಂದ ವ್ಯಾಪಾರಿ ಅಬ್ದುಲ್ ರಜಾಕ್ ಅವರು ಕುರಿ ಮಾಂಸದಲ್ಲಿ ನಾಯಿ ಮಾಂಸ ಬೆರೆಸಿದ್ದಾರೆ ಎಂಬು ದಾಗಿ ಪುನೀತ್ ಕೆರೆಹಳ್ಳಿ ಆರೋಪಿಸಿದ್ದರು.

ಹೀಗೆ ಬೆಂಗಳೂರಿಗೆ ಬಂದಿದ್ದಂತ ಮಾಂಸವನ್ನು ಆರೋಗ್ಯ ಇಲಾಖೆಯಿಂದ ಲ್ಯಾಬ್ ಪರೀಕ್ಷೆಗೆ ಕಳುಹಿಸಿ ಕೊಡಲಾಗಿತ್ತು. ನಾಯಿ ಮಾಂಸ ಅಲ್ಲ. ಕುರಿ ಮಾಂಸ ಅಂತ ಲ್ಯಾಬ್ ರಿಪೋರ್ಟ್‌ನಲ್ಲಿ ದೃಢಪಟ್ಟಿತ್ತು. ಈಗ ಹೈದರಾಬಾದ್ ಲ್ಯಾಬ್ ವರದಿ ಕೂಡ ಸರ್ಕಾರದ ಕೈ ಸೇರಿದೆ. ಕುರಿ ಮಾಂಸದಲ್ಲಿ ನಾಯಿ ಮಾಂಸವನ್ನು ಮಿಶ್ರಣ ಮಾಡಿದಂತ ಆರೋಪ ಸುಳ್ಳು. ಬ್ಯಾಕ್ಸ್ ನಲ್ಲಿದ್ದ ಮಾಂಸದ ಸ್ಯಾಂಪಲ್ ಪರೀಕ್ಷೆಯನ್ನು ಮಾಡಲಾಗಿದೆ. ಅದರಲ್ಲಿ ಇರೋದು ಕೇವಲ ಕುರಿ ಮಾಂಸವೇ ಹೊರತು ಬೇರೇನೂ ಇಲ್ಲ ಎಂಬುದಾಗಿ ದೃಢಪಡಿಸಿದೆ ಎಂದು ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಇಲಾಖೆ ತಿಳಿಸಿದೆ.

## ಲೀಡರ್ಸ್ ಆಫ್ ರೋಡ್ ಟ್ರಾನ್ಸ್‌ಪೋರ್ಟ್ 2024ರ ಪ್ರಶಸ್ತಿ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದ ಹೆಮ್ಮೆಯ ಕೆ ಎಸ್ ಆರ್ ಟಿಸಿಗೆ ಈಗಾಗಲೇ ಅನೇಕ ರಾಷ್ಟ್ರೀಯ ಪ್ರಶಸ್ತಿಗಳು ಬಂದಿವೆ. ರಾಜ್ಯದ ಪ್ರಯಾಣಿಕರಿಗೆ ಉತ್ತಮ ಸೇವೆ ನೀಡುತ್ತಿರುವಂತ ನಿಗಮಕ್ಕೆ, ಈಗ ಮತ್ತೊಂದು ಗರಿಮೆ ಸಂದಿದೆ. ಅದೇ ದೇಶದ ಲೀಡರ್ಸ್ ಆಫ್ ರೋಡ್ ಟ್ರಾನ್ಸಪೋರ್ಟ್ ಪ್ರಶಸ್ತಿ 2024 ಅನ್ನು ತನ್ನದಾಗಿಸಿಕೊಂಡಿದೆ.

ಈ ಕುರಿತಂತೆ ನಿಗಮದವು ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದು, ಕೆ.ಎಸ್.ಆರ್.ಟಿ.ಸಿ ಗೆ ಟಿವಿ-9 ನೆಟ್ವರ್ಕ್‌ನ ದೇಶದ ಲೀಡರ್ಸ್ ಆಫ್ ರೋಡ್ ಟ್ರಾನ್ಸ ಪೋರ್ಟ್ ಪ್ರಶಸ್ತಿ-2024 ಬಂದಿದೆ. ನಿಗಮವು ಕೈಗೊಂಡಿರುವ ಬ್ರ್ಯಾಂಡಿಂಗ್ ಹಾಗೂ ಮಾನವ ಸಂಪನ್ಮೂಲ ಉಪಕ್ರಮಗಳಿಗಾಗಿ ಟಿವಿ-9 ನೆಟ್ವರ್ಕ ಲೀಡರ್ಸ್ ಆಫ್ ರೋಡ್ ಟ್ರಾನ್ಸಪೋರ್ಟ್ 2024ರ ಪ್ರಶಸ್ತಿಯು ವರ್ಷದ ದೇಶದ ಅತ್ಯುತ್ತಮ ಸಂಸ್ಥೆ ವರ್ಗದಲ್ಲಿ ಲಭಿಸಿರುತ್ತದೆ ಎಂದು ತಿಳಿಸಿದೆ. ಇಂಪೀರಿ ಯಲ್ ಜನಪತ್ ಲೇನ್, ಜನ ಪತ್, ನವದೆಹಲಿ ಇಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಹರ್ಷ ಮಲ್ಹೋತ್ರ,ಮಾನ್ಯ ರಸ್ತೆ ಸಾರಿಗೆ, ಹೆದ್ದಾರಿ ರಾಜ್ಯ ಸಚಿವರು ಮತ್ತು ಸಾಂಸ್ಥಿಕ ವ್ಯವಹಾರಗಳ ಸಚಿವರು, ಭಾರತ ಸರ್ಕಾರರವರು ನಿಗಮಕ್ಕೆ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಡಾ. ನಂದಿನಿದೇವಿ ಕೆ. ಭಾಆಸೇ., ನಿರ್ದೇಶಕರು ಸಿಬ್ಬಂದಿ ಜಾಗೃತ, ಕೆ ಎಸ್ ಆರ್ ಟಿ ಸಿ ರವರು ಪ್ರಶಸ್ತಿಯನ್ನು ಸ್ವೀಕರಿಸಿದರು ಎಂದು ಹೇಳಿದೆ.

# 10 ಸಾವಿರ ಕೋಟಿ ರೂ. ಮೌಲ್ಯದ ಅರಣ್ಯ ಭೂಮಿ ಮರು ವಶ

## ■ ಜೀವಿಶಾಸ್ತ್ರ, ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟ ಸೂಚನೆ ■ ನಿಯಮಾವಳಿ 1878ರ ಸೆಕ್ಷನ್ 9ರಡಿಯಲ್ಲಿ ಅರಣ್ಯ ಘೋಷಣೆ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ನಗರದ ಪೀಣ್ಯ ಜಾಲಹಳ್ಳಿ ಪ್ಲಾಂಟೇಷನ್ ಸರ್ವೆ ನಂ.1 ಮತ್ತು 2ರಲ್ಲಿ 10 ಸಾವಿರ ಕೋಟಿ ರೂ.ಗೂ ಹೆಚ್ಚು ಬೆಲೆ ಬಾಳುವ 599 ಎಕರೆ ಅಧಿಸೂಚಿತ ಅರಣ್ಯ ಪ್ರದೇಶವನ್ನು ಇಲಾಖೆಗೆ ಮರಳಿ ಪಡೆಯಲು ಕ್ರಮ ವಹಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ಸ್ಪಷ್ಟ ಸೂಚನೆ ನೀಡಿದ್ದಾರೆ.

ಈ ಸಂಬಂಧ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಟಿಪ್ಪಣಿ ಕಳುಹಿಸಿರುವ ಸಚಿವರು, ಅರಣ್ಯ ನಿಯಮಾವಳಿ 1878ರ ಸೆಕ್ಷನ್ 9ರಡಿಯಲ್ಲಿ ಅರಣ್ಯ ಎಂದು ಘೋಷಣೆಯಾಗಿ, ಮೈಸೂರು ಮಹಾರಾಜರ ಆಳ್ವಿಕೆಯ ಕಾಲದಲ್ಲಿ ಅಂದರೆ 1896 ಜೂನ್ 11ರಲ್ಲೇ ಗೆಜೆಟ್ ಅಧಿಸೂಚನೆ ಆಗಿರುವ ಸಾವಿರಾರು ಕೋಟಿ ರೂ. ಬೆಲೆ ಬಾಳುವ ಭೂಮಿಯನ್ನು ಕೇಂದ್ರ ಸರ್ಕಾರಿ ಸ್ವಾಮ್ಯದ ಎಚ್.ಎಂ.ಟಿ. ಸಂಸ್ಥೆ ಅಕ್ರಮವಾಗಿ ಸರಕಾರಿ ಇಲಾಖೆಗಳು, ವಿವಿಧ ಸಂಸ್ಥೆಗಳು ಮತ್ತು ಖಾಸಗಿಯವರಿಗೆ ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿದ್ದು, ಕೂಡಲೇ ಒಟ್ಟು 599 ಎಕರೆ ಅರಣ್ಯ ಭೂಮಿಯ ಪೈಕಿ ಎಚ್.ಎಂ.ಟಿ. ನೀಡಲಾಗಿದೆ ಎನ್ನಲಾದ 469ಎಕರೆ 32 ಗುಂಟೆಯಲ್ಲಿ ಖಾಲಿ ಇರುವ 281 ಎಕರೆ ಜಮೀನನ್ನು ಮೊದಲಿಗೆ ವಶಕ್ಕೆ ಪಡೆದು



ಉದಯವಾಹಿನಿ ಚಿತ್ರ

**ಭೂಮಿಯ ವಶಕ್ಕೆ ಕಾನೂನು ಕ್ರಮ**

ನಂತರ ಉಳಿದ ಭೂಮಿಯ ವಶಕ್ಕೆ ಕಾನೂನು ಕ್ರಮ ವಹಿಸುವಂತೆ ಸೂಚನೆ ನೀಡಿದ್ದಾರೆ. ಅರಣ್ಯ ಸಂರಕ್ಷಣಾ ಕಾಯಿದೆ ಸೆಕ್ಷನ್ 64ಎ ಅಡಿಯಲ್ಲಿ ಈ ಹಿಂದೆ ಪ್ರಕ್ರಿಯೆ ನಡೆದಿದ್ದು ಭೂಮಿ ತೆರವಿಗೆ ಆದೇಶ ಆಗಿದ್ದರೂ, ಈವರೆಗೆ ಕ್ರಮ ವಹಿಸದ ಅರಣ್ಯಾಧಿಕಾರಿಗಳ ನಡೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವ ಸಚಿವರು, ಈ ಕುರಿತು ತನಿಖೆ ನಡೆಸಲು ಕ್ರಮ ಕೈಗೊಳ್ಳುವಂತೆಯೂ ಸೂಚನೆ ನೀಡಿದ್ದಾರೆ.

ಅರಣ್ಯ ನಿಯಂತ್ರಣ ಕಾಯಿದೆ 1900ರ ಸೆಕ್ಷನ್ 30ರ ಸಬ್ ಸೆಕ್ಷನ್ (1)ರ ಅಡಿಯಲ್ಲಿ ಯಾವುದೇ ಅರಣ್ಯ ಭೂಮಿಯನ್ನು ದಾನವಾಗಿ ನೀಡಲು ಕಾನೂನಿನಲ್ಲಿ ಅವಕಾಶ ಇರುವುದಿಲ್ಲ. ಯಾವುದೇ ಅರಣ್ಯ ಭೂಮಿಯನ್ನು ಮಂಜೂರಾತಿ ಮಾಡುವ ಮುನ್ನ ಅರಣ್ಯೇತರ ಉದ್ದೇಶಕ್ಕೆ ಪರಿವರ್ತನೆ ಮಾಡಲು ಮೊದಲಿಗೆ ಡಿ ನೋಟಿಫೈ ಮಾಡಿ, ಗೆಜೆಟ್ ಅಧಿಸೂಚನೆ ಮಾಡಬೇಕಾಗಿರುತ್ತದೆ. ಆದರೆ ಸದರಿ ಜಮೀನನ್ನು ಅಂದಿನ ಬೆಂಗಳೂರು ನಗರ ಜಿಲ್ಲಾಧಿಕಾರಿ ಹನುಮಾನ್ ಅವರು 1963ರಲ್ಲಿ ಎಚ್.ಎಂ.ಟಿ.ಗೆ ದಾನಪತ್ರದ ಮೂಲಕ ವರ್ಗಾವಣೆ ಮಾಡಿರುತ್ತಾರೆ ಎನ್ನಲಾಗಿದೆ. ಈ ದಾನಪತ್ರದ ಕುರಿತಂತೆ ಯಾವುದೇ ಗೆಜೆಟ್ ಅಧಿಸೂಚನೆಯೂ ಆಗಿರುವುದಿಲ್ಲ. ಸದರಿ ಭೂಮಿ ಅರಣ್ಯೇತರ ಉದ್ದೇಶಕ್ಕೆ ಡಿನೋಟಿಫೈ ಕೂಡ ಆಗಿರುವುದಿಲ್ಲ ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಶರಾವತಿ ಸಂತ್ರಸ್ತರಿಗೆ ಅರಣ್ಯ ಭೂಮಿ ನೀಡಿದ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪು ಹಾಗೂ ಗೋದಾವರ್ಮನ್ ಮತ್ತು ಭಾರತ ಸರ್ಕಾರದ ಪ್ರಕರಣದಲ್ಲಿ ಸರ್ವೋಚ್ಚ ನ್ಯಾಯಾಲಯದ ಆದೇಶಗಳು ಇದನ್ನು ಸ್ಪಷ್ಟಪಡಿಸುತ್ತವೆ. ಈ ಹಿನ್ನೆಲೆಯಲ್ಲಿ ಪ್ರಸ್ತುತ ಎಚ್.ಎಂ.ಟಿ. ವಶದಲ್ಲಿರುವ ಮತ್ತು ಎಚ್.ಎಂ.ಟಿ. ವಿವಿಧ ಸಂಸ್ಥೆ, ಇಲಾಖೆ, ಖಾಸಗಿ ವ್ಯಕ್ತಿಗಳಿಗೆ ಮಾರಾಟ ಮಾಡಿರುವ ಭೂಮಿ ಅರಣ್ಯವೇ ಆಗಿದೆ.

**ಮಿಗಿಲಾಗಿ ಸದರಿ ಜಮೀನಿನ ಪೈಕಿ ಎಚ್.ಎಂ.ಟಿ. ಮಾರಾಟ ಮಾಡಿರುವ 201 ಎಕರೆಗೆ ಸಂಬಂಧಿಸಿದಂತೆ 64ಎ ಪ್ರಕ್ರಿಯೆಯೂ ಆಗಿದ್ದು, ಆ ಆದೇಶದ ವಿರುದ್ಧ ಎಚ್.ಎಂ.ಟಿ. ಈವರೆಗೆ ಮೇಲ್ಮನವಿಯನ್ನೂ ಸಲ್ಲಿಸಿರುವುದಿಲ್ಲ. ಈ ನಿಟ್ಟಿನಲ್ಲಿ ಎಚ್.ಎಂ.ಟಿ. ವಶದಲ್ಲಿರುವ ಭೂಮಿ, ಮಾರಾಟ ಮಾಡಿರುವ ಭೂಮಿ ಇಂದಿಗೂ ಅರಣ್ಯವೇ ಆಗಿರುತ್ತದೆ ಎಂದು ಅಭಿಪ್ರಾಯಪಟ್ಟಿರುತ್ತಾರೆ.**

**ಸದರಿ ಭೂಮಿಯನ್ನು ಎಚ್.ಎಂ.ಟಿ. ಸಂಸ್ಥೆ ಸರ್ಕಾರಿ ಇಲಾಖೆ/ಸಂಸ್ಥೆಗಳು ಮತ್ತು ಖಾಸಗಿ ವ್ಯಕ್ತಿಗಳಿಗೆ ಮಾರಾಟ ಮಾಡುತ್ತಿರುವುದು ಅಕ್ರಮವಾಗಿರುತ್ತದೆ. ಈ ಸಂಬಂಧ ಸಚಿವ ಸಂಪುಟದ ಗಮನಕ್ಕೂ ತಾರದೆ 2020ರಲ್ಲಿ ಡಿನೋಟಿಫೈ ಮಾಡಲು ಅನುಮತಿ ಕೋರಿ ಸುಪ್ರೀಂಕೋರ್ಟ್‌ಗೆ ಅರಣ್ಯ ಇಲಾಖೆ ಐ.ಎ. ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಇದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ಐ.ಎ.ಯನ್ನು ಹಿಂಪಡೆಯಲು ತಕ್ಷಣ ಕ್ರಮ ಕೈಗೊಳ್ಳುವಂತೆ ಮತ್ತು ತನಿಖೆ ನಡೆಸುವಂತೆ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಈಶ್ವರ ಖಂಡ್ರೆ, ಸ್ಪಷ್ಟ ಸೂಚನೆ ನೀಡಿದ್ದಾರೆ.**

ಅಂತರಾಳದಿಂದ...
EDITORIAL

# ಯೂನುಸ್ ನೇತೃತ್ವದ ಮಧ್ಯಂತರ ಸರಕಾರ: ಬಾಂಗ್ಲಾದ ಮುತ್ಸದ್ದಿನಡೆ

ಒಂದು ದೇಶದಲ್ಲಿ ಸರ್ವಾಧಿಕಾರ ಮತ್ತು ಭ್ರಷ್ಟಾಚಾರದ ವಿರುದ್ಧ ನಡೆಯುವ ಜನಾಂದೋಲನದ ಹೊಣೆಗಾರಿಕೆ ಅಲ್ಲಿನ ಸರಕಾರವನ್ನು ಕೆಳಗಿಳಿಸುವುದರಿಂದ ಮುಗಿಯುವುದಿಲ್ಲ ಅಂದೋಲನವು ಹೊಸದಾಗಿ ಯಾರ ಕೈಗೆ ದೇಶದ ಚುಕ್ಕಾಣಿಯನ್ನು ಒಪ್ಪಿಸುತ್ತದೆ ಎನ್ನುವುದರ ಮೇಲೆ ಜನಕ್ರಾಂತಿಯ ಯಶಸ್ಸು ನಿಂತಿದೆ. ಬಹುತೇಕ ಹೋರಾಟಗಳು ಸರ್ವಾಧಿಕಾರಿಯನ್ನು ಇಳಿಸುವವರೆಗೆ ಸರಿಯಾದ ದಾರಿಯಲ್ಲೇ ಮುನ್ನಡೆಯುತ್ತದೆ. ಆದರೆ ಹೊಸತನ್ನು ಆಯ್ಕೆ ಮಾಡುವ ಬೀದಿ ಅಂದೋಲನ ದಿಕ್ಕು ತಪ್ಪುತ್ತದೆ. ಅನೇಕ ದೇಶಗಳಲ್ಲಿ ಇಂತಹ ಬೀದಿ ಕ್ರಾಂತಿಗಳು ಒಬ್ಬ ಸರ್ವಾಧಿಕಾರಿಯನ್ನು ಕೆಳಗಿಳಿಸಿ ಇನ್ನೊಬ್ಬ ಸರ್ವಾಧಿಕಾರಿಯನ್ನು ಗದ್ದುಗೆಗೇರಿಸುವುದರಲ್ಲಿ ಮುಕ್ತಾಯವಾದದ್ದಿದೆ. ಇಂತಹ ಕ್ರಾಂತಿ ಅಂತಿಮವಾಗಿ ದೇಶವನ್ನು ಇನ್ನಷ್ಟು ಅರಾಜಕತೆಯ ಕಡೆಗೆ ಒಯ್ಯುತ್ತದೆ. ಸದ್ಯಕ್ಕೆ ನೆರೆಯ ಬಾಂಗ್ಲಾದಲ್ಲಿ ಪ್ರಜಾಪ್ರಭುತ್ವದ ಹೆಸರಿನಲ್ಲಿ ಹಸೀನಾ ನಡೆಸಿದ ಸರ್ವಾಧಿಕಾರದ ವಿರುದ್ಧ ಜನರು ಬಂದದ್ದು ಅವರನ್ನು ಅಧಿಕಾರದಿಂದ ಕೆಳಗಿಳಿಸಿದ್ದಾರೆ. ಆಳಿದುಳಿದ ಪ್ರಜಾಸತ್ತೆ ಪತನಗೊಂಡ ಬಳಿಕ ಬಾಂಗ್ಲಾ ಚುಕ್ಕಾಣಿಯನ್ನು ಸೇನೆ ಕೈಗೆತ್ತಿಕೊಳ್ಳುತ್ತದೆಯೇ ಎನ್ನುವ ಆತಂಕ ಎಲ್ಲರನ್ನೂ ಕಾಡಿತ್ತು. ಯಾಕೆಂದರೆ, ಹಸೀನಾ ಸರಕಾರದ ವಿರುದ್ಧದ ಪ್ರತಿಭಟನೆಯ ಯಶಸ್ಸಿನಲ್ಲಿ ಸೇನೆಯ ಪರೋಕ್ಷ ಪಾತ್ರವಿದೆ. ಆರಂಭದಲ್ಲಿ ಹಸೀನಾ ನಿರ್ದೇಶನದಂತೆ ವಿದ್ಯಾರ್ಥಿಗಳ ಪ್ರತಿಭಟನೆಯನ್ನು ಕೋವಿಗಳ ಮೂಲಕ ದಮನಿಸುವ ಪ್ರಯತ್ನ ನಡೆದಿತ್ತು ನೂರಾರು ವಿದ್ಯಾರ್ಥಿಗಳು ಮೃತಪಟ್ಟರು. ಆದರೆ ಪ್ರತಿಭಟನಾಕಾರರು ಹಿಂದೆ ಸರಿಯದೇ ಮುನ್ನುಗ್ಗಿದಾಗ ತನ್ನದೇ ದೇಶದ ಯುವ ಶಕ್ತಿಯ ವಿರುದ್ಧ ಗುಂಡು ಹಾರಿಸಲು ಸೇನೆ ಹಿಂದೇಟು ಹಾಕಿತು. ಹಸೀನಾ ದೇಶವನ್ನೇ ತೊರೆಯುವ ಸ್ಥಿತಿ ನಿರ್ಮಾಣವಾಯಿತು. ಬಾಂಗ್ಲಾದ ರಾಜಕೀಯ ಅರಾಜಕತೆಯಲ್ಲಿ ಸೇನೆಯ ಕೈವಾಡವಿದೆ ಎನ್ನುವ ವದಂತಿ ಈಗಲೂ ಜೀವಂತವಿದೆ.ಪ್ರತಿಭಟನಾ ನಿರತ ಜನರು ಬೀದಿಯಲ್ಲಿ ನಿಂತು ಸರಕಾರದ ವಿರುದ್ಧ ಪ್ರತಿಭಟನೆ ನಡೆಸುವ ಸಂದರ್ಭದಲ್ಲಿ ನಡೆಯುವ ಹಿಂಸಾಚಾರಕ್ಕೂ ಸರಕಾರ ಉರುಳಿದ ಬಳಿಕ ಅರಾಜಕತೆಯ ಸಂದರ್ಭವನ್ನು ಬಳಸಿಕೊಂಡು ದುಷ್ಕರ್ಮಿಗಳು ಬೀದಿಯಲ್ಲಿ ನಡೆಸುವ ಹಿಂಸಾಚಾರಕ್ಕೂ ವ್ಯತ್ಯಾಸವಿದೆ. ಪ್ರಭುತ್ತದ ವಿರುದ್ಧ ಜನತೆ ನಡೆಸುವ ಪ್ರತಿಭಟನೆಗೆ ಜಾಗತಿಕ ಅನುಕಂಪವಿರುತ್ತದೆ. ಆದರೆ ಸರಕಾರ ಉರುಳಿ ದೇಶದಲ್ಲಿ ಅರಾಜಕತೆ ತಾಂಡವವಾಡುವ ಹೊತ್ತಿಗೆ ಬೀದಿಯಲ್ಲಿನ ಪ್ರತಿಭಟನೆ ರೂಪಾಂತರವಾಗುತ್ತದೆ, ದುಷ್ಕರ್ಮಿಗಳು, ಗೂಂಡಾಗಳು, ಉಗ್ರವಾದಿಗಳು ಈ ಸಂದರ್ಭವನ್ನು ದುರುಪಯೋಗಪಡಿಸಿಕೊಳ್ಳುವ ಪ್ರಯತ್ನ ನಡೆಸುತ್ತಾರೆ. ದುರ್ಬಲರ ಮೇಲೆ, ಅಲ್ಪಸಂಖ್ಯಾತರ ಮೇಲೆ, ಮಹಿಳೆಯರ ಮೇಲೆ ದಾಳಿ ನಡೆಸಲು ಇದನ್ನು ಅವಕಾಶವಾಗಿ ಬಳಸಿಕೊಳ್ಳುವ ಸಂದರ್ಭಗಳಿರುತ್ತವೆ. ಬಾಂಗ್ಲಾದಲ್ಲಿ ಹಸೀನಾ ಸರಕಾರ ಉರುಳುತ್ತಿದ್ದಂತೆಯೇ ಇಡೀ ಪ್ರತಿಭಟನೆಗೆ ಬೇರೆಯದೇ ಬಣ್ಣವನ್ನು ನೀಡಲು ಹಲವು ಶಕ್ತಿಗಳು ಪ್ರಯತ್ನಿಸಿದ್ದವು. ವಿದ್ಯಾರ್ಥಿಗಳ ಪ್ರತಿಭಟನೆಗೆ, ಜನಾಂದೋಲನಕ್ಕೆ ಉಗ್ರವಾದದ ಬಣ್ಣವನ್ನು ಬಳಿಯುವ ಪ್ರಯತ್ನವನ್ನು ಹಸೀನಾ ಸರಕಾರ ಮಾಡಿತ್ತು ಸೇನೆಯ ಬಂಡಾಯವಾಗಿಯೂ ಇದನ್ನು ಬಿಂಬಿಸುವ ಪ್ರಯತ್ನ ನಡೆಯಿತು. ವಿದ್ಯಾರ್ಥಿಗಳ ಜನಾಂದೋಲನಕ್ಕೆ ಜಾಗತಿಕ ಅನುಕಂಪ ಸಿಗದಂತೆ ಮಾಡುವ ಹುನ್ನಾರದ ಭಾಗ ಇದಾಗಿತ್ತು. ಪತನಗೊಂಡ ಪ್ರಜಾಸತ್ತೆಯನ್ನು ಪುನರ್ ಸ್ಥಾಪಿಸುವುದು ಸಣ್ಣ ವಿಷಯವೇನೂ ಆಗಿರಲಿಲ್ಲ. ಹಸೀನಾ ಸರಕಾರ ಪತನಗೊಂಡ ಬೆನ್ನಿಗೇ ಪ್ರತಿಭಟನಾಕಾರರು ಪ್ರಜಾಸತ್ತ ಪ್ರನರ್ ಸ್ಥಾಪನೆಯಾಗುವವರೆಗೆ ನಮ್ಮ ಹೋರಾಟ ನಿಲ್ಲುವುದಿಲ್ಲ' ಎಂದು ಘೋಷಿಸಿದ್ದು ಸೇನೆಗೆ ಒಂದು ದೊಡ್ಡ ಎಚ್ಚರಿಕೆಯಾಯಿತು. ಹಿನ್ನೆಲೆಯಲ್ಲಿ ಸೇನೆಯೂ ಬಹಳ ಮುತ್ಸದ್ದಿ ಹೆಜ್ಜೆಗಳನ್ನು ಇಟ್ಟಿದೆ. ಯೂನುಸ್ ಅವರು ಬಾಂಗ್ಲಾದ ಜನ ಮಿಡಿತವನ್ನು ಅರಿತವರು. ಗ್ರಾಮೀಣ ಬದುಕನ್ನು ಹಸನು ಮಾಡಲು ಶ್ರಮಿಸಿದವರು. ಸೇನೆಯು ವಿಶ್ವದ ಮುಂದೆ ಶಾಂತಿ ನೊಬೆಲ್ ಪ್ರಶಸ್ತಿ ಪುರಸ್ಕೃತ ಯೂಕ್ ಅವರನ್ನು ಗುರಾಣಿಯಾಗಿ ಬಳಸಿಕೊಂಡಿದೆ. ಇದೊಂದು ಮುತ್ಸದ್ದಿ ನಡೆಯೇ ಸರಿ. ವಿಶ್ವವು ಮಾನ್ಯ ಮಾಡಿ ಶಾಂತಿನೊಬೆಲ್ ನೀಡಿ ಗೌರವಿಸಿದ ಯೂನುಸ್ ಸದ್ಯದ ಹೊಸ ಬಾಂಗ್ಲಾವನ್ನು ಪ್ರತಿನಿಧಿಸುತ್ತಿರುವುದರಿಂದ, ಇತರ ದೇಶಗಳ ಬಾಯಿ ಕಟ್ಟಿದಂತಾಗಿದೆ. ಮುಖ್ಯವಾಗಿ ಹಸೀನಾ ಸರಕಾರದ ಪರವಾಗಿದ್ದ ಭಾರತ ಸರಕಾರ ಇಕ್ಕಟ್ಟಿನಲ್ಲಿ ಸಿಲುಕಿದೆ. ಅಮೆರಿಕ, ಇಂಗ್ಲೆಂಡ್‌ನಂತಹ ದೇಶಗಳು ಹಸೀನಾಗೆ ಆಶ್ರಯ ನೀಡಲು ನಿರಾಕರಿಸಿದಾಗ, ಭಾರತ ಹಸೀನಾ ಅವರಿಗೆ ಆಶ್ರಯ ನೀಡಲು ಮುಂದಾಯಿತು ಆದರೆ ಈ ಉದಾರತನ ಭಾರತ ಮತ್ತು ಹೊಸ ಬಾಂಗ್ಲಾದ ನಡುವಿನ ಸಂಬಂಧವನ್ನು ಪೂರ್ಣ ಪ್ರಮಾಣದಲ್ಲಿ ಕಡಿಸದಂತೆ ನೋಡಿಕೊಳ್ಳಬೇಕಾದುದು ಅತ್ಯಗತ್ಯವಾಗಿದೆ. ಹಸೀನಾ ಸರಕಾರ ಉರುಳಿದ ಬಳಿಕ ಬಾಂಗ್ಲಾದಲ್ಲಿ ವ್ಯಾಪಕ ಹಿಂಸಾಚಾರಗಳು ನಡೆಯುತ್ತಿವೆ ಎನ್ನುವ ವರದಿಗಳು ಬರುತ್ತಿವೆ. ಸರಕಾರ ಅಸ್ತಿತ್ವದಲ್ಲಿಲ್ಲದ ಹೊತ್ತಿನಲ್ಲಿ ಕಾನೂನು ಸುವ್ಯವಸ್ಥೆ ದುರ್ಬಲವಾಗಿರುವುದರ ಸಂದರ್ಭದ ಲಾಭಗಳನ್ನು ದುಷ್ಕರ್ಮಿಗಳು ತಮ್ಮದಾಗಿಸಿಕೊಳ್ಳುವುದು ಸಹಜ ಯಾವುದೇ ರಾಜಕೀಯ ಅರಾಜಕತೆಯಿಲ್ಲದೆಯೂ ಕಳೆದ ಒಂದು ವರ್ಷದಿಂದ ಬಿಜೆಪಿ ಸರಕಾರದ ಅಡಿಯಲ್ಲಿರುವ ಭಾರತದ ಮಣಿಪುರದಲ್ಲಿ ನೂರಾರು ಮಹಿಳೆಯರು, ಮಕ್ಕಳು ಮೃತರಾಗಿದ್ದಾರೆ. ನೂರಾರು ಚರ್ಚುಗಳು ಧ್ವಂಸವಾಗಿವೆ. ಭಾರತ ಸರಕಾರಕ್ಕೆ ಈ ಹಿಂಸಾಚಾರವನ್ನು ತಡೆಯಲು ಸಾಧ್ಯವಾಗಿಲ್ಲ. ಹೀಗಿರುವಾಗ, ಬಾಂಗ್ಲಾದಲ್ಲಿ ನಡೆಯುತ್ತಿರುವ ತಕ್ಷಣದ ಹಿಂಸಾಚಾರಗಳನ್ನು ತಡೆಯುವುದು ಕಷ್ಟವಾದರೂ, ಅಲ್ಲಿನ ಅಲ್ಪಸಂಖ್ಯಾತ ಸಮುದಾಯಕ್ಕೆ ಪೂರ್ಣ ಪ್ರಮಾಣದ ಭದ್ರತೆಯನ್ನು ನೀಡುವುದು ಬಾಂಗ್ಲಾದ ಮಧ್ಯಂತರ ಸರಕಾರದ ಮೊದಲ ಆದ್ಯತೆಯಾಗಬೇಕು.

**ಚುನಾವಣೆ ನಡೆಯುವವರೆಗೆ ಮಧ್ಯಂತರ ಸರಕಾರದ ಮುಖ್ಯ ಸಲಹೆಗಾರರಾಗಿ ನೊಬೆಲ್ ಪ್ರಶಸ್ತಿ ಪುರಸ್ಕೃತ ಮುಹಮ್ಮದ್ ಯೂನುಸ್ ಅವರು ಪ್ರಮಾಣ ವಚನ ಮಾಡುವ ಮೂಲಕ, ಬಾಂಗ್ಲಾದ ರಾಜಕೀಯ ಬೆಳವಣಿಗೆ ಒಂದು ನಿರ್ಣಾಯಕ ಹಂತ ತಲುಪಿದೆ ಪ್ರಮಾಣ ವಚನದ ಸಂದರ್ಭದಲ್ಲಿ ಬಾಂಗ್ಲಾಕ್ಕೆ ಎರಡನೇ ಸ್ವಾತಂತ್ರ್ಯ ಸಿಕ್ಕಿದೆ ಎಂದು ಅವರು ಘೋಷಿಸಿದ್ದಾರೆ. ಹಿಂಸಾತ್ಮ ಪ್ರತಿಭಟನೆ, ಘರ್ಷಣೆಯಲ್ಲಿ ಮೃತಪಟ್ಟವರಿಗೆ ಶ್ರದ್ಧಾಂಜಲಿ ಸಲ್ಲಿಸಿದ ಮುಹಮ್ಮದ್ ಯೂನುಸ್ ಇವರ ತ್ಯಾಗದಿಂದ ರಾಷ್ಟ್ರಕ್ಕೆ ಎರಡನೇ ಸ್ವಾತಂತ್ರ್ಯ ಸಿಕ್ಕಿದೆ. ಬಾಂಗ್ಲಾದೇಶ ಹೊಸ ವಿಜಯದ ದಿನವನ್ನು ಸೃಷ್ಟಿಸಿದೆ. ಇದೀಗ ಶಾಂತಿ, ಕಾನೂನು ವ್ಯವಸ್ಥೆ ಸ್ಥಾಪನೆಗೆ ನಾವು ಮೊದಲ ಆದ್ಯತೆಯನ್ನು ನೀಡಬೇಕಾಗಿದೆ' ಎಂದು ಕರೆ ನೀಡಿದ್ದಾರೆ.**



# ಮಹಾಭಾರತ
## ಶಾಂತಿಪರ್ವ

• ಹಿಂದಿನ ಸಂಚಿಕೆಯಿಂದ

ಪಾಪಮಾರ್ಗವನ್ನು ಹಿಡಿದಿರುವ ಮನುಷ್ಯನಿಗೆ ಈ ಆಷಾಢಭೂತಿತನದ ಮೂಲಕವಾಗಿ ದ್ರವ್ಯಸಂಪಾದನೆ ಸುಲಭವಾಗಿ ಬಿಡುವುದು. ಇಂತಹ ಮನುಷ್ಯನು ಹಿರಿಯರ, ಹಿತೈಷಿಗಳ ಮಾತನ್ನು ಕೇಳುವುದಿಲ್ಲ. ಇಂತಹ ಪಾಪಿಗೆ ವಿಮೋಚನೆಯ ಭರವಸೆಯಿರುವುದಿಲ್ಲ. ಋಜುತ್ವವುಳ್ಳ ಪುಣ್ಯಪುರುಷನು ಇತರರಲ್ಲಿ ಒಳ್ಳೆಯದನ್ನೇ ಅರಸುವ ಮೂಲಕವಾಗಿ ತನಗಾಗಿ ಒಳ್ಳೆಯದನ್ನು ಸಂಪಾದಿಸಿಕೊಳ್ಳುವನು, ಸುಖಗಳ ನಿಜವಾದ ಸ್ವರೂಪವನ್ನು ವಿವೇಚಿಸಬಲ್ಲವನಾಗಿರುವನು. ಇಂದ್ರಿಯಗಳನ್ನು ಜಯಿಸಿ ಉತ್ಕೃಷ್ಟನೆನಿಸುವನು. ಆದರು ಅವನಿಗೆ ತೃಪ್ತಿಯಿರುವುದಿಲ್ಲ; ತ್ಯಾಗವೆಂಬ ಕಲೆಯಲ್ಲಿ ಪರಿಣತನಾಗುವವರೆಗೂ ವಿಶ್ರಾಂತನಾಗುವುದಿಲ್ಲ. ಆಸೆಯಿಂದ ಮುಕ್ತನಾಗಲು ಅವನಿಗೆ ಜ್ಞಾನವು ಸಹಾಯಮಾಡುವುದು. ಕೊನೆಗೆ ಅವನು ಪ್ರಪಂಚವೆನ್ನುವುದು ಸಾವ್ನಿ ಕ್ಷಣಿಕವಾದ ಒಂದು ವೈಭವಪ್ರದರ್ಶನವೆಂಬುದನ್ನು ಮನಗಂಡು, ಉತ್ಕೃಷ್ಟತೆಯ ಫಲಗಳಾದ ಸ್ವರ್ಗ, ಸುಖ ಇತ್ಯಾದಿಗಳನ್ನೂ ತ್ಯಜಿಸಿ, ಮುಕ್ತನಾಗುವುದಕ್ಕೆ ಪ್ರಯತ್ನಿಸುವನು. ಪಾಪಮಾರ್ಗವನ್ನು ಹಿಡಿದಿರುವ ಮನುಷ್ಯನಿಗೆ ಈ ಆಷಾಢಭೂತಿತನದ ಮೂಲಕವಾಗಿ ದ್ರವ್ಯಸಂಪಾದನೆ ಸುಲಭವಾಗಿ ಬಿಡುವುದು. ಇಂತಹ ಮನುಷ್ಯನು ಹಿರಿಯರ, ಹಿತೈಷಿಗಳ ಮಾತನ್ನು ಕೇಳುವುದಿಲ್ಲ. ಇಂತಹ ಪಾಪಿಗೆ ವಿಮೋಚನೆಯ ಭರವಸೆಯಿರುವುದಿಲ್ಲ. ಋಜುತ್ವವುಳ್ಳ ಪುಣ್ಯಪುರುಷನು ಇತರರಲ್ಲಿ ಒಳ್ಳೆಯದನ್ನೇ ಅರಸುವ ಮೂಲಕವಾಗಿ ತನಗಾಗಿ ಒಳ್ಳೆಯದನ್ನು ಸಂಪಾದಿಸಿಕೊಳ್ಳುವನು, ಸುಖಗಳ ನಿಜವಾದ ಸ್ವರೂಪವನ್ನು ವಿವೇಚಿಸಬಲ್ಲವನಾಗಿರುವನು. ಇಂದ್ರಿಯಗಳನ್ನು ಜಯಿಸಿ ಉತ್ಕೃಷ್ಟನೆನಿಸುವನು. ಆದರು ಅವನಿಗೆ ತೃಪ್ತಿಯಿರುವುದಿಲ್ಲ; ತ್ಯಾಗವೆಂಬ ಕಲೆಯಲ್ಲಿ ಪರಿಣತನಾಗುವವರೆಗೂ ವಿಶ್ರಾಂತನಾಗುವುದಿಲ್ಲ. ಆಸೆಯಿಂದ ಮುಕ್ತನಾಗಲು ಅವನಿಗೆ ಜ್ಞಾನವು ಸಹಾಯಮಾಡುವುದು. ಕೊನೆಗೆ ಅವನು ಪ್ರಪಂಚವೆನ್ನುವುದು ಸಾವ್ನಿ ಕ್ಷಣಿಕವಾದ ಒಂದು ವೈಭವಪ್ರದರ್ಶನವೆಂಬುದನ್ನು ಮನಗಂಡು, ಉತ್ಕೃಷ್ಟತೆಯ ಫಲಗಳಾದ ಸ್ವರ್ಗ, ಸುಖ ಇತ್ಯಾದಿಗಳನ್ನೂ ತ್ಯಜಿಸಿ, ಮುಕ್ತನಾಗುವುದಕ್ಕೆ ಪ್ರಯತ್ನಿಸುವನು.'' ಯುಧಿಷ್ಠಿರ:''ಬಂಧನದಿಂದ ಮುಕ್ತನಾಗಿ ವಿಮೋಚನೆಯನ್ನು ಪಡೆಯಬಯಸುವವನಿಗೆ ಇರಬೇಕಾದ ಗುಣಗಳು ಯಾವುವು? ಭೀಷ್ಮ:ವಿಮೋಚನೆಗೆ ಯೋಗ್ಯನಾಗಿರುವ ಮನುಷ್ಯನು ಇಂದ್ರಿಯಪ್ರಪಂಚವನ್ನು ದಾಟಿ ಬಹುದೂರ ಬಂದಿರುವನು. ಹಸಿವು ಬಾಯಾರಿಕೆಗಳಾಗಲಿ, ದೇಹದ ಇತರ ಸ್ಥಿತಿಗಳಾಗಲಿ ಅವನನ್ನು ಬಾಧಿಸವು. ಕ್ರೋಧ ಅತ್ಯಾಶೆ ತಪ್ಪುಕಲ್ಪನೆ ಇತ್ಯಾದಿಗಳ ಬಲೆಯಲ್ಲಿ ಅವನ ಮನಸ್ಸು ಸಿಕ್ಕಿಕೊಳ್ಳುವುದಿಲ್ಲ. ತನ್ನನ್ನು ತಾನು ಮರೆಯುವ ಅವಿವೇಕವನ್ನು ಅವನು ಮಾಡನು. ಅವನಿಗೆ ರಾಜನ ಅರಮನೆಯೂ ಒಂದೇ, ಬಿದಿರುಕಡ್ಡಿಗಳಿಂದಾಗ ಗುಡಿಸಲೂ ಒಂದೇ. ನೋವು ನಲಿವುಗಳು ಹುಟ್ಟುವುದೇ ಭ್ರಮೆಯಲ್ಲಿ ಎಂದು ಅರಿತಿರುವ ಅವನನ್ನು ಅವು ಬಾಧಿಸುವುದಿಲ್ಲ.

**ಮುಂದುವರಿಯುವುದು...**

# ಹಿಂದೂಗಳ ರಕ್ಷಣೆಗಾಗಿ ಕೇಂದ್ರ ಸರಕಾರ ತಕ್ಷಣ ಧಾವಿಸಬೇಕು!
## ಹಿಂದೂಗಳ ಮೇಲಾಗುತ್ತಿರುವ ಆಕ್ರಮಣಗಳನ್ನು ಖಂಡಿಸಿ ಫ್ರೀಡಂ ಪಾರ್ಕ್‌ನಲ್ಲಿ ಆಂದೋಲನ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯ ಆಗ್ರಹ**

ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಾಗುತ್ತಿರುವ ಆಕ್ರಮಣಗಳನ್ನು ಖಂಡಿಸಿ, ಅಲ್ಲಿನ ಹಿಂದೂಗಳ ರಕ್ಷಣೆ ಗಾಗಿ ಆಗ್ರಹಿಸಿ ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯ ವತಿಯಿಂದ ನಗರದ ಫ್ರೀಡಂ ಪಾರ್ಕ್ ನಲ್ಲಿ ಹಿಂದೂ ರಾಷ್ಟ್ರ ಜಾಗೃತಿ ಆಂದೋಲನವನ್ನು ಆಯೋಜಿಸಲಾಗಿತ್ತು, ಈ ಆಂದೋಲನದಲ್ಲಿ ಹಿಂದೂ ಜನಜಾಗೃತಿ ಸಮಿತಿ, ರಾಷ್ಟ್ರಧರ್ಮ ಸಂಘಟನೆ, ರಾಷ್ಟ್ರ ರಕ್ಷಣಾ ಪಡೆ, ರಾಷ್ಟ್ರೀಯ ಅಸಂಘಟಿತ ಪುರೋಹಿತ ಕಾರ್ಮಿಕ ಪರಿಷತ್, ಫೌಂಡೇಶನ್ ಇಂಡಿಯಾ, ಅಜಾದ್ ಬ್ರಿಗೇಡ್, ಶಿವಘರ್ಜನೆ ಯುವಸೇನೆ, ಸಮಸ್ತ ವಿಶ್ವಧರ್ಮ ರಕ್ಷಾ ಸೇವಾ ಸಂಸ್ಥಾನಂ ಸೇರಿದಂತೆ ಸಮಸ್ತ ಹಿಂದೂ ಸಂಘಟನೆಗಳ ಪ್ರಮುಖರು ಕಾರ್ಯಕರ್ತರು ಉಪಸ್ಥಿತರಿದ್ದರು.

ವೇಳೆ ಹಿಂದೂ ಜನಜಾಗೃತಿ ಸಮಿತಿಯ ಸೌ. ಭವ್ಯ ಗೌಡ ಇವರು ಮಾತನಾಡಿ, ಬಾಂಗ್ಲಾದೇಶದಲ್ಲಿ ಇತ್ತೀಚಿಗೆ ಮೀಸಲಾತಿಯಿಂದ ಪ್ರಾರಂಭವಾದ ವಿದ್ಯಾರ್ಥಿಗಳ ಪ್ರತಿಭಟನೆಯು ಹಿಂಸಾಚಾರಕ್ಕೆ ತಿರುಗಿ ಅಲ್ಲಿನ ಪ್ರಧಾನಮಂತ್ರಿಯಾಗಿದ್ದ ಶೇಖ್ ಹಸೀನಾ ಇವರು ತಮ್ಮ ಸ್ಥಾನಕ್ಕೆ ರಾಜಿನಾಮೆ ನೀಡಬೇಕಾಯಿತು. ಈ ಇಡೀ ಬಾಂಗ್ಲಾದೇಶದಲ್ಲಿ ಅರಾಜಕತೆ ನಿರ್ಮಾಣವಾಗಿದೆ, ಸರಕಾರದ ವಿರುದ್ಧದ ಪ್ರತಿಭಟನೆಯಲ್ಲಿ ಅಲ್ಲಿನ ಹಿಂದೂಗಳನ್ನು ಗುರಿಯಾಗಿಸಲಾಗುತ್ತಿದೆ.

ಇಡೀ ಮನುಕುಲ ಕೇಳುಕಂಡರಿಯದ ರೀತಿಯಲ್ಲಿ ಇಸ್ಲಾಮಿಕ್ ಜಿಹಾದಿಗಳು ಭಯಾನಕವಾಗಿ ಹಿಂದೂ ವೃದ್ಧರು, ಸ್ತ್ರೀಯರು ಮಕ್ಕಳ ಮೇಲೆ ಅತ್ಯಾಚಾರ ಮಾಡಿದ್ದಾರೆ. 1971ರಲ್ಲಿ ಬಾಂಗ್ಲಾದೇಶವು ಸ್ವಾತಂತ್ರ್ಯಗೊಂಡಾಗ ಅಲ್ಲಿನ ಮಿಲಿಟರಿ ಇಸ್ಲಾಮಿಕ್ ಆಕ್ರಮಣಕಾರರು ಲಕ್ಷಾಂತರ ಹಿಂದೂಗಳನ್ನು ಹತ್ಯೆ ಮಾಡಿದ್ದರು. 2024ನಲ್ಲಿ ಅದೇ ರೀತಿ ಹಿಂದೂಗಳ ಮೇಲಿನ ಆಕ್ರಮಣವು ಅತ್ಯಂತ ಅಪಾಯಕಾರಿಯಾಗಿದೆ. ದುರ್ದೈವವೆಂದರೆ ಗಾಜಾಪಟ್ಟಿಯಲ್ಲಿ ಪ್ಯಾಲೆಸ್ಟೈನ್‌ನಲ್ಲಿ ಏನಾದರೂ ಘಟಿಸಿದರೆ ಅದರ ಬಗ್ಗೆ ಇಂದು ವಿಶ್ವಸಂಸ್ಥೆಯಲ್ಲಿ ಚರ್ಚಿಸಲಾಗುತ್ತದೆ, ಆದರೆ ಬಾಂಗ್ಲಾದೇಶದ ಹಿಂದೂಗಳ ಮೇಲಾಗುತ್ತಿರುವ ಆಕ್ರಮಣಗಳ ಬಗ್ಗೆ ಜಗತ್ತಿನಲ್ಲಿ ಯಾರೂ ಧ್ವನಿಯೆತ್ತುವುದಿಲ್ಲ, ಅಲ್ಪಸಂಖ್ಯಾತ ಹಿಂದೂಗಳು, ದಲಿತರ ಮೇಲೆ ದೌರ್ಜನ್ಯ ನಡೆದಿದ್ದರೂ ಸಹ ಯಾರೂ ಮಾತನಾಡಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ, ಹಾಗಾಗಿ ಕೇಂದ್ರ ಸರಕಾರವು ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣವೇ ಬಾಂಗ್ಲಾದೇಶದ ಹಿಂದೂಗಳ ರಕ್ಷಣೆಗೆ ಧಾವಿಸಬೇಕು, ಅವರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ ಮಾಡಬೇಕು, ಈ ಅಕ್ರಮಣದಲ್ಲಿ ತಮ್ಮ ಮನೆ, ಆಸ್ತಿ-ಪಾಸ್ತಿಗಳನ್ನು ಕಳೆದು ಕೊಂಡಿರುವ ಹಿಂದೂಗಳಿಗೆ ವಸತಿಯನ್ನು ಕಲ್ಪಿಸಿ ಅವರಿಗೆ ಪರಿಹಾರವನ್ನು ಒದಗಿಸಬೇಕು, ಹಿಂದೂಗಳ ರಕ್ಷಣೆ ಮಾಡಲು ಅಲ್ಲಿನ ಮಿಲಿಟರಿಗೆ ಕಠಿಣ ಆದೇಶವನ್ನು ಹೊರಡಿಸಬೇಕು, ಬಾಂಗ್ಲಾದೇಶೀ ಹಿಂದೂಗಳ ಮೇಲಾಗಿರುವ ಅತ್ಯಾಚಾರದ ಕುರಿತು ವಿಶೇಷ ನ್ಯಾಯಾಂಗ ತನಿಖೆ ನಡೆಸಿ ಆಕ್ರಮಣಕಾರರಿಗೆ ಕಠಿಣ ಶಿಕ್ಷೆ ವಿಧಿಸಬೇಕು, ಬಾಂಗ್ಲಾದೇಶೀ ಅಲ್ಪಸಂಖ್ಯಾತ ಹಿಂದೂಗಳ ರಕ್ಷಣೆಗಾಗಿ ವಿಶೇಷವಾದ ಹಿಂದೂ ಕಲ್ಯಾಣ ನಿಧಿಯನ್ನು ಸ್ಥಾಪಿಸಬೇಕು, ಭಾರತದಲ್ಲಿ ಅಲ್ಪಸಂಖ್ಯಾತ ಆಯೋಗವಿರುವಂತೆ ಅಲ್ಪಸಂಖ್ಯಾತರ ಆಯೋಗದ ಸ್ಥಾಪನೆ ಮಾಡಿ ಅಲ್ಲಿನ ಹಿಂದೂಗಳಿಗೆ ನ್ಯಾಯವನ್ನು ನೀಡಬೇಕು, ಇದಕ್ಕಾಗಿ ಭಾರತ ಸರಕಾರವು ಬಾಂಗ್ಲಾದೇಶ ಸರಕಾರದ ಮೇಲೆ ಒತ್ತಡ ಹೇರಬೇಕು ಮತ್ತು ವಿಶ್ವಸಂಸ್ಥೆಯಲ್ಲಿ ಈ ವಿಷಯವನ್ನು ಮಂಡನೆ ಮಾಡಿ ವಿಶ್ವಸಂಸ್ಥೆಯ ವಿಶೇಷ ನಿಯೋಗವು ಬಾಂಗ್ಲಾದೇಶಕ್ಕೆ ಭೇಟಿ ನೀಡಿ ಅಲ್ಲಿನ ಪೀಡಿತ ಹಿಂದೂ ಕುಟುಂಬಕ್ಕೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಶ್ರೀ. ಸಂತೋಷ್ ಕೆಂಚಾಂಬಾ ಇವರು ಮಾತನಾಡಿ, ಭಾರತದಲ್ಲಿರುವ ತಥಾಕಥಿತ ಸೆಕ್ಯುಲರ್ ವಾದಿಗಳು, ಬುದ್ಧಿಜೀವಿಗಳು ಟರ್ಕಿಯಲ್ಲಿ ಗಲಾಟೆಯಾದರೆ ವಿರುದ್ಧ ಧ್ವನಿಯೆತ್ತುತ್ತಾರೆ, ಪ್ಯಾಲಿಸ್ಟೈನ್‌ನಲ್ಲಿ ಭಯೋತ್ಪಾದಕರನ್ನು ಹತ್ಯೆ ಮಾಡಿದರೆ ಧ್ವನಿಯೆತ್ತುತ್ತಾರೆ, ಆದರೆ ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತ ಹಿಂದೂಗಳ ಮೇಲಾಗುತ್ತಿರುವ ಆಕ್ರಮಣಗಳ ಬಗ್ಗೆ ಯಾರೂ ತುಟಿಬಿಚ್ಚುವುದಿಲ್ಲ, ಇದು ಅವರ ಢೋಂಗಿ ಮಾನಸಿಕತೆಯನ್ನು ತೋರಿಸುತ್ತದೆ, ಡಾ. ಬಿ.ಆರ್ ಬಾಬಾ ಸಾಹೇಬ್ ಅಂಬೇಡ್ಕರ್ ದೇಶವಿಭಜನೆಯ ಸಮಯದಲ್ಲಿ ಒಟ್ಟು ಜನಸಂಖ್ಯೆಯ ವಿನಿಮಯದ ಬಗ್ಗೆ ಹೇಳಿದ್ದರು, ಅದು ಸಾಧ್ಯವಾಗಿದ್ದರೆ ಇಂದು ಈ ನೋವನ್ನು ಅನುಭವಿಸುವ ಪರಿಸ್ಥಿತಿ ಬರುತ್ತಿರಲಿಲ್ಲ, ಪ್ರಪಂಚದಾದ್ಯಂತ ಯಹೂದಿಗಳಿಗಿಂತ ಹೆಚ್ಚು ಅತ್ಯಾಚಾರ ಹಿಂದೂಗಳ ಮೇಲಾಗಿದೆ, ಕೇಂದ್ರ ಸರಕಾರ ಕೂಡಲೇ ಎಚ್ಚೆತ್ತುಕೊಂಡು ಬಾಂಗ್ಲಾದ ಹಿಂದೂಗಳ ನೆರವಿಗೆ ಮುಂದಾಗಬೇಕು, ಮುಂದೆ ಸ್ಥಿತಿ ಭಾರತದಲ್ಲಿಯೂ ನಿರ್ಮಾಣವಾಗುವ ಸಾಧ್ಯತೆ ಇರುವುದರಿಂದ ಎಲ್ಲಾ ಹಿಂದೂಗಳು ಸಂಘಟಿತರಾಗಬೇಕು' ಎಂದು ಕರೆ ನೀಡಿದರು.

# ರುಚಿಕಾ-ನಿಖಿತಾ ಭಟ್ ಸೋದರಿಯರ ಕಥಕ್ ರಂಗಮಂಚ್-ನೃತ್ಯ ದರ್ಪಣ್ ಅರ್ಪಣೆ



ವೈ.ಕೆ. ಸಂಧ್ಯಾಶರ್ಮ
• ಉದಯವಾಹಿನಿ, ವಿಶೇಷ

ಖ್ಯಾತ ಕಥಕ್ ನೃತ್ಯಶಾಲೆ ನೃತ್ಯ ದರ್ಪಣ್ ಅಕಾಡೆಮಿ, ವರ್ಷ ಪೂರ್ತಿ ನಿರಂತರ ಸೃಜನಾತ್ಮಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿರುವುದು ಸಂಸ್ಥೆಯ ಕ್ರಿಯಾಶೀಲತೆಗೆ ಹಿಡಿದ ಕನ್ನಡಿ. ಇದರ ಹಿಂದಿನ ಪ್ರೇರಕಶಕ್ತಿಯಾದ ಪ್ರಯೋಗಶೀಲ ಕಥಕ್ ನೃತ್ಯಗಾರ್ತಿ ವಿದುಷಿ ವೀಣಾ ಆರ್. ಭಟ್, ಕಳೆದ ಒಂದೂವರೆ ದಶಕದಿಂದ ನೃತ್ಯದರ್ಪಣ್ -ಕಥಕ್ ನೃತ್ಯಶಾಲೆಯ ಆರ್ಟಿಸ್ಟಿಕ್ ಡೈರೆಕ್ಟರ್ ಆಗಿ ಉತ್ತಮ ಗುರುವಾಗಿ, ತಮ್ಮ ಬದ್ಧತೆಯಿಂದ ಜನಪ್ರಿಯತೆ ಪಡೆದಿದ್ದು, ನೂರಾರು ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರಾಗಿ ಯಶಸ್ವಿಯಾಗಿ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದಾರೆ.

ಇವರ ಮಾರ್ಗದರ್ಶನದಲ್ಲಿ, ನುರಿತ ಗರಡಿಯಲ್ಲಿ ರೂಪು ತಳೆದಿರುವ ಇವರ ಪುತ್ರಿಯರು ಹಾಗೂ ಶಿಷ್ಯೆಂದಿರೂ ಆಗಿರುವ ಕು. ರುಚಿಕಾ ಭಟ್ ಮತ್ತು ಕು. ನಿಖಿತಾ ಭಟ್ ಬಾಲ್ಯದ ಎಳೆಯ ವಯಸ್ಸಿನಿಂದಲೇ ನೃತ್ಯದ ಬಗ್ಗೆ ಒಲವು ಬೆಳೆಸಿಕೊಂಡಿದ್ದು, ಪ್ರಖ್ಯಾತ ಕಥಕ್ ನೃತ್ಯಗುರುಗಳಾದ ದುರ್ಗಾ ಆರ್ಯ, ರುಮೆಲಾ ಮುಖ್ಯೋಪಾಧ್ಯಾಯ ಅವರಲ್ಲಿ ನೃತ್ಯಾಭ್ಯಾಸ ಮಾಡಿ ಪ್ರಗಥಾಭ್ಯಾಸವನ್ನು, ತಾಯಿ ಹಾಗೂ ಗುರುಗಳಾದ ವೀಣಾ ಭಟ್ ಅವರಲ್ಲಿ ಕಳೆದ ಒಂದು ದಶಕಗಳಿಂದ ಬಹು ಪರಿಶ್ರಮ-ಬದ್ಧತೆಯಿಂದ ವಿದ್ಯಾರ್ಜಿಸುತ್ತಿದ್ದಾರೆ. ವಿದುಷಿ ವೀಣಾ ಭಟ್ ಮತ್ತು ರಾಮಚಂದ್ರ ಭಟ್ ಅವರ ಪುತ್ರಿಯರಾದ ಈ ಬಹುಮುಖ ಪ್ರತಿಭಾನ್ವಿತ ಸೋದರಿಯರು ಈಗಾಗಲೇ ದೇಶ-ವಿದೇಶಗಳಲ್ಲಿ ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿ ಮೆಚ್ಚುಗೆ ಗಳಿಸಿದ್ದಾರೆ. ಪ್ರಸ್ತುತ ಇವರೀರ್ವರು ಇದೇ ತಿಂಗಳ 28 ಭಾನುವಾರ ಸಂಜೆ 5.30 ಕ್ಕೆ ಜಯನಗರದ ವಿವೇಕ ಆಡಿಟೋರಿಯಂ ಯುವಪಥದಲ್ಲಿ ವಿದ್ಯುಕ್ತವಾಗಿ ತಮ್ಮ ಕಥಕ್ ರಂಗಮಂಚ್ ಆಗಮನವನ್ನು ನೆರವೇರಿಸಿ ಕೊಳ್ಳಲಿದ್ದಾರೆ. ಅವರ ಸುಮನೋಹರ ನೃತ್ಯವೈಭವವನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಸುಸ್ವಾಗತ. ಬಹುಮುಖ ಪ್ರತಿಭೆಯ ಈ ಸೋದರಿ ಯರಲ್ಲಿ ಹಿರಿಯಳಾದ ರುಚಿಕಾ ಭಟ್ ನೃತ್ಯಸಾಧನೆಯ ಜೊತೆಗೆ ಫ್ಯಾಷನ್ ಕ್ಷೇತ್ರ ದಲ್ಲೂ ಸಾಕಷ್ಟು ಕೆಲಸ ಮಾಡಿದ್ದು, ಫ್ಯಾಷನ್ ಮತ್ತು ವಿನ್ಯಾಸ ವಿಷಯಗಳಲ್ಲಿ ಪರ್ಲ್ ಅಕಾಡೆಮಿ ಮತ್ತು ಬರ್ಮಿಂಗ್ ಹ್ಯಾಮ್ ಸಿಟಿ ಯುನಿವರ್ಸಿಟಿಯಿಂದ ಪದವಿಗಳನ್ನು ಪಡೆದಿರುವ ಗರಿಮೆ ಅವಳದು. ಕು. ನಿಖಿತಾ ಭಟ್ ಕೂಡ ಸೋದರಿಯಂತೆ ಬಹುಮುಖ ಪ್ರತಿಭೆಯ ವ್ಯಕ್ತಿತ್ವ ಹೊಂದಿದವಳು.


ಉದಯವಾಹಿನಿ ಚಿತ್ರ

ಕಳೆದ 10 ವರ್ಷಗಳಿಂದ ಕಥಕ್ ನೃತ್ಯಕಲಿಕೆ ಅವಳ ಪರಿಶ್ರಮದ ಪ್ರತೀಕವಾಗಿದೆ. ಈ ಇಪ್ಪತ್ತೆರಡರ ತರುಣಿ ಓದಿನಲ್ಲೂ ಬುದ್ಧಿವಂತೆ. ಬಿ.ಎಸ್ಸಿ ಪದವಿ (ನೇತ್ರಶಾಸ್ತ್ರ)ಯಲ್ಲಿ ಮೊದಲ ರ್‍ಯಾಂಕ್ ಪಡೆದುದಲ್ಲದೆ, ತಾನು ವಿದ್ಯಾಭ್ಯಾಸ ಮಾಡಿದ ಆಪ್ಟೋಮಿಟ್ರಿ ಶಾಲೆ ನೇತ್ರಧಾಮದ ಬೆಸ್ಟ್ ಔಟ್ ಗೋಯಿಂಗ್ ವಿದ್ಯಾರ್ಥಿನಿಯಾಗಿ ಗುರುತಿಸಿ ಕೊಂಡ ಅಗ್ಗಳಿಕೆ ಅವಳದು. ಕಥಕ್ ನೃತ್ಯ ಕಲಿಕೆಯಲ್ಲೂ ನಿಖಿತಾ ಮುಂದು.

ಅನೇಕ ಹಿರಿಯ ಕಥಕ್ ತಜ್ಞರ ಕಾರ್ಯಾಗಾರಗಳಲ್ಲಿ ಅನುಭವ ಪಡೆದ ಇವಳಿಗೆ ಕಥಕ್‌ನಲ್ಲಿ ಹಿರಿಯ ಡಿಪ್ಲೊಮಾ ಪದವಿ ಲಭ್ಯ.

ಶಾಲಾ-ಕಾಲೇಜಿನ ನೃತ್ಯ ಸ್ಪರ್ಧೆಗಳಲ್ಲಿ ಅನೇಕ ಬಹುಮಾನಗಳನ್ನು ಪಡೆದಿರುವ ಇವಳು ಈಗಾಗಲೇ ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿರುವ ಜೊತೆಗೆ ನೃತ್ಯ ದರ್ಪಣದ ತಾಳ-ತರಂಗ್ ಇನ್ನಿತರ ನೃತ್ಯೋತ್ಸವಗಳಲ್ಲಿ ಭಾಗಿಯಾಗಿ ನೃತ್ಯದ ವಿವಿಧ ಆಯಾಮಗಳನ್ನು ಅರಿಯುವ ಪ್ರಯತ್ನ ಮಾಡುತ್ತಿದ್ದಾಳೆ. ಅಕ್ಕ-ತಂಗಿಯರಿಬ್ಬರಿಗೂ ನೃತ್ಯಕ್ಷೇತ್ರದಲ್ಲಿ ಸಾಧನೆ ಮಾಡುವ ಆಕಾಂಕ್ಷೆ.

# ರಾಜಭವನ ವೀಕ್ಷಣೆಗೆ ಅವಕಾಶ ನೀಡಲು ಮನವಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಪಾರಂಪರಿಕ ಕಟ್ಟಡವಾಗಿರುವ ರಾಜಭವನವನ್ನು ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಮಾಡಿಕೊಡಿವಂತೆ ಕೋರಿ ಜಯಪ್ರಕಾಶ್ ನಾರಾಯಣ್ ವಿಚಾರ ವೇದಿಕೆಯು ವಿಧಾನ ಮಂಡಲದ ಅರ್ಜಿ ಸಮಿತಿಯ ಮೊರೆ ಹೋಗಿದೆ.

ರಾಜಭವನವು ಮೈಸೂರು ಅರಮನೆಗಿಂತ ಹಿಂದೆಯೇ ನಿರ್ಮಿತಗೊಂಡು ಪಾರಂಪರಿಕ ಕಟ್ಟಡ ಎನಿಸಿದೆ. ರಾಜಾಡಳಿತ ಮುಗಿದು ಪ್ರಜಾಪ್ರಭುತ್ವ ವ್ಯವಸ್ಥೆ ಬಂದ ನಂತರ ಅರಮನೆಯನ್ನು ಸಾರ್ವಜನಿಕ ವೀಕ್ಷಣೆಗೆ ಅನುವು ಮಾಡಿಕೊಟ್ಟು ಪ್ರವಾಸಿ ತಾಣವಾಗಿಯೂ ಮಾರ್ಪಡಿಸಲಾಗಿದೆ. ಆದರೆ, ರಾಜಭವನವನ್ನು ರಾಜ್ಯಪಾಲರ ಅಧಿಕೃತ ನಿವಾಸವನ್ನಾಗಿ ಮಾಡಿ ಈಗಲೂ ಕಾರ್ಯಾಚರಿಸಲಾಗುತ್ತಿದೆ. ಆದರೂ ಮಾಜಿ ರಾಜ್ಯಪಾಲ ವಿ.ಎಸ್. ರಮಾದೇವಿಯವರು ರಾಜಭವನವನ್ನು 'ಜನಭವನ'ವನ್ನಾಗಿ ಬದಲಾಯಿಸಿ ಜನಮನ್ನಣೆ ಗಳಿಸಿದ್ದರು. ಇದರಿಂದ ರಾಜಭವನದ ಕಟ್ಟಡದ ಸೌಂದರ್ಯ ಆಸ್ವಾದಿಸುವ, ಪಾರಂಪರಿಕ ಕಟ್ಟಡ ಬಗ್ಗೆ ವಾಸ್ತುಶಿಲ್ಪ ಕ್ಷೇತ್ರದ ವಿದ್ಯಾರ್ಥಿಗಳಿಗೆ ಅಧ್ಯಯನಕ್ಕಾಗಿ ಆಕರ ಮಾಹಿತಿ ಪಡೆಯಲು ಸಾಧ್ಯವಿದೆ. ಹಾಗಾಗಿ ರಾಜಭವನವನ್ನು ನಾಗರಿಕರ ವೀಕ್ಷಣೆಗೆ ಅವಕಾಶ ಮಾಡಿಕೊಡಬೇಕು ಎಂಬುದಾಗಿ ವೇದಿಕೆಯ ಅಧ್ಯಕ್ಷ ಬಿ.ಎಂ.ಶಿವಕುಮಾರ್ ಅರ್ಜಿ ಸ'ಮಿತಿಗೆ ಮನವಿ ಮಾಡಿದ್ದಾರೆ.

# ಡಾ.ಗೊರೂರು ಸಾಹಿತ್ಯ ವಿಚಾರ ಗೋಷ್ಠಿ

• ಉದಯವಾಹಿನಿ, ಹಾಸನ



ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ರಾಜ್ಯ ಬರಹಗಾರರ ಸಂಘ, ಹಾಸನ ಜಿಲ್ಲಾ ಘಟಕ, ಗಾಂಧೀ ಸ್ಮಾರಕ ನಿಧಿ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಡಾ. ಗೊರೂರು ರಾ ಮಸ್ವಾಮಿ ಅಯ್ಯಂಗಾರ್ ಅವರ ಸಾಹಿತ್ಯ ವಿಚಾರಗೋಷ್ಟಿಯನ್ನು ದಿನಾಂಕ 21.8.2024ರ ಬುಧವಾರ ಬೆ.11ಕ್ಕೆ ಹಾಸನ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ.

ಡಾ. ಗೊರೂರರ ಸುಪುತ್ರಿ ಶ್ರೀಮತಿ ವಾಸಂತಿಮೂರ್ತಿ, ಕೆನಡಾ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರು ಡಾ. ಕೆ.ಜಿ.ಕವಿತಾ ಅಧ್ಯಕ್ಷತೆ ವಹಿಸುವರು. ಸಾಹಿತ್ಯ ವಿಚಾರ ಗೋಷ್ಠಿಯಲ್ಲಿ ಪ್ರೊ. ಕಮಲ ನರಸಿಂಹ, ಕಾದಂಬರಿಕಾರರು, ತುಮಕೂರು ಇವರು ಗೊರೂರರ ಸಾಹಿತ್ಯದಲ್ಲಿ ಸಾಮಾಜಿಕ ಪ್ರಜ್ಞೆ ಮತ್ತು ಚಲನಚಿತ್ರ ಎಂಬ ವಿಷಯವಾಗಿ, ಡಾ. ಹಂಪನಹಳ್ಳಿ ತಿಮ್ಮೇಗೌಡರು, ನಿವೃತ್ತ ಪ್ರಾಧ್ಯಾಪಕರು ಇವರು ಗೊರೂರರ ಸಾಹಿತ್ಯದಲ್ಲಿ ಜನಪದ ಸಿದ್ಧಿ ಸಮೃದ್ಧಿ, ಶ್ರೀ ಗೊರೂರು ಅನಂತ ರಾಜು, ಲೇಖಕರು, ಹಾಸನ ಇವರು ಸ್ವಾತಂತ್ರ್ಯ ಹೋರಾಟದಲ್ಲಿ ಡಾ. ಗೊ ರೂರರ ಪಾತ್ರ ಎಂಬ ವಿಷಯವಾಗಿ ಪ್ರಬಂಧ ಮಂಡಿಸುವರು.

ಮುಖ್ಯ ಅತಿಥಿಗಳಾಗಿ ಶ್ರೀ ರವಿ ನಾಕಲಗೊಡು, ಸಂಪಾದಕರು, ಹಲೋ ಹಾಸನ್, ಸಂಜೆ ದಿನಪತ್ರಿಕೆ, ಡಾ. ಶ್ರೀನಿವಾಸ್ ಜಿ.ಎಸ್. ನಿವೃತ್ತ ಪ್ರಾಧ್ಯಾಪಕರು, ಬೆಂಗಳೂರು, ಶ್ರೀ ಕೃಷ್ಣೇಗೌಡರು, ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಸನ ಜಿಲ್ಲಾಧ್ಯಕ್ಷರು ಶ್ರೀ ಸುಂದರೇಶ್ ಡಿ.ಉಡುವೇರೆ, ಕ.ರಾ.ಬ.ಸಂಘ, ಹಾಸನ ಜಿಲ್ಲಾ ಘಟಕ ಅಧ್ಯಕ್ಷರು ಭಾಗವಹಿಸುವರು ಎಂದು ಕರ್ನಾಟಕ ರಾಜ್ಯ ಬರಹಗಾರರ ಸಂಘದ ರಾಜ್ಯಾಧ್ಯಕ್ಷರು ಮಧು ನಾಯ್ಕ್ ಲಂಬಾಣಿ, ಹೂವಿನಹಡಗಲಿರವರು ತಿಳಿಸಿದ್ದಾರೆ.

# ಅಂತಾರಾಷ್ಟ್ರೀಯ ಆನೆ ದಿವಸ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯ ಸವಾಲುಗಳು

• ಉದಯವಾಹಿನಿ, ಬೆಂಗಳೂರು

ಆನೆಗಳ ಅಂತರರಾಷ್ಟ್ರೀಯ ದಿವಸ ಆಚರಿಸುವ ಈ ಸಂದರ್ಭದಲ್ಲಿ ಸರ್ಕಾರದ ಮುಂದೆ ಇರುವ ಸವಾಲುಗಳು 1) ಆನೆಗಳ ಸಂಖ್ಯೆಯನ್ನು ಹೆಚ್ಚಿಸುವುದು.2) ಇರುವ ಆನೆಗಳ ಸಂಖ್ಯೆ ಕುಸಿಯದಂತೆ ಜಾಗ್ರತೆ ವಹಿಸುವುದು. 3) ಮಾನವ ಪ್ರಾಣಿ ಸಂಘರ್ಷದ ಯೋಜನೆಯಡಿಯಲ್ಲಿ ಆನೆಗಳು ಗ್ರಾಮಗಳಿಗೆ ಬರದಂತೆ ಎಚ್ಚರ ವಹಿಸುವುದು. ಜೊತೆಗೆ ಆನೆಗಳಿಂದ ಮನುಷ್ಯರ ಸಾವುಗಳನ್ನು ತಡೆ ಗಟ್ಟುವುದು.

2023ರ ಜನಗಣತಿಯ ಪ್ರಕಾರ ದೇಶದಲ್ಲಿ 20,000ಕ್ಕೂ ಹೆಚ್ಚು ಆನೆಗಳಿದ್ದು ಅದರಲ್ಲಿ ಕರ್ನಾಟಕದಲ್ಲೇ ಸುಮಾರು 6000 ಕಿಂತಲೂ ಹೆಚ್ಚು ಆನೆಗಳಿದ್ದು,ಈ ದಿಸೆಯಲ್ಲಿ ಕರ್ನಾಟಕವೇ ಪ್ರಥಮ ಸ್ಥಾನದಲ್ಲಿದೆ ಎಂಬುದು ಗಮ ನಾರ್ಹ ಅಂಶ. ಅರಣ್ಯ ಇಲಾಖೆಯು ಕೇಂದ್ರ ರಾಜ್ಯ ಎರಡರ ಪಟ್ಟಿಯಲ್ಲಿ ಬರುವುದರಿಂದ ಇದನ್ನು ಸಮವರ್ತಿ ಪಟ್ಟಿಯಲ್ಲಿ ಸೇರಿಸಲಾಗಿದೆ. ಕೇಂದ್ರ ರಾಜ್ಯ ಎರಡು ಸರ್ಕಾರಗಳ ನಿರ್ದೇಶನದ ಅಣತಿಯಂತೆ ಕಾರ್ಯನಿರ್ವಹಿಸಬೇಕಾಗುತ್ತದೆ. ಜೊತೆಗೆ ಸುಪ್ರೀಂ ಕೋರ್ಟ್ ಭಾಗವಾಗಿ ಹಸಿರುಪೀಠವನ್ನು ಸ್ಥಾಪಿಸಿರುವುದು ದೇಶದ ಅರಣ್ಯವನ್ನು, ಅರಣ್ಯ ಕಾಯ್ದೆಗಳ ಅನುಸಾರವಾಗಿ ಸಂರಕ್ಷಿಸುವುದು, ರಾಜ್ಯ ಕೇಂದ್ರ ಅರಣ್ಯದ ವರದಿಗಳನ್ನು ಕಾಲಕಾಲಕ್ಕೆ ಅನುಗುಣವಾಗಿ ಪರಿಶೀಲಿಸುವುದು, ಅದಕ್ಕನುಗುಣವಾಗಿ ಸಲಹೆ ಪರಿಹಾರ ಹಾಗೂ ನಿರ್ದೇಶನಗಳನ್ನ ಸೂಚಿಸುವುದು. ಇದರ ಪ್ರಮುಖ ಕಾರ್ಯವಾಗಿದ್ದು, ಈ ನಿಟ್ಟಿನಲ್ಲಿ ದೇಶದ ಅರಣ್ಯ ಸಂಪತ್ತನ್ನು ಉಳಿಸಿ ಪರಿಸರ ಸಮತೋಲನ ಕಾಪಾಡುವ ದಿಸೆಯಲ್ಲಿ ಶೇಕಡ 23ರಷ್ಟಿದ್ದ ಅರಣ್ಯವನ್ನು ಶೇಕಡ 28ಕ್ಕೆ ಏರಿಸುವಂತೆ ಸುಪ್ರೀಂ ಕೋರ್ಟ್ ಆದೇಶಿಸಿರುವುದು ಇಲ್ಲಿ ಉಲ್ಲೇಖಾರ್ಹ.

**ಆನೆಗಳ ಜೀವನದ ಸಂಕ್ಷಿಪ್ತ ನೋಟ :** ಆನೆಗಳು ಸಂಪೂರ್ಣ ಸಸ್ಯಹಾರಿಗಳಾಗಿದ್ದು, ಇವುಗಳ ಮುಖ್ಯ ಆಹಾರ ಬಿದಿರು, ಆಲದ ಮರದ ಸೊಪ್ಪು, ಚುಜ್ಜಲಿ ಮರ ಹೀಗೆ ಹಲವು ಜಾತಿಯ ಮರಗಳ ಸೊಪ್ಪುಗಳನ್ನೇ ತಿಂದು ಆನೆಗಳು ಜೀವಿಸುತ್ತವೆ. ಇವು ಒಂದೇ ಸ್ಥಳದಲ್ಲಿ ಇರುವುದಿಲ್ಲ, ಒಂದು ಅಂದಾಜಿನ ಪ್ರಕಾರ ದಿನಕ್ಕೆ 40 ಕಿಮೀ ಚಲಿಸುತ್ತವೆ ಎಂದು ಹೇಳಲಾಗಿದೆ. ಸುಮಾರು 30 ವರ್ಷಗಳ ಹಿಂದೆ, ಆನೆಗಳನ್ನು ಅರಣ್ಯ ಸಿಬ್ಬಂದಿಯವರು, ಒಂದು ಕಡೆಯಿಂದ ಇನ್ನೊಂದು ಕಡೆಗೆ ಓಡಿಸುತ್ತಿದ್ದರು. ಬೇರೆ ಕಡೆ ಅರಣ್ಯದವರು ಈ ಕಡೆ ಓಡಿಸುವುದು. ಇದು ಅವರ ವೃತ್ತಿಗಳಾಗಿದ್ದವು. ಆದರೆ ಈಗ ಆ ರೀತಿ ಆನೆಗಳನ್ನು ಕಾಡಿನಿಂದ ಕಾಡಿಗೆ ಓಡಿಸುವುದರ ಮೇಲೆ ನಿರ್ಬಂಧ ಹೇರಲಾಗಿದೆ.

**ಆನೆಗಳ ಹಿನ್ನೆಲೆಯನ್ನು ನೋಡುವುದಾದರೆ:** ಆನೆಗಳು ತುಂಬಾ ಭಾವನಾತ್ಮಕ ಜೀವಿಗಳು. ಅವಾಗಿ ಯಾವುದೇ ರೀತಿಯ ತೊಂದರೆ ನೀಡುವುದಿಲ್ಲ, ಅವನ್ನು ಕೆಣಕಿದಾಗ ಮಾತ್ರ


ಉದಯವಾಹಿನಿ ಚಿತ್ರ

**ಶೇ,28ಕ್ಕೆ ಏರಿಸುವಂತೆ ಸುಪ್ರೀಂ ಕೋರ್ಟ್ ಆದೇಸಶ**

ಮೇಲೆ ಬೀಳುತ್ತವೆ. ಅಂತಹ ಆಚಾನಕ್ ಘಟನೆಗಳಲ್ಲಿ ಸಾವು ನೋವಾಗುವ ಸಂಭವವೇ ಹೆಚ್ಚು. ಸರ್ವೇಸಾಮಾನ್ಯವಾಗಿ ಆನೆಗಳು ಯಾವಾಗಲೂ ಗುಂಪು ಗುಂಪಾಗಿ ಇರುತ್ತವೆ. ಬೆಳಿಗ್ಗೆಯಿಂದ ಸಾಯಂಕಾಲದ ವರೆಗೆ ಹೊಟ್ಟೆಪಾಡಿಗಾಗಿ ಮೇಯುವುದೇ ಅವುಗಳ ಕೆಲಸವಾಗಿದ್ದು, ಸಾಯಂಕಾಲ ಆಗುತ್ತಿದ್ದಂತೆ ನೀರು ಸಿಗುವ ಜಾಗಗಳನ್ನು ಹುಡುಕಿಕೊಂಡು ಹೋಗಿ ನೀರನ್ನ ಕುಡಿಯುವುದು. ಕೆರೆಗಳು ಸಿಕ್ಕರೆ ನೀರು ಕುಡಿದು ತೃಪ್ತರಾದ ನಂತರ ಈಜಾಡಿ ' ಶಬ್ದ ಮಾಡಿ ಸಂತೋಷ ಪಡುತ್ತಾ, ನೀರಿನಲ್ಲಿ ಆಟವಾಡುತ್ತಿರುತ್ತವೆ. ಆನೆಗಳು ಮಿಲನ ವಾಗುವುದು ನೀರಿನಲ್ಲಿ ಈಜಾಡುವ ಸಂದರ್ಭದಲ್ಲಿಯೇ.! ಆ ಸಂದರ್ಭದಲ್ಲಿ ಯಾರಾದರೂ ಅವಕ್ಕೆ ಕೀಟಲೆ ಮಾಡಿ ಕಲ್ಲು ಹೊಡೆಯುವುದು ಅವುಗಳನ್ನು ಡಿಸ್ಟರ್ಬ್ ಮಾಡಲೆತ್ನಿಸಿದರೆ, ಅರ್ಧ ಕಿಲೋಮೀಟರ್ ಗಟ್ಟಲೆ ಶಬ್ದ ಮಾಡಿಕೊಂಡು ಓಡಿಸಿಕೊಂಡು ನಾಗಾಲೋಟದಲ್ಲಿ ಬರುತ್ತವೆ. ಆ ಸಮಯದಲ್ಲಿ ಸಿಕ್ಕಿಹಾಕಿಕೊಂಡರೆ ಮನುಷ್ಯನ ಪ್ರಾಣವನ್ನು ಚಂಡಾಡುತ್ತವೆ. ಸರ್ವೇಸಾಮಾನ್ಯವಾಗಿ ಗುಂಪಿನಲ್ಲಿ ಚಲಿಸುವ ಆನೆಗಳಿಂದ ಯಾವುದೇ ತೊಂದರೆ ಇರುವುದಿಲ್ಲ, ಆದರೆ ಗುಂಪಿನಿಂದ ಬೇರ್ಪಟ್ಟ ಒಂಟಿ ಆನೆ ಎಂದು ಕರೆಸಿಕೊಳ್ಳುವ ಆನೆಯಿಂದ ಮಾತ್ರವೇ ಜನರಿಗೆ ತೊಂದರೆ ಕೊಡುವ ಸಂಭವ ಹೆಚ್ಚಾಗಿರುತ್ತದೆ. ಜೊತೆಗೆ ಮಾವಿನ ಮರದ ಹಣ್ಣುಗಳ ರುಚಿಯನ್ನು ಸವಿಯಲು ಆನೆಗಳು ಗ್ರಾಮಗಳತ್ತ ಬರುತ್ತವೆಂಬುದು ಉಲ್ಲೇಖಾರ್ಹವಾಗಿದೆ. ಈ ನಿಟ್ಟಿನಲ್ಲಿ ಆನೆಗಳು ಗ್ರಾಮಗಳಿಗೆ ಬಂದು ಬೆಳೆ ನಾಶ ಮಾಡುತ್ತಿರುವುದರಿಂದ ಹಾಗೂ ಮಾನವರಿಗೆ ತೊಂದರೆ ಕೊಡುವ ಅಂಶಗಳನ್ನು ಪರಿಗಣಿಸಿ ಆನೆಗಳು ಗ್ರಾಮಗಳಿಗೆ ಬರದಂತೆ ತಡೆಯುವ ನಿಟ್ಟಿನಲ್ಲಿ ಸುಮಾರು 30 ವರ್ಷಗಳ ಹಿಂದೆ ಗ್ರಾಮದ ಪಕ್ಕದಲ್ಲಿ ಕಾಡಿಗೆ ಹೊಂದಿಕೊಂಡಂತೆ ಡ್ರ್ಯಾಯಿನ್ ಹಳ್ಳಗಳ ರೀತಿಯಲ್ಲಿ ಉದ್ದವಾದ ಕಂದಕಗಳು ಗಳನ್ನು ತೋಡಿಸಲಾಯಿತು. ಮನುಷ್ಯನ ರೀತಿಯಲ್ಲೇ ಭಾವನಾತ್ಮಕ ಹಾಗೂ ಚಾಣಾಕ್ಷ ಪ್ರಾಣಿಗಳಾದ ಅವು ಸೊಂಡಿಲಿನಿಂದ ಮಣ್ಣನ್ನು ಕಂದಕಕ್ಕೆ ಪುನಹ ಮುಚ್ಚಿ ತದನಂತರ ಆ ಮುಚ್ಚಿದ ಮಣ್ಣಿನ ಮೇಲೆ ನಡೆದು ಗ್ರಾಮಗಳಿಗೆ ಬರಲಾರಂಬಿಸಿದವು. ಡ್ರೈ ನ್ ಅಷ್ಟೊಂದು ವರ್ಕೌಟ್ ಆಗದ ಕಾರಣ, ಬದಲಾಗಿ ಕಾಡು ಕಲ್ಲುಗಳಿಂದ ತಡೆಗೋಡೆಯನ್ನು ಗ್ರಾಮದ ಸುತ್ತಲೂ ನಿರ್ಮಿಸಲಾಯಿತು. ಆ ಕಲ್ಲುಗಳನ್ನು ಸಹ ತಮ್ಮ ಶಕ್ತಿಯಿಂದ ಕೆಡವಿದ ಆನೆಗಳು ಅದೇ ಜಾಗದಲ್ಲಿ ಗ್ರಾಮಗಳಿಗೆ ಬರಲು ಶುರು ವಿಟ್ಟುಕೊಂಡವು. ಇದನ್ನು ಗಮನಿಸಿದ ಅರಣ್ಯ ಇಲಾಖೆ ಸೌರ ತಂತಿ ಬೇಲಿಯನ್ನು ಸುತ್ತಲೂ ಅಳವಡಿಸಲು ಪ್ರಾರಂಭಿಸಿದರು. ಇದಕ್ಕೂ ಟಾಂಗ್ ನೀಡಿದ ಆನೆಗಳು ಸೌರ ತಂತಿ ಬೇಲಿಗಳ ಮೇಲೆ ಒಣಗಿದ ಮರವನ್ನು ಉರುಳಿಸಿ ತಂತಿ ಬೇಲಿಯನ್ನು ನೆಲಕ್ಕೆ ಕೆಡವಿ ಗ್ರಾಮಗಳಿಗೆ ಬರಲು ಶುರು ಮಾಡಿದವು. ಇದು ಸಹ ವರ್ಕೌಟ್ ಆಗದ ಕಾರಣ, ರೈಲ್ವೆ ಕಂಬಿಗಳಿಂದ ರೈಲ್ವೆ ಕಂಬಿ ಬೇಲಿಯನ್ನು ನಿರ್ಮಿಸಿತು. ಇದಕ್ಕೂ ಕೇರ್ ಮಾಡದ ಆ ಚಾಲಾಕಿ ಆನೆಗಳು ರೈಲ್ವೆ ಕಂಬಿಗಳ ಮಧ್ಯದ ಜಾಗದಲ್ಲಿ ಮೀಡಿಯಂ ಆನೆ ಒಳಗೆ ನುಗ್ಗಿ ಬರುವುದಾದರೆ, ದೊಡ್ಡ ದೊಡ್ಡ ಆನೆಗಳು ರೈಲ್ವೆ ಕಂಬಿಗಳ ಮೇಲೆ ಎರಡು ಕಾಲುಗಳನ್ನು ಹಾಕಿ ಒಲಂಪಿಕ್ಸ್‌ನ ಸಾಧನೆ ರೀತಿಯಲ್ಲಿ ಹೈ ಜಂಪ್ ಮಾಡಿ ಎಗರಿ ಒಳಬರಲಾರಂಭಿಸಿವೆ. ಆನೆಗಳು ಈ ರೀತಿ ಜಂಪ್ ಮಾಡಿ ಒಳಬರುವ ಸಾಂದರ್ಭಿಕ ಚಿತ್ರಗಳ ವಿಡಿಯೋಗಳು ದೊರೆತಿರುವುದು ಈ ಘಟನೆಯ ವಾಸ್ತವತೆಯನ್ನು.. ಪುಷ್ಟೀಕರಿಸುತ್ತವೆ.

ಆದರೆ ಇತ್ತೀಚಿನ ದಿನಗಳಲ್ಲಿ ಅರಣ್ಯ ಇಲಾಖೆಯವರು ಇವೆಲ್ಲವನ್ನೂ ಮೀರಿ ಚಲನಚಿತ್ರದಲ್ಲಿ ಗಾಳಿಗೆ ಎದುರಾಗಿ ಹೀರೋಯಿನ್ ತಲೆ ಕೂದಲು ಹಾರಾಡುವ ರೀತಿಯಲ್ಲಿ, ಗಾಳಿಗೆ ನೇತಾಡುವ ರೀತಿಯಲ್ಲಿ ಸೋಲಾರ್ ಬೇಲಿಯನ್ನು ನಿರ್ಮಿಸುತ್ತಿದ್ದಾರೆ. ಇವುಗಳ ಮಧ್ಯದಲ್ಲಿ ಮನುಷ್ಯ ಸರಾಗವಾಗಿ ನಡೆದು ಹೋಗಬಹುದು.

ಆದರೆ ಇಲ್ಲಿ ಆನೆಗಳು ಏನು ಮಾಡುತ್ತವೆ ಎಂದರೆ, ಅರಣ್ಯ ಇಲಾಖೆಯವರು ಹಾಗೂ ಗ್ರಾಮಸ್ಥ ಪ್ರತ್ಯಕ್ಷದರ್ಶಿಗಳ ಪ್ರಕಾರ ಗಾಳಿಗೆ ನೇತಾಡುವ ಸೌರ ತಂತಿಯ ಮಧ್ಯದಲ್ಲಿ ಆನೆಗಳು ಓಡಿ ಬರುವ ವಿಧಾನವನ್ನು ಕಂಡು ಹಿಡಿದುಕೊಂಡಿರುವುದು ನಿಜಕ್ಕೂ ಸೋಜಿಗ. ಹಾಗಾಗಿ ಆನೆಗಳು ಮನುಷ್ಯನ ರೀತಿಯಲ್ಲಿ ಬುದ್ಧಿಯಲ್ಲಿ ಬಹಳ ಚುರುಕು ಹಾಗೂ ಭಾವನಾತ್ಮಕ ಜೀವಿಗಳು ಹೌದು. ಮನುಷ್ಯನ ವಾಸ ಸ್ಥಳದ ಪಾತ್ರಗಳು ಇರುವ ಜಾಗದಲ್ಲಿ ಆನೆಗಳು ಆಗಾಗ್ಗೆ ಬರುವುದು ಸರ್ವೇಸಾಮಾನ್ಯವಾಗಿ ಬಿಟ್ಟಿದೆ. ಆಗಸ್ಟ್ 12ರಂದು ನಾಳೆ ವಿಶ್ವ ಆನೆಗಳ ದಿನಾಚರಣೆಯ ಅಂಗವಾಗಿ ಬೆಂಗಳೂರಿನ ಜಿ ಕೆ ವಿ ಕೆ ಕ್ಯಾಂಪಸ್‌ನಲ್ಲಿ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಮಾನವ ಪ್ರಾಣಿ ಸಂಘರ್ಷ ದ ಅಡಿಯಲ್ಲಿ ಹಲವು ಅಂತರರಾಷ್ಟ್ರೀಯ ತಜ್ಞರ ಚರ್ಚೆಗಳು ತೆರೆದುಕೊಳ್ಳಲಿದ್ದು ಇನ್ನೂ ಮುಂದಾದರೂ ಗ್ರಾಮಗಳಿಗೆ ಆನೆಗಳು ಲಗ್ಗೆ ಇಡುವುದನ್ನು ತಪ್ಪಿಸುವುದರ ನಿಟ್ಟಿನಲ್ಲಿ ಶಾಶ್ವತ ಪರಿಹಾರವನ್ನು ರೂಪಿಸುವ ಹಿನ್ನೆಲೆಯಲ್ಲಿ ನಾಳಿನ ಸಮ್ಮೇಳನ ಸೂಚಕವಾಗಬಹುದೇ ?.

**ಲೇಖಕರು : ಡಾ. ಸತ್ಯಮೂರ್ತಿ**
**ಉಪನ್ಯಾಸಕರು ಹಾಗೂ ಚಿಂತಕರು.**

**ಆನೆಗಳು ಊರಿನತ್ತ ಬರುವ ಕಾರಣಗಳು ಈ ಕೆಳಕಂಡಂತೆ**

**1) ಹಲಸಿನ ಮರದ ಹಣ್ಣಿನ ರುಚಿ ಸವಿಯಲು, 2) ಬಾಳೆ ತೋಟದ ಬಾಳೆಗಿಡದ ರುಚಿ ಆನೆಗೆ ಬಲು ಇಷ್ಟ, 3) ಕೆಲವು ಕಾಡಂಚಿನ ಗ್ರಾಮಗಳಲ್ಲಿ ಕೆಲವು ವರ್ಷಗಳ ಹಿಂದೆ, ಬಟ್ಟಿಸಾರಾಯಿ ' ತಯಾರಿಸುತ್ತಿದ್ದ ಸಂದರ್ಭದಲ್ಲಿ ವಾಸನೆಯ ಜಾಡು ಹಿಡಿದು ಅದರ ಊಟ ಕುಡಿಯಲು ಬರುತ್ತಿದ್ದವು ಎಂದು ಹೇಳಲಾಗುತ್ತಿದ್ದು , ಈ ದಿಸೆಯಲ್ಲಿ ಬೆಂಗಳೂರು ಹೊರವಲಯದ ತಾತಗುಣಿ, ಅಗರ, ವಡೆರಹಳ್ಳಿ, ದೇವಿಕಾ ರಾಣಿ ಎಸ್ಟೇಟ್‌ನ ಸುತ್ತಮುತ್ತ ಆನೆಗಳು ಓಡಾಡುವುದು ಖೋಡೆಸ್ ಫ್ಯಾಕ್ಟರಿಯಲ್ಲಿ ತಯಾರಿಸಲಾದ ಸಾರಾಯಿಯ ವೇಸ್ಟೇಜ್ ಅನ್ನು ಹಳ್ಳಗಳಲ್ಲಿ ಬಿಡಲಾಗುತ್ತಿದ್ದು ಅದರ ರುಚಿಯನ್ನು ಸವಿಯಲು ಆನೆಗಳು ಆ ಜಾಗಗಳಲ್ಲಿ ಆಗಾಗ ಓಡಾಡುತ್ತಿರುತ್ತವೆ ಎಂಬುದು ಸುತ್ತಮುತ್ತಲ ಗ್ರಾಮಸ್ಥರ ಹಿರಿಯರ ಅನುಭವದ ಮಾತಾಗಿದೆ.**

# ಕೊಪ್ಪಳ ನಗರಸಭೆ ಚುನಾವಣೆ: ಹಲವರಿಗೆ ಆಸಕ್ತಿ, ಕೆಲವರಿಗೆ ನಿರಾಸಕ್ತಿ

## ಅಧಿಕಾರವಿಲ್ಲದೇ ಕಾಯುತ್ತಿದ್ದ ಇಲ್ಲಿನ ನಗರಸಭೆ ಸದಸ್ಯರು, ಈ ಸ್ಥಾನಗಳನ್ನು ಗಿಟ್ಟಿಸಿಕೊಳ್ಳಲು ತೆರೆಮರೆಯ ಕಸರತ್ತು

• ಉದಯವಾಹಿನಿ, ಕೊಪ್ಪಳ

ಜನರಿಂದ ಆಯ್ಕೆಯಾದರೂ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನದ ಅಧಿಕಾರವಿಲ್ಲದೇ ಕಾಯುತ್ತಿದ್ದ ಇಲ್ಲಿನ ನಗರಸಭೆ ಸದಸ್ಯರು ಈಗ ಈ ಸ್ಥಾನಗಳನ್ನು ಗಿಟ್ಟಿಸಿಕೊಳ್ಳಲು ತೆರೆಮರೆಯ ಕಸರತ್ತು ನಡೆಸುತ್ತಿದ್ದಾರೆ. ಅಚ್ಚರಿಯೆಂದರೆ ಕೆಲವರು ಇದಕ್ಕಾಗಿ ಸಾಕಷ್ಟು ಸದಸ್ಯರು ಆಸಕ್ತಿ ತೋರಿಸಿದರೆ, ಇನ್ನೂ ಕೆಲವರು ನಿರಾಸಕ್ತಿ ತೋರಿಸುತ್ತಿದ್ದಾರೆ.

ನಗರಸಭೆಯಲ್ಲಿ ಒಟ್ಟು 31 ಜನ ಸದಸ್ಯರಿದ್ದು, 15 ಕಾಂಗ್ರೆಸ್, ಒಂಬತ್ತು ಬಿಜೆಪಿ, ಮೂರು ಪಕ್ಷೇತರ ಮತ್ತು ಇಬ್ಬರು ಜೆಡಿಎಸ್ ಸದಸ್ಯರಿದ್ದಾರೆ. ಇಬ್ಬರು ರಾಜೀನಾಮೆ ನೀಡಿದ್ದಾರೆ. 11ನೇ ವಾರ್ಡ್ ನಿಂದ ಬಿಜೆಪಿಯಿಂದ ಸದಸ್ಯರಾಗಿದ್ದ ಆಡೂರು ರಾಜಶೇಖರ ಲೋಕಸಭಾ ಚುನಾವಣೆ ಪೂರ್ವದಲ್ಲಿ ಕಾಂಗ್ರೆಸ್ ಸೇರಿದ್ದಾರೆ. ಎಂಟನೇ ವಾರ್ಡ್‌ನಿಂದ ಕಾಂಗ್ರೆಸ್‌ನಿಂದ ಗೆಲುವು ಪಡೆದಿದ್ದ ಸುನಿತಾಗಾಳಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಮೇಲ್ವಿಚಾರಕಿಯಾಗಿ ನೇಮಕಗೊಂಡ ಹಿನ್ನೆಲೆಯಲ್ಲಿ ಇದೇ ವರ್ಷದ


ಉದಯವಾಹಿನಿ ಚಿತ್ರ

ಫೆಬ್ರುವರಿಯಲ್ಲಿ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದರು. ಬಹುಮತಕ್ಕೆ ಬೇಕಾದ 16 ಸದಸ್ಯರ ಬಲದ ಜೊತೆಗೆ ಕಾಂಗ್ರೆಸ್ ಪಕ್ಷಕ್ಕೆ ಶಾಸಕ ಹಾಗೂ ಸಂಸದರ ಮತವೂ ಇರುವ ಕಾರಣ ಕಾಂಗ್ರೆಸ್ ಪಕ್ಷಕ್ಕೆ ಬಹುಮತಕ್ಕೆ ಬೇಕಾದಷ್ಟು ಬಲವಂತನೂ ಇದೆ. ಅಧ್ಯಕ್ಷ ಸ್ಥಾನ ಸಾಮಾನ್ಯ ಮತ್ತು ಉಪಾಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲಾಗಿದೆ.

ಹಿಂದಿನ ಅಧ್ಯಕ್ಷೆ ಶಿವಗಂಗಾ ಶಿವರೆಡ್ಡಿ ಭೂಮಕ್ಕನವರ ಹಾಗೂ ಉಪಾಧ್ಯಕ್ಷೆ ಆಯೇಷಾ ರುಬಿನಾ ಅವರ ಅಧಿಕಾರವಧಿ 2023ರ ಅಕ್ಟೋಬರ್‌ನಲ್ಲಿಯೇ ಪೂರ್ಣಗೊಂಡಿದೆ. ಅಧಿಕಾರ ಪೂರ್ಣಗೊಂಡು ಒಂಬತ್ತು ತಿಂಗಳ ಬಳಿಕ ಮೀಸಲಾತಿ ಘೋಷಣೆಯಾಗಿದ್ದು, ಕಾಂಗ್ರೆಸ್ ಸದಸ್ಯರು ಕೊನೆಯ ಅವಧಿಯಲ್ಲಿ ಅಧ್ಯಕ್ಷ

> ಕೊಪ್ಪಳ ನಗರಸಭೆಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನದ ಚುನಾವಣೆಗೆ ಎರಡು ದಿನಗಳಲ್ಲಿ ದಿನಾಂಕ ನಿಗದಿ ಮಾಡಲಾಗುವುದು. ಎರಡು ವಾರಗಳ ಒಳಗೆ ಚುನಾವಣೆ ನಡೆಸಲಾಗುವುದು
>
> -ಮಹೇಶ ಮಾಲಗಿತ್ತಿ, ಸಹಾಯಕ ಉಪವಿಭಾಗಾಧಿಕಾರಿ

ಗಾದಿ ಶತಾಯಗತಾಯು ಪಡೆದುಕೊಳ್ಳಲೇಬೇಕು ಎಂದು ಪೈಪೋಟಿ ನಡೆಸಿದ್ದಾರೆ. ನಗರಸಭೆಯ ಹಿರಿಯ ಸದಸ್ಯರಾದ ಮೂರನೇ ವಾರ್ಡ್‌ನ ಅಮ್ಜದ್ ಪಟೇಲ್, 10ನೇ ವಾರ್ಡ್‌ನ ಮಹೇಂದ್ರ ಚೋಪ್ರಾ, 7ನೇ ವಾರ್ಡ್‌ನ ಅಜಮುದ್ದೀನ್ ಅತ್ತಾರ್ ಮತ್ತು 25ನೇ ವಾರ್ಡ್‌ನ ಅರುಣಕುಮಾರ್ ಅಪ್ಪುಶೆಟ್ಟರ್ ಅವರ ಹೆಸರುಗಳು ಪ್ರಮುಖವಾಗಿ ಕೇಳಿಬರುತ್ತಿವೆ. ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸ್ಥಾನವೂ ಖಾಲಿಯಿರುವ ಕಾರಣ ಇವರಲ್ಲಿ ಕೆಲವರು ನಗರಸಭೆಗಿಂತ ಪ್ರಾಧಿಕಾರದಲ್ಲಿ ಸ್ಥಾನಮಾನ ನೀಡುವಂತೆ ಶಾಸಕ ರಾಘವೇಂದ್ರ ಹಿಟ್ನಾಳ ಅವರ ದುಂಬಾಲು ಬಿದ್ದಿರುವ ವಿಷಯ ಗುಟ್ಟಾಗಿ ಉಳಿದಿಲ್ಲ. ಶಾಸಕರು ಭಾನುವಾರ ನಗರಕ್ಕೆ ಬರಲಿದ್ದು, ಆಗ ಇದರ ಬಗ್ಗೆ ಚರ್ಚೆ ನಡೆಯಲಿದೆ ಎಂದು ಗೊತ್ತಾಗಿದೆ. ಅಧ್ಯಕ್ಷ ಸ್ಥಾನದ ಆಕಾಂಕ್ಷಿಯೇ ನೀವು ಎನ್ನುವ ಪ್ರಶ್ನೆಯನ್ನು ಮಹೇಂದ್ರ ಚೋಪ್ರಾ ಅವರನ್ನು ಪ್ರಶ್ನಿಸಿದರೆ 'ಇನ್ನು ತೀರ್ಮಾನವಾಗಿಲ್ಲ. ಅವಕಾಶಕೊಟ್ಟರೆ ಅಧ್ಯಕ್ಷನಾಗಲು ಬಯಸುವೆ' ಎಂದರು. ಪಕ್ಷೇತರರಾಗಿ ಸ್ಪರ್ಧೆ ಮಾಡಿ ಗೆದ್ದಿರುವ ಅರುಣಕುಮಾರ್ ಕೂಡ ಅಧ್ಯಕ್ಷರಾಗಲು ಪ್ರಯತ್ನ ನಡೆಸುತ್ತಿದ್ದಾರೆ. ಪಕ್ಷೇತರರಾಗಿ ಗೆದ್ದರೂ ಅವರ ಗೆಲುವಿನಲ್ಲಿ ಕಾಂಗ್ರೆಸ್ ಬೆಂಬಲಿಗರ 'ಸಹಕಾರ'ವೂ ಇತ್ತು ಎನ್ನುವುದು ಗುಟ್ಟಾಗಿ ಉಳಿದಿಲ್ಲ. ಹೀಗಾಗಿ ಅವರ ಸಂಪೂರ್ಣ ಬೆಂಬಲ ಕಾಂಗ್ರೆಸ್ ಪಕ್ಷಕ್ಕಿದೆ. ತಮ್ಮ ಸ್ಪರ್ಧೆಯ ಬಗ್ಗೆ ಕೇಳಲಾದ ಪ್ರಶ್ನೆಗೆ 'ನನಗೂ ಅವಕಾಶ ಕೊಡುವಂತೆ ಶಾಸಕರ ಬಳಿ ಮನವಿ ಮಾಡುವೆ. ಎಲ್ಲಾ ಸದಸ್ಯರು, ಶಾಸಕರು ಒಪ್ಪಿದರೆ ಮುನ್ನಡೆಯುವೆ' ಎಂದರು.

ಅಮ್ಜದ್ ಪಟೇಲ್ ಪ್ರತಿಕ್ರಿಯಿಸಿ ನಿಷ್ಠಾವಂತ ಕಾರ್ಯಕರ್ತನಾಗಿ ಕೆಲಸ ಮಾಡಿದ್ದೇನೆ. ಪಕ್ಷಕ್ಕಾಗಿಯೂ ದುಡಿದಿದ್ದೇನೆ. ನಗರಸಭೆಗಿಂತ ಪ್ರಾಧಿಕಾರಕ್ಕೆ ಪರಿಗಣಿಸುವಂತೆ ಮನವಿ ಮಾಡಿದ್ದೇನೆ. ಅಂತಿಮವಾಗಿ ಹೈಕಮಾಂಡ್ ಕೈಗೊಳ್ಳುವ ನಿರ್ಧಾರಕ್ಕೆ ಬದ್ಧನಾಗಿರುವೆ ಎಂದರು.

### 22ರಂದು ಭಾಗ್ಯನಗರ ಪ.ಪಂ. ಚುನಾವಣೆ

**ಕೊಪ್ಪಳದ ಭಾಗ್ಯನಗರ ಪಟ್ಟಣ ಪಂಚಾಯಿತಿಗೆ ಇದೇ 22ರಂದು ಚುನಾವಣೆ ನಿಗದಿ ಮಾಡಲಾಗಿದೆ. ಕೊಪ್ಪಳ ತಹಶೀಲ್ದಾರ್ ವಿಠ್ಠಲ ಚೌಗುಲಾ ಈ ವಿಷಯವನ್ನು ಖಚಿತಪಡಿಸಿದ್ದಾರೆ. ಒಟ್ಟು 19 ಜನ ಸದಸ್ಯ ಬಲವನ್ನು ಹೊಂದಿರುವ ಭಾಗ್ಯನಗರದಲ್ಲಿ ಬಿಜೆಪಿ 9 ಕಾಂಗ್ರೆಸ್ 8 ಮತ್ತು ಪಕ್ಷೇತರರು ಇಬ್ಬರು ಇದ್ದಾರೆ. ಅಧ್ಯಕ್ಷ ಸ್ಥಾನ ಹಿಂದುಳಿದ ವರ್ಗ ಅ ಮತ್ತು ಉಪಾಧ್ಯಕ್ಷ ಸಾಮಾನ್ಯ ಸ್ಥಾನಕ್ಕೆ ಮೀಸಲಾಗಿದೆ. ಈ ಸ್ಥಾನಗಳಿಗೆ ಆಯ್ಕೆಯಾಗ ಬಯಸುವವರಿಗೆ ಪಕ್ಷೇತರರ ಆಶೀರ್ವಾದವೂ ಬೇಕಾಗುತ್ತದೆ.**


# ತುಂಗಭದ್ರಾ 19ನೇ ಕ್ರಸ್ಟ್ ಗೇಟ್ ಕುಸಿತ

## ಜನಪ್ರತಿನಿಧಿಗಳು, ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ

• ವೀರೇಶ ಹೊಸಳ್ಳಿ
• ಉದಯವಾಹಿನಿ, ಸಿಂಧನೂರು

ಕೊಪ್ಪಳ ತಾಲ್ಲೂಕಿನ ಬಳಿ ಇರುವ ತುಂಗಭದ್ರಾ ಡ್ಯಾಂ ಈ ಬಾರಿ 105.788 ಸಾಮರ್ಥ್ಯದ ಸಂಪೂರ್ಣ ತುಂಬಿರುವುದರಿಂದ ನಾಲ್ಕು ಜಿಲ್ಲೆಗಳ ರೈತರ ಮುಖದಲ್ಲಿ ಮಂದಹಾಸ ಮೂಡಿತ್ತು. ಇನ್ನೇನು ರೈತರರು ಖುಷಿಯಲ್ಲಿ ಭತ್ತ ಸಸಿ ನಾಟಿ ಮಾಡುವ ಹಿನ್ನೆಲೆಯಲ್ಲಿ ಡ್ಯಾಮ್ ಜಲಾಶಯ 19 ಗೇಟ್ ಚೈನ್ ಲಿಂಕ್ ಕಟ್ಟಾಗಿ ಅಪಾರ ಪ್ರಮಾಣದಲ್ಲಿ ನೀರು ಪೋಲಾಗುವುದಕ್ಕೆ ಅಲ್ಲಿನ ಇಂಜಿನಿಯರ್. ಅಧಿಕಾರಿಗಳು ಸಿಬ್ಬಂದಿ ವರ್ಗ ನಿರ್ಲಕ್ಷ್ಯದಿಂದಾಗಿ ಈ ಅನಾಹುತಕ್ಕೆ ಕಾರಣವಾಗಿದ್ದು.

ಶನಿವಾರ ತಡ ರಾತ್ರಿ 10.50 ಕ್ಕೆ 19ನೇ ಕ್ರಸ್ಟ್ ಗೇಟ್ ಕುಸಿದಿದೆ ಚೈನ್ ಲಿಂಕ್ ಕಟ್ಟಯಾಗಿ ಕ್ರಸ್ಟ್ ಗೇಟ್ ಕುಸಿಯಲು ಕಾರಣವಾಗಿದೆ. ಅಲ್ಲಿನ ಅಧಿಕಾರಿಗಳ ಮಳೆಗಾಲ ಪ್ರಾರಂಭವಾಗುವ ಮುನ್ನವೇ ಅಧಿಕಾರಿಗಳು ಬೇಸಿಗೆಯಲ್ಲಿ ಜಲಾಶಯಗೆ ಸಂಬಂದಿಸಿದ ನಿರ್ವಹಣೆಗಾಗಿ ಅಧಿಕಾರಿಗಳ ಎಚ್ಚರವಹಿಸಬೇಕು. ಗೇಟ್ ಸುರಕ್ಷತೆ ಬಗ್ಗೆ ಪರಿಶೀಲಿಸಿ ಅಗತ್ಯ ದುರಸ್ತಿಗೆ ಕ್ರಮಕ್ಕಾಗಿ ಮುಂದಾಗಬೇಕಾಗಿತ್ತು ಆದರೆ ಅಧಿಕಾರಿಗಳು ಯಾವುದೇ ರೀತಿಯ ಸಂಬಂಧವಿಲ್ಲದಂತೆ ಸರ್ಕಾರದ ಸಂಬಳ ಬರುತ್ತದೆ. ನಾವೇಕೆ ಗಮನ ಹರಿಸಬೇಕು ಎಂದು ಬೇಜವಾಬ್ದಾರಿ ವರ್ತನೆ 19 ಗೇಟ್ ಕುಸಿತಕ್ಕೆ ಕಾರಣವಾಗಿದೆ. ಹೊದು ವರ್ಷ ಭೀಕರ ಬರಗಾಲದಿಂದ ಜನರು ಕಂಗಾಲಾಗಿದ್ದ ಈ ಬಾರಿ ತುಂಗಭದ್ರಾ ಜಲಾಶಯ ಪೂರ್ಣ ಪ್ರಮಾಣದಲ್ಲಿ ನೀರು ಸಂಗ್ರಹವಾಗಿ ರೈತರ ಬೆಳೆ ಬೆಳೆಯುವುದಕ್ಕೆ ಯಾವುದೇ ಸಮಸ್ಯೆಯಿಲ್ಲ ಎಂದು ರೈತರು ಖುಷಿಯಲ್ಲಿದ್ದರು.



ಉದಯವಾಹಿನಿ ಚಿತ್ರ

> **ಇಲ್ಲಿನ ಜನಪ್ರತಿನಿಧಿಗಳು ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದ್ದಾರೆ ಏಕೆಂದರೆ ತುಂಗಭದ್ರಾ ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರಕ್ಕೆ ಅಭಿಯಂತರರು ಅಧೀಕ್ಷಕ ಅಭಿಯಂತರರು ಅವರಿಗೆ ಜವಾಬ್ದಾರಿ ನೀಡಿದ್ದು. ಈ ಅನಾಹುತಕ್ಕೆ ಕಾರಣವಾಗಿದೆ.**

ಆದರೆ ತುಂಗಾ ಭದ್ರಾ ಚೈನ್ ಲಿಂಕ್ ಕಟ್ಟಾಗಿರುವುದಕ್ಕೆ. ಇವತ್ತು ನದಿಗೆ ನೀರು ಹರಿಸುವ ನೆಪದಲ್ಲಿ ಜನಪ್ರತಿನಿಧಿಗಳು, ಅಧಿಕಾರಿಗಳು ಅನುಕೂಲ ಮಾಡಿಕೊಟ್ಟಿರು ಬಹುದು ಏನು ರೈತರಲ್ಲಿ ಅನುಮಾನ ಮೂಡಿದೆ. ಈಗಾಗಿ ರೈತರು ಬೆಳೆ ಬೆಳೆಯುವುದಕ್ಕೆ ನೀರು ಇಲ್ಲದೆ ರೈತರು ಆತಂಕಕ್ಕೆ ಗುರಿಯಾಗಿದ್ದಾರೆ.

ಇಲ್ಲಿ ಸರಿಯಾಗಿ ನೀರಾವರಿ ಸಲಹಾ ಸಮಿತಿ ಸಭೆ ಮಾಡಿದೆ ಕೇವಲ ನೀರಿನ ಮಾಹಿತಿ ಬಗ್ಗೆ ಚರ್ಚೆಲಾಗುತ್ತಿದೆ. ವರೆತು ತುಂಗಭದ್ರಾ ಡ್ಯಾಂ ಮತ್ತು ಜಲಾಶಯ ಹಾಗೂ ಕಾಲುವೆ ದುರಸ್ತಿ ಕಾಮಗಾರಿ ಮತ್ತು ಸುರಕ್ಷಿತೆಯ ಬಗ್ಗೆ ಯಾವುದೇ ಚರ್ಚೆ ಮಾಡೋದೇ ಇರುವುದಕ್ಕೆ ಇಂತಹಾ ಅನಾಹುತಕ್ಕೆ ಕಾರಣವಾಗುತ್ತಿದೆ ಎಂದು ರೈತರು ಆಕ್ರೋಶವನ್ನು ವ್ಯಕ್ತಪಡಿಸಿದರು.

# ರೆಸಾರ್ಟ್‌ನಲ್ಲಿ ಬಿಜೆಪಿ ಅತೃಪ್ತ ನಾಯಕರ ಸಭೆ

• ಉದಯವಾಹಿನಿ, ಬೆಳಗಾವಿ

ಬೆಳಗಾವಿ ತಾಲ್ಲೂಕಿನ ಕಿಣಯೇ ಗ್ರಾಮದ ಬಳಿಯ ರೆಸಾರ್ಟ್‌ನಲ್ಲಿ ಬಿಜೆಪಿ ಅತೃಪ್ತ ನಾಯಕರು ಭಾನುವಾರ ಸಭೆ ನಡೆಸಿದರು. ಶಾಸಕರಾದ ರಮೇಶ ಜಾರಕಿಹೊಳಿ, ಬಸನಗೌಡ ಪಾಟೀಲ ಯತ್ನಾಳ, ಮಾಜಿ ಸಂಸದರಾದ ಅಣ್ಣಾಸಾಹೇಬ ಜೊಲ್ಲೆ, ಪ್ರತಾಪ ಸಿಂಹ, ಜಿ.ಎಂ.ಸಿದ್ಧೇಶ್ವರ, ಮಾಜಿ ಸಚಿವರಾದ ಅರವಿಂದ ಲಿಂಬಾವಳಿ, ಕುಮಾರ ಬಂಗಾರಪ್ಪ ಮತ್ತಿತರರು ಪಾಲ್ಗೊಂಡಿದ್ದರು.'ಮುಡಾ' ಹಗರಣ ವಿರೋಧಿಸಿ ಬಿಜೆಪಿ ನಾಯಕರು ಬೆಂಗಳೂರಿನಿಂದ ಮೈಸೂರಿನವರೆಗೆ ನಡೆಸಿದ ಪಾದಯಾತ್ರೆ ಮುಗಿದ ಬೆನ್ನಲ್ಲೇ, ಈ ಸಭೆ ನಡೆಸಿರುವುದು ಬಿಜೆಪಿ ವಲಯದಲ್ಲಿ ಸಂಚಲನ ಮೂಡಿಸಿದೆ.'ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ಬಿ.ಎಸ್.ಯಡಿಯೂರಪ್ಪ ವಿರುದ್ಧ ಅಸಮಾಧಾನಗೊಂಡ ನಾಯಕರು ಈ ಸಭೆ ನಡೆಸಿದ್ದಾರೆ. ಇಬ್ಬರೂ ನಾಯಕರ ವಿರುದ್ಧ ಪಕ್ಷದ ಹೈಕಮಾಂಡ್‌ಗೆ ದೂರು ನೀಡಲು ಯೋಜಿಸಿದ್ದಾರೆ' ಎಂಬ ಮಾಹಿತಿ ಹರಿದಾಡಿತು. ಆದರೆ, ಸಭೆ ಮುಗಿದ ನಂತರ ಹೊರಬಂದ ನಾಯಕರು, 'ಇದು ಪಕ್ಷದ ಭಿನ್ನಮತೀಯ ಚಟುವಟಿಕೆಯಲ್ಲ' ಎಂದರು.

ಬಳ್ಳಾರಿಯವರೆಗೆ ಪಾದಯಾತ್ರೆಗೆ ನಿರ್ಧಾರ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ, ಪರಿಶಿಷ್ಟರ


ಉದಯವಾಹಿನಿ ಚಿತ್ರ

ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನ ದುರ್ಬಳಕೆಗೆ ಸಂಬಂಧಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಾಗಲಕೋಟೆ ಜಿಲ್ಲೆಯ ಕೂಡಲಸಂಗಮದಿಂದ ಬಳ್ಳಾರಿಯವರೆಗೆ ಗಣೇಶ ಚತುರ್ಥಿ ನಂತರ ಪಾದಯಾತ್ರೆ ನಡೆಸಲು ಬಿಜೆಪಿ ನಾಯಕರು ನಿರ್ಧರಿಸಿದರು.'ಪಾದಯಾತ್ರೆಗೂ ಮುನ್ನ, ಪಕ್ಷದ ಹೈಕಮಾಂಡ್ ಜತೆ ಒಂದು ಸುತ್ತಿನ ಮಾತುಕತೆ ನಡೆಸೋಣ. ಬೆಂಗಳೂರಿನಲ್ಲಿ ಇನ್ನಷ್ಟು ನಾಯಕರು ಸೇರಿಕೊಂಡು ಮತ್ತೊಂದು ಹಂತದ ಸಭೆ ಮಾಡೋಣ' ಎಂದರು.

'ಮುಡಾ ವಿರುದ್ಧ ನಡೆದ ಪಾದಯಾತ್ರೆ ಮೈಸೂರಿಗೆ ಮಾತ್ರ ಸೀಮಿತವಾದದ್ದು. ಆದರೆ, ನಾವು ಮಾಡುತ್ತಿರುವ ಹೋರಾಟ ಇಡೀ ರಾಜ್ಯಕ್ಕೆ ಸಂಬಂಧಿಸಿದ್ದು. ಇದಕ್ಕೆ ಕೇಂದ್ರದ ನಾಯಕರನ್ನು ಆಹ್ವಾನಿಸಲು ಚಿಂತನೆ ನಡೆಸಿದ್ದೇವೆ' ಎಂದು ಹೇಳಿದರು.'ಇದು ಯಾರೋ ಒಬ್ಬರನ್ನು ಹೀರೋ ಮಾಡಲು ಮಾಡುತ್ತಿರುವ ಹೋರಾಟವಲ್ಲ' ಎಂದು ಯತ್ನಾಳ ಹೇಳುವ ಮೂಲಕ ವಿಜಯೇಂದ್ರ ಅವರನ್ನು ಪರೋಕ್ಷವಾಗಿ ಟೀಕಿಸಿದರು.

# ಯುವನಿಧಿಗೆ ಸಿಗದ ನಿರೀಕ್ಷಿತ ಸ್ಪಂದನೆ

• ಉದಯವಾಹಿನಿ, ದಾವಣಗೆರೆ

ರಾಜ್ಯ ಸರ್ಕಾರದ 'ಐದನೇ ಗ್ಯಾರಂಟಿ' ಯುವನಿಧಿ ಫಲಾನುಭವಿಯಾಗಲು ಪ್ರತಿ ತಿಂಗಳು 'ನಿರುದ್ಯೋಗಿ' ಎಂಬ ಸ್ವಯಂ ಘೋಷಣಾ ಪತ್ರ ನೀಡಲು ಪದವೀಧರರು ಹಿಂದೇಟು ಹಾಕುತ್ತಿರುವ ಪರಿಣಾಮ ಯೋಜನೆಗೆ ನಿರೀಕ್ಷಿತ ಸ್ಪಂದನೆ ಸಿಗುತ್ತಿಲ್ಲ. ಜಿಲ್ಲೆಯಲ್ಲಿ ನೋಂದಣಿಯಾಗಿರುವ 5,500 ನಿರುದ್ಯೋಗಿಗಳಲ್ಲಿ ಭತ್ಯೆ ಪಡೆಯುತ್ತಿರುವವರ ಸಂಖ್ಯೆ ಶೇ 50ರಷ್ಟು ಮೀರಿಲ್ಲ. ಪದವೀಧರರಿಗೆ ಪ್ರತಿ ತಿಂಗಳು 3,000 ಹಾಗೂ ಡಿಪ್ಲೊಮಾ ಉತ್ತೀರ್ಣರಾದವರಿಗೆ 1,500 ನಿರುದ್ಯೋಗಿ ಭತ್ಯೆಯನ್ನು ರಾಜ್ಯ ಸರ್ಕಾರ ಜನವರಿ ಯಿಂದ ನೀಡುತ್ತಿದೆ. ಪದವೀಧರರಿಗಿಂತ ಡಿಪ್ಲೊಮಾ ಪೂರೈಸಿದವರಲ್ಲಿ ಭತ್ಯೆ ಪಡೆಯಲು ನಿರಾಸಕ್ತಿ ಇರುವುದು ಕಂಡುಬಂದಿದೆ. ಜಿಲ್ಲೆಯಲ್ಲಿ ನಿರುದ್ಯೋಗಿ ಭತ್ಯೆ ಪಡೆದ ಡಿಪ್ಲೊಮಾ ಫಲಾನುಭವಿಗಳ ಸಂಖ್ಯೆ 49 ಮಾತ್ರ.

2023ರಲ್ಲಿ ಪದವಿ ಅಥವಾ ಡಿಪ್ಲೊಮಾ ಉತ್ತೀರ್ಣರಾದವರು ಯೋಜನೆಗೆ ಅರ್ಜಿ ಸಲ್ಲಿಸಲು ಅರ್ಹರು. ಪರೀಕ್ಷಾ ಫಲಿತಾಂಶ ಹೊರಬಿದ್ದ ಆರು ತಿಂಗಳ ಒಳಗೆ ಅರ್ಜಿ ಸಲ್ಲಿಸಲು ಅವಕಾಶವಿದೆ. ಈ ಯೋಜನೆಯಡಿ ಜಿಲ್ಲೆಯಲ್ಲಿ 5,500 ಜನರು ನೋಂದಣಿ ಮಾಡಿಕೊಂಡಿದ್ದಾರೆ. ಪ್ರತಿ ತಿಂಗಳು ಸ್ವಯಂ ಘೋಷಣಾ ಪತ್ರ ಒದಗಿಸಲು ಉತ್ಸುಕತೆ ತೋರದಿರುವುದರಿಂದ ಎಲ್ಲರಿಗೂ ಭತ್ಯೆ ಸಿಗುತ್ತಿಲ್ಲ. 'ಉದ್ಯೋಗ ಸಿಕ್ಕಿಲ್ಲ' ಅಥವಾ 'ಉನ್ನತ ವ್ಯಾಸಂಗಕ್ಕೆ ಹೋಗಿಲ್ಲ' ಎಂಬ ಸ್ವಯಂ ಘೋಷಣಾ ಪತ್ರವನ್ನು ಪ್ರತಿ ತಿಂಗಳು 25ನೇ ತಾರೀಖಿನ ಒಳಗೆ ಆನ್‌ಲೈನ್ ಮೂಲಕ ಸಲ್ಲಿಸಬೇಕು. ಈ ಘೋಷಣಾ ಪತ್ರ ಒದಗಿಸದೇ ಇದ್ದರೆ ಫಲಾನುಭವಿಗೆ ಆ ತಿಂಗಳ ಭತ್ಯೆ ದೊರೆಯುವುದಿಲ್ಲ. ತಾನು ನಿರುದ್ಯೋಗಿ ಎಂಬುದಾಗಿ ಘೋಷಣೆ ಮಾಡಿಕೊಳ್ಳಲು ಪದವೀಧರರು ಹಿಂದೇಟು ಹಾಕುತ್ತಿರುವುದರಿಂದ ಈ ಷರತ್ತು ಪಾಲನೆಯಾಗುತ್ತಿಲ್ಲ ಎಂದು ಮೂಲಗಳು ಮಾಹಿತಿ ನೀಡಿವೆ. 'ನಿರುದ್ಯೋಗಿ ಭತ್ಯೆ ಪಡೆಯುವವರ ಸಂಖ್ಯೆ ಇಳಿಮುಖವಾಗಿರುವ ಬಗ್ಗೆ ಪರಿಶೀಲನೆ ನಡೆಸಲಾಗಿದೆ. ಸ್ವಯಂ ಘೋಷಣಾ ಪತ್ರ ಒದಗಿಸುವಂತೆ ಅರಿವು ಮೂಡಿಸಲಾಗಿದೆ. ಉದ್ಯೋಗ ಪಡೆದವರ ಮಾಹಿತಿಯನ್ನು ಭವಿಷ್ಯ ನಿಧಿ (ಪಿಎಫ್) ಸಂಸ್ಥೆಗಳು ಒದಗಿಸುತ್ತಿವೆ. ಇಂತಹ ಫಲಾನುಭವಿಗಳಿಗೆ ಭತ್ಯೆ ಸ್ಥಗಿತಗೊಂಡಿದೆ' ಎನ್ನುತ್ತಾರೆ ಜಿಲ್ಲಾ ಉದ್ಯೋಗಾಧಿಕಾರಿ ಡಿ.ರವೀಂದ್ರ.2024ರಲ್ಲಿ ಪದವಿ ಅಥವಾ ಡಿಪ್ಲೊಮಾ ಪೂರೈಸಿದವರು ಭತ್ಯೆ ಫಲಾನುಭವಿಗಳಾಗಲು ಕಾಯುತ್ತಿದ್ದಾರೆ. ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರವನ್ನು ಸಂಪರ್ಕಿಸುತ್ತಿದ್ದಾರೆ. ಸರ್ಕಾರದ ಅನುಮೋದನೆ ಸಿಗದಿರುವ ಬಗ್ಗೆ ಅಧಿಕಾರಿಗಳು ಮಾಹಿತಿ ನೀಡುತ್ತಿದ್ದಾರೆ.

# ಸ್ಥಗಿತಗೊಂಡ ಕರಾಟೆ ಶಿಕ್ಷಕರ ಅನುದಾನ; ಸರ್ಕಾರದ ವಿರುದ್ಧ ಸೆನಸ್ಸೈ ಮಹೇಂದ್ರ ಕ್ಷೀರಸಾಗರ ಆಕ್ರೋಶ

• ಉದಯವಾಹಿನಿ, ಕಲಬುರಗಿ

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2022-23ನೇ ಸಾಲಿನಲ್ಲಿ ಸರಕಾರಿ ವಸತಿ ಶಾಲೆಗಳಾದ ಮುರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಹಾಗು ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿನಿಯರಿಗಾಗಿ ಸ್ವಯಂ ರಕ್ಷಣೆ ಮಾಡಿಕೊಳ್ಳಲು ಲೈಂಗಿಕ ಶೋಷಣೆ ಅನ್ಯಾಯದ ವಿರುದ್ಧ ಹೋರಾಡಲು ದುಷ್ಟ ಶಕ್ತಿಯನ್ನು ಧಮನ ಮಾಡಲು ಶಿಷ್ಟ ಶಕ್ತಿಯನ್ನು ರಕ್ಷಣೆ ಮಾಡಲು ಅಂದಿನ ಸರಕಾರ ವಿದ್ಯಾರ್ಥಿನಿಯರ ಸ್ವಯಂ ರಕ್ಷಣೆಯ ದೃಷ್ಟಿಯಿಂದ 12 ಕೋಟಿ ರೂಪಾಯಿ ಬಿಡುಗಡೆಗೊಳಿಸುವುದಾಗಿ ಭರವಸೆ ನೀಡಿತ್ತು.

ಕಡ್ಡಾಯವಾಗಿ ಮೂರು ವರ್ಷಗಳವರೆಗೆ ಪ್ರತಿಯೊಬ್ಬ ಹೆಣ್ಣು ಮಕ್ಕಳು ತರಬೇತಿ ಪಡೆದುಕೊಂಡರೆ ಬ್ಲಾಕ್ ಬೆಲ್ಟ್ ಪದವಿ ಪೂರ್ಣಗೊಳಿಸಿದಂತೆ ಆಗುತ್ತದೆ ಎಂದು ಅಂದಿನ ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಕೂಟ ಶ್ರೀನಿವಾಸ್ ಪೂಜಾರಿ ಅವರು ಹೇಳಿಕೆ ನೀಡಿದ್ದರು.

ಈ ಕೂಡಲೆ ಕರಾಟೇ ಶಿಕ್ಷಕರ 2022-23ರ ಅನುದಾನವನ್ನು ಬಿಡುಗಡೆ ಗೊಳಿಸಬೇಕು ಹಾಗೂ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಲ್ಲಿ



ಉದಯವಾಹಿನಿ ಚಿತ್ರ

ಹಾಗೂ ಸರ್ಕಾರಿ ಪ್ರಾಥಮಿಕ ಹಾಗೂ ಮಾಧ್ಯಮಿಕ ಪ್ರೌಢಶಾಲೆಗಳಲ್ಲಿ ಮತ್ತು ವಸತಿ ನಿಲಯಗಳಲ್ಲಿ ಪುನಹ ನೂತನವಾಗಿ ಕರಾಟೆ ಶಿಕ್ಷಣವನ್ನು ಕಡ್ಡಾಯಗೊಳಿಸಬೇಕು ಕೆಲಸಕ್ಕೆ ಬಾರದ ಯೋಜನೆಗಳು ಜಾರಿಗೆ ತರುವ ಮುನ್ನ ಇಂತಹ ಪ್ರಗತಿ ಪೂರ್ವಕ ವಿದ್ಯಾರ್ಥಿನಿಯರ ನೆಚ್ಚಿನ ಮಹಿಳಾ ಸಬಲೀಕರಣ ದೃಷ್ಟಿಯಿಂದ ಕ್ರಾಂತಿಕಾರಕ ಯೋಜನೆಗಳು ಜಾರಿಗೆ ತಂದರೇ ಸರಕಾರಕ್ಕೂ ಶ್ರೇಯಸ್ಸು ಹಾಗೂ ರಾಜ್ಯಕ್ಕೂ ಶ್ರೇಯಸ್ಸು ತಂದಂತಾಗುತ್ತದೆ ಎಂದು. ಆಳಂದ ತಾಲ್ಲೂಕಿನ ತಾಲ್ಲೂಕ ಪ್ರಗತಿಪರ ಚಿಂತಕರು. ವಿಶೇಷ ಕರಾಟೆ ಪರಿಣಿತರು. ಸೇನಸ್ಸೈ ಮಹೇಂದ್ರ, ಕ್ಷಿರಸಾಗರ ಅವರು ತಮ್ಮ ಅಭಿಪ್ರಾಯವನ್ನು ಪತ್ರಿಕಾ ಪ್ರಕಟಣೆಯ ಮೂಲಕ ವ್ಯಕ್ತಪಡಿಸಿದ್ದಾರೆ.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಹಲವಾರು ಕರಾಟೆ ಶಿಕ್ಷಕರು ತರಬೇತಿ ನೀಡಿದ್ದಾರೆ ಆದರೆ ಅನುದಾನ ಇದುವರೆಗೆ ಬಿಡುಗಡೆ ಆಗಿಲ್ಲ ಕೂಡಲೇ ಬಿಡುಗಡೆಗೊಳಿಸಬೇಕು ಇಲ್ಲದಿದ್ದರೆ ಮುಂದೆ ಬರುವಂತಹ ದಿನಗಳಲ್ಲಿ ಸರಕಾರದ ವಿರುದ್ಧ ಕರಾಟೆ ಶಿಕ್ಷಕರೊಂದಿಗೆ ಸರ್ಕಾರಿ ವಿರೋಧಿ ಜಾಗೃತಿ ಅಭಿಯಾನ ನಡೆಸಿ ವಿರೋಧ ವ್ಯಕ್ತಪಡಿಸಲಾಗುವುದು ಈ ಕೂಡಲೇ ಇದಕ್ಕೆ ಸಂಬಂಧಪಟ್ಟ ಇಲಾಖೆಯ ಸಚಿವರು ಎಚ್ಚೆತ್ತುಕೊಂಡು ಸ್ಥಗಿತಗೊಂಡ ಕರಾಟೆ ಶಿಕ್ಷಕರ ಅನುದಾನವನ್ನು ಬಿಡುಗಡೆಗೊಳಿಸಬೇಕು ಎಂದು ಆಳಂದ ತಾಲ್ಲೂಕ ಕರಾಟೆ ಶಿಕ್ಷಕರಾದ ಸೆನಸ್ಸೈ ಮಹೇಂದ್ರ ಕ್ಷಿರಸಾಗರ್ ಅವ್ರು ಪತ್ರಿಕಾ ಪ್ರಕಟಣೆಯಲ್ಲಿ ಸರಕಾರಕ್ಕೆ ಆಗ್ರಹಿಸಿದ್ದಾರೆ.

> **ಆದರೆ ಇಂದಿನ ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಎಚ್.ಸಿ ಮಹದೇವಪ್ಪನವರು ಯಾಕೆ ಮೀನಾ ಮೇಷ ಎಣಿಸುತ್ತಿದ್ದಾರೆ ಎಂಬುವುದು ಗೊತ್ತಾಗುತ್ತಿಲ್ಲ ಕರಾಟೆ ಶಿಕ್ಷಕರ ಅನುದಾನ ಕೆಲವು ಜಿಲ್ಲೆಗಳಲ್ಲಿ ಶಾಲೆಯ ಖರ್ಚು ವೆಚ್ಚಗಳ ಅನುದಾನದಲ್ಲಿ ಕೊಟ್ಟಿದ್ದಾರೆ ಹಾಗದ್ರೆ ಸರ್ಕಾರದ ಖಜಾನೆಯಲ್ಲಿ ದುಡ್ಡಿಲ್ಲವೇ ಅಥವಾ ಸರಕಾರ ದಿವಾಳಿಯಾಗಿದೆಯೇ ಎಂಬುವುದು ಯಕ್ಷ ಪ್ರಶ್ನೆಯಾಗಿದೆ.**

# ಉದ್ಧವ್ ಠಾಕ್ರೆ ಕಾರಿನ ಮೇಲೆ ಸಗಣಿ ಎಸೆತ: 30ಕ್ಕೂ ಹೆಚ್ಚು ಯುವಕರ ಬಂಧನ

• ಉದಯವಾಹಿನಿ, ಬೆಳಗಾವಿ

ಮಹಾರಾಷ್ಟ್ರದ ಮುಂಬೈ ನಗರದ ಬಳಿ ಇರುವ ಥಾಣೆಯಲ್ಲಿ ಶನಿವಾರ, ಅಲ್ಲಿ ಮಾಜಿ ಮುಖ್ಯಮಂತ್ರಿ ಉದ್ಧವ್ ಠಾಕ್ರೆ ಅವರ ಕಾರಿನ ಮೇಲೆ ಸಗಣಿ, ಮೊಟ್ಟೆ, ಬದನೆಕಾಯಿ, ಬಲೆ ಎಸೆಯಲಾದೆ. ಇದರಿಂದ ಥಾಣೆ ಸುತ್ತಲಿನ ಪ್ರದೇಶದಲ್ಲಿ ವಾತಾವರಣ ಬಿಗುವಿನಿಂದ ಕೂಡಿದೆ.

ಉದ್ಧವ್ ಅವರು ಶಿವಸೇನೆಯ ತಮ್ಮ ಬಣದ ಕಾರ್ತಕರ್ತರ ಸಮಾವೇಶದಲ್ಲಿ ಪಾಲ್ಗೊಳ್ಳಲು ಹೊರಟಿದ್ದರು. ಮಾರ್ಗಮಧ್ಯದಲ್ಲಿ ಕಾರು ಅಡ್ಡಗಟ್ಟಿದ ಕಿಡಿಗೇಡಿಗಳು ಕೈಯಲ್ಲಿದ್ದ ವಸ್ತುಗಳನ್ನು ಕಾರಿನ ಮೇಲೆ ತೂರಿದರು. ಇದರಿಂದ ಕೆಲಕಾಲ ಸ್ಥಳದಲ್ಲಿ


ಉದಯವಾಹಿನಿ ಚಿತ್ರ

ಆತಂಕದ ವಾತಾವರಣ ನಿರ್ಮಾಣವಾಯಿತು. ಕಾರ್ ಸುತ್ತುವರಿದ ಪೊಲೀಸರು ಉದ್ಧವ್ ಠಾಕ್ರೆ ಅವರ ರಕ್ಷಣೆಗೆ ಧಾವಿಸಿದರು ಎಂದು ಮೂಲಗಳು ತಿಳಿಸಿವೆ. ಮಹಾರಾಷ್ಟ್ರ ನವ ನಿರ್ಮಾಣ ಸೇನೆ (ಮನಸೇ) ಸಂಸ್ಥಾಪಕ ರಾಜ್ ಠಾಕ್ರೆ ಅವರ ಬೆಂಬಲಿಗರೇ ದಾಳಿ ಮಾಡಿದ್ದಾರೆ. ಥಾಣೆಯ ಸಂಭಾಜಿ ನಗರದಲ್ಲಿ ಆಯೋಜಿಸಿದ್ದ ಉದ್ಧವ್ ಬೆಂಬಲಿಗರ ಸಮಾವೇಶಕ್ಕೂ 'ಮನಸೇ' ಕಾರ್ಯಕರ್ತರು ನುಗ್ಗಲು ಯತ್ನಿಸಿದರು. ಉದ್ಧವ್ ಮೇಲೆ ದಾಳಿ ಮಾಡಿದ್ದಾಗಿ ಘೋಷಣೆ ಕೂಗಿದರು ಎಂದು ಮಹಾರಾಷ್ಟ್ರದ ಮೂಲಗಳು ತಿಳಿಸಿವೆ. ಪ್ರಕರಣಕ್ಕೆ ಸಂಬಂಧಿಸಿದಂತೆ 30ಕ್ಕೂ ಹೆಚ್ಚು ಯುವಕರನ್ನು ಬಂಧಿಸಲಾಗಿದೆ.

ಮಹಾರಾಷ್ಟ್ರದಲ್ಲಿ ವಿಧಾನಸಭೆ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಈ ದಾಳಿ ಕೂಡ ರಾಜಕೀಯ ಪ್ರೇರಿತವಾಗಿ ನಡೆದಿದೆ ಎಂದು ಮೂಲಗಳು ಹೇಳಿವೆ.

# ತುಂಬಿದ ಭದ್ರೆಯ ಮಡಿಲಿಗೆ ಬಾಗಿನ ಅರ್ಪಣೆ

• ಉದಯವಾಹಿನಿ, ಶಿವಮೊಗ್ಗ

ಭದ್ರೆಗೆ ಬಾಗಿನ ಅರ್ಪಿಸಿದ್ದೇವೆ. ತುಂಬಾ ಸಂತೋಷವಾಯ್ತು ಎಂದು ಶಿವಮೊಗ್ಗದಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿಕೆ ನೀಡಿದ್ದಾರೆ. ಭಾನುವಾರ ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಮುಂಗಾರು ಮಳೆ ಜಾಸ್ತಿಯಾಗಿದೆ. ಬಹಳಷ್ಟು ಮಳೆಯಾಗಿ ಹಳ್ಳ ಕೊಳ್ಳ ಜಲಾಶಯ ತುಂಬಿ ಹರಿಯುತ್ತಿವೆ. ರಾಜ್ಯ ಸಮೃದ್ಧಿಯಾಗಿದೆ. ಮಲೆನಾಡು ನೋಡಿ ತುಂಬಾ ಸಂತೋಷವಾಯ್ತು ಎಂದು ಭದ್ರೆಗೆ ಬಾಗಿನ ಅರ್ಪಿಸಿ ಲಕ್ಷ್ಮಿ ಹೆಬ್ಬಾಳ್ಕರ್ ಸಂತಸ ವ್ಯಕ್ತಪಡಿಸಿದ್ದಾರೆ.ಇದೇ ವೇಳೆ ತುಂಗಾಭದ್ರಾ ಗೇಟ್ ಓಪನ್ ವಿಚಾರವಾಗಿ ಮಾತನಾಡಿದ ಅವರು, 'ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಸಿಎಂ ಸೂಚನೆ ನೀಡಿದ್ದಾರೆ. ನೀರಾವರಿ ಸಚಿವರು ಈಗಾಗಲೇ ಅಲ್ಲಿಗೆ ಹೋಗಿದ್ದಾರೆ. ಎಲ್ಲಾ ರೀತಿಯ ಪ್ರಯತ್ನ ನಮ್ಮ ಸರ್ಕಾರ ಹಾಗೂ ಅಧಿಕಾರಿಗಳು ಮಾಡ್ತಾ ಇದ್ದಾರೆ. ಪ್ರತಿಯೊಂದಕ್ಕೂ ಕರ್ತವ್ಯ ಲೋಪ ಅಂತಾ ಹೇಳೊಕೆ ಆಗೋಲ್ಲ. ಚೆಕ್ ಮಾಡಬೇಕು, ಕಳೆದ ಬಾರಿ ಬರಗಾಲ ಆಗಿತ್ತು. ಈ ಬಾರಿ ಉತ್ತಮ ಮಳೆಯಾಗಿದೆ. ಡ್ಯಾಂ ಭರ್ತಿಯಾಗಿವೆ ಎಂದರು. ಕಾಂಗ್ರೆಸ್ ನವರು 50 ವರ್ಷದಲ್ಲಿ ಏನು ಮಾಡಿದ್ದಾರೆ. ಡ್ಯಾಂ ಕಟ್ಟಿದ್ದು ನಮ್ಮ ಕಾಂಗ್ರೆಸ್ ಸರ್ಕಾರ, ಡ್ಯಾಂ ದುರಸ್ತಿ ಆಗಬೇಕಿದೆ. ಎಲ್ಲಾ ಡ್ಯಾಂ ನಲ್ಲೂ ಸಣ್ಣ ಪುಟ್ಟ ಲೋಪ ಇವೆ. ಮುಂಜಾಗ್ರತಾ ಕ್ರಮ ಏನ್ ಆಗಬೇಕು ಅದು ನಮ್ಮ ಸರ್ಕಾರ ತೆಗೆದುಕೊಳ್ಳುತ್ತದೆ ಎಂದರು.

# ತ್ವರಿತವಾಗಿ ಕೂಲಿ ಹಣವನ್ನು ಪಾವತಿ ಮಾಡುವಂತೆ ಒತ್ತಾಯ

## ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ಮಾಡಿದ್ದ ಜಿಲ್ಲೆಯ ಕಾರ್ಮಿಕರಿಗೆ ಒಂದೂವರೆ ತಿಂಗಳಿನಿಂದ ವೇತನ ಪಾವತಿಯಾಗಿಲ್ಲ

• ಉದಯವಾಹಿನಿ, ಹಾವೇರಿ

ಕೇಂದ್ರ ಸರ್ಕಾರದ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ (ನರೇಗಾ) ಕೆಲಸ ಮಾಡಿದ್ದ ಜಿಲ್ಲೆಯ ಕಾರ್ಮಿಕರಿಗೆ ಒಂದೂವರೆ ತಿಂಗಳಿನಿಂದ ವೇತನ ಪಾವತಿಯಾಗಿಲ್ಲ. ಅರ್ಹ ಫಲಾನುಭವಿಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ತ್ವರಿತವಾಗಿ ಕೂಲಿ ಹಣವನ್ನು ಪಾವತಿ ಮಾಡುವಂತೆ ಒತ್ತಾಯಿಸುತ್ತಿದ್ದಾರೆ. ದುಡಿಯುವ ಕೈಗಳಿಗೆ ಕೆಲಸ ನೀಡುವ ಉದ್ದೇಶದಿಂದ ನರೇಗಾ ಆರಂಭಿಸಲಾಗಿದೆ. ಇದೇ ಯೋಜನೆಯಡಿ ಅತಿ ಹೆಚ್ಚು ಉದ್ಯೋಗ ಸೃಜನೆ ಮಾಡಿದ ಜಿಲ್ಲೆಗಳ ಪಟ್ಟಿಯಲ್ಲಿ ಹಾವೇರಿ ಅತ್ಯುತ್ತಮ ಸ್ಥಾನದಲ್ಲಿದೆ. ಆದರೆ, ಇದೀಗ ಹಾವೇರಿಯ ಜಿಲ್ಲೆಯ ಕಾರ್ಮಿಕರಿಗೆ ನೀಡಬೇಕಾದ 17.80 ಕೋಟಿ ಕೂಲಿ ಬಾಕಿ ಉಳಿದಿದೆ. ಮಳೆ ಅಭಾವದಿಂದ ರಾಜ್ಯದಲ್ಲಿ ಎದುರಾದ ಬರಗಾಲದ ಸಂದರ್ಭದಲ್ಲಿ ಗ್ರಾಮೀಣ ಭಾಗದ ಜನರಿಗೆ ನರೇಗಾ ಮೂಲಕ ಹೆಚ್ಚಿನ ಕೆಲಸ ಮಾಡುವ ಅವಕಾಶ ಕಲ್ಪಿಸಲಾಗಿತ್ತು. ಪ್ರಸಕ್ತ ವರ್ಷದ ಆರಂಭದಲ್ಲೂ ಫಲಾನುಭವಿಗಳಿಗೆ ಕೆಲಸ ನೀಡಲಾಗಿತ್ತು.ಗ್ರಾಮ ಪಂಚಾಯಿತಿಗಳು, ಇತರ ಇಲಾಖೆಗಳ ಸಹಕಾರದಿಂದ ಯೋಜನೆಯಡಿ ಕಾರ್ಮಿಕರಿಗೆ ಕೆಲಸ ಒದಗಿಸಲಾಗಿತ್ತು. ಆದರೆ, ಏಪ್ರಿಲ್ ವರೆಗೂ ಫಲಾನುಭವಿಗಳ ಖಾತೆಗೆ ನೇರವಾಗಿ ವೇತನ ಪಾವತಿಯಾಗಿದೆ. ನಂತರದ ದಿನಗಳಲ್ಲಿ ವೇತನ ಪಾವತಿ ದಿನಗಳಲ್ಲಿ ವ್ಯತ್ಯಾಸವಾಗಿತ್ತು. ಒಂದೂವರೆ ತಿಂಗಳಿನಿಂದ ಯಾವುದೇ ಫಲಾನುಭವಿಗಳ ಖಾತೆಗಳಿಗೆ ಹಣ ಸಂದಾಯವಾಗಿಲ್ಲವೆಂದು ಕಾರ್ಮಿಕರು ದೂರುತ್ತಿದ್ದಾರೆ. ಜಿಲ್ಲೆಯ 223 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಹೆಚ್ಚು ಕೆಲಸಗಳನ್ನು ಮಾಡಲಾಗುತ್ತಿದೆ. ಅಗತ್ಯವಿರುವ ಎಲ್ಲರಿಗೂ ಕೆಲಸ ನೀಡಲಾಗುತ್ತಿದೆ. ಈಚಿನ ದಿನಗಳಲ್ಲಿ ಸಮರ್ಪಕವಾಗಿ ವೇತನ ಪಾವತಿಯಾಗದಿದ್ದರಿಂದ, ಕಾರ್ಮಿಕರು ಕೆಲಸಕ್ಕೆ ಹೋಗಲು ಹಿಂದೇಟು ಹಾಕುತ್ತಿದ್ದಾರೆ.

'ನರೇಗಾ ಯೋಜನೆಯಡಿ ಕೆಲಸ ಮಾಡಿದ್ದ ಕಾರ್ಮಿಕರಿಗೆ ಒಂದೂವರೆ ತಿಂಗಳಿನಿಂದ ವೇತನ ಬಂದಿಲ್ಲ. ಶ್ರಾವಣ ಮಾಸ ಆರಂಭವಾಗಿರುವುದರಿಂದ ಹಬ್ಬಗಳು ಬರುತ್ತಿವೆ. ಹಬ್ಬದ ಆಚರಣೆಗೆ ಹಣದ ಅಗತ್ಯವಿದೆ. ವೇತನ ಬಂದರೆ, ಹಬ್ಬ ಮಾಡಬಹುದೆಂದು ಕಾರ್ಮಿಕರು ಅಂದುಕೊಂಡಿದ್ದರು. ಆದರೆ, ಈಗ ಹಣ ಸಂದಾಯವಾಗಿಲ್ಲ. ಕಾರ್ಮಿಕರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ' ಎಂದು ಮಹಾತ್ಮ ಗಾಂಧೀಜಿ ಕಟ್ಟಡ ಮತ್ತು ಇತರೆ ಕೂಲಿ ಕಾರ್ಮಿಕರ ಸಂಘಟನೆ ಪದಾಧಿಕಾರಿಗಳು ತಿಳಿಸಿದರು. 'ಕೇಂದ್ರ ಸರ್ಕಾರವೇ ನರೇಗಾ ಯೋಜನೆ ಜಾರಿಗೆ ತಂದಿದೆ. ಹಣ ಬಿಡುಗಡೆ ಜವಾಬ್ದಾರಿಯೂ ಕೇಂದ್ರ ಸರ್ಕಾರದ ಮೇಲಿದೆ. ವೇತನ ಪಾವತಿ ವಿಳಂಬ ಮಾಡುತ್ತಿರುವುದಕ್ಕೆ ಕಾರಣವೇನು ಎಂಬ ಬಗ್ಗೆಯೂ ಮಾಹಿತಿಯಿಲ್ಲ. ಕೇಂದ್ರ ಸರ್ಕಾರದ ಸಂಬಂಧಪಟ್ಟ ಅಧಿಕಾರಿಗಳು, ಕೂಡಲೇ ಹಣ ಬಿಡುಗಡೆ ಮಾಡಬೇಕು' ಎಂದು ಅವರು ಹೇಳಿದರು. 'ಬಾಕಿ ವೇತನ ಬಾಕಿ ಸಂಬಂಧ ಹಾವೇರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಅಕ್ಷಯ್ ಶ್ರೀಧರ್ ಅವರಿಗೆ ಮನವಿ ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರದಿಂದಲೇ ಹಣ ಬಿಡುಗಡೆಯಾಗಿಲ್ಲವೆಂದು ಅವರು ಹೇಳುತ್ತಿದ್ದಾರೆ' ಎಂದು ಅಳಲು ತೋಡಿಕೊಂಡರು. ನರೇಗಾ ಯೋಜನೆಯ ಹಣ ಪಾವತಿ ನಿರ್ವಹಣೆಯನ್ನು ಕೇಂದ್ರ ಸರ್ಕಾರವೇ ನೋಡಿಕೊಳ್ಳುತ್ತಿದೆ. ಹಾವೇರಿ ಜಿಲ್ಲೆ ಮಾತ್ರವಲ್ಲದೇ ರಾಜ್ಯದ ಎಲ್ಲಾ ಜಿಲ್ಲೆಯಲ್ಲೂ ಒಂದೂವರೆ ತಿಂಗಳಿನಿಂದ ವೇತನ ಬಾಕಿ ಇದೆ' ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಯೊಬ್ಬರು ಹೇಳಿದರು.


ಉದಯವಾಹಿನಿ ಚಿತ್ರ

**17.80 ಕೋಟಿ ನರೇಗಾ ಕೂಲಿ ಬಾಕಿ**

> **ದುಡಿಮೆಯ ಹಣ ನೇರವಾಗಿ ಫಲಾನುಭವಿಗಳ ಖಾತೆಗೆ ಜಮೆ ಆಗುತ್ತದೆ. ಇದರಲ್ಲಿ ಮಧ್ಯವರ್ತಿಗಳ ಹಾವಳಿ ಇಲ್ಲ. ಕೇಂದ್ರ ಸರ್ಕಾರ ಹಣ ಪಾವತಿ ಮಾಡಿದರೆ ಫಲಾನುಭವಿಗಳ ಖಾತೆಗೆ ಹೋಗುತ್ತದೆ. ಕೂಲಿ ಹಾಕಿದ ಬಗ್ಗೆ ಕೇಂದ್ರ ಸರ್ಕಾರದ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ**
>
> -ಅಕ್ಷಯ್ ಶ್ರೀಧರ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ

# ಮಿನಿ ನ್ಯೂಸ್

## ನಾಗರಹಾವಿಗೆ ಯಶಸ್ವಿ ಶಸ್ತ್ರಚಿಕಿತ್ಸೆ

• ಉದಯವಾಹಿನಿ, ಹಾವೇರಿ

ನಗರದ ಹಳೆಯ ಕಟ್ಟಡ ತೆರವು ಸಂದರ್ಭದಲ್ಲಿ ಗಂಭೀರವಾಗಿ ಗಾಯ ಗೊಂಡು ನರಳಾಡುತ್ತಿದ್ದ ನಾಗರಹಾವಿಗೆ ಇಲ್ಲಿನ ಪಾಲಿಕ್ಲಿನಿಕ್‌ನ ಪಶು ವೈದ್ಯ ಡಾ.ಸಣ್ಣಭೀರಪ್ಪ ಯಶಸ್ವಿಯಾಗಿ ಶಸ್ತ್ರಚಿಕಿತ್ಸೆ ಮಾಡಿದ್ದಾರೆ. ಹಾವೇರಿ ನಗರದ ಕನಕಾಪುರ ರಸ್ತೆಯ ರಾಜಸ್ಥಾನ ಡಾಬಾ ಹಳೆಯ ಕಟ್ಟಡವನ್ನು ತೆರವುಗೊಳಿಸುತ್ತದ್ದ ವೇಳೆ ಅವೇಶಷಗಳಡಿಯಲ್ಲಿ ಸಿಲುಕಿ ನಾಗರಹಾವು ಗಾಯಗೊಂಡು ಒದ್ದಾಡುತ್ತಿತ್ತು. ಕೂಡಲೆ ಡಾಬಾದವರು ಉರಗ ರಕ್ಷಕ ನಾಗರಾಜ ಬೈರಣ್ಣನವರಿಗೆ ವಿಷಯ ತಿಳಿಸಿದ್ದಾರೆ. ಸ್ಥಳಕ್ಕೆ ಬಂದ ಉರಗ ರಕ್ಷಕ ಬೈರಣ್ಣ ಹಾವನ್ನು ರಕ್ಷಿಸಿ, ಚೀಲದೊಳಗೆ ಹಾಕಿಕೊಂಡು ಪಾಲಿಕ್ಲಿಕ್‌ಗೆ ತೆಗೆದಯಕೊಂಡು ಹೋಗಿದ್ದಾರೆ. ಅಲ್ಲಿ ಪಶುವೈದ್ಯಾಧಿಕಾರಿ ಡಾ.ಸಣ್ಣಭೀರಪ್ಪ ಹಾವನ್ನು ತಪಾಸಣೆ ಮಾಡಿ ಶಸ್ತ್ರಚಿಕಿತ್ಸೆಗೆ ಸಿದ್ದತೆ ಮಾಡಿದ್ದಾರೆ. ಬಳಿಕ, ಹಾವಿಗೆ ಅನಸ್ತೇಶಿಯಾ ನೀಡಿ ಪ್ರಜ್ಞೆ ತಪ್ಪಿಸಿ, ಯಶಸ್ವಿಯಾಗಿ ಶಸ್ತ್ರಚಿಕಿತ್ಸೆ ನೀಡಿದ್ದಾರೆ.

## ಬೀದರ್ ಪೊಲೀಸರ ಕಾರ್ಯಾಚರಣೆ 12 ಲಕ್ಷ ರೂ. ವಸ್ತು ಜಪ್ತಿ

• ಉದಯವಾಹಿನಿ, ಬೀದರ್

ಕಳ್ಳತನವಾಗಿದ್ದ 12 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ಬೀದರ್ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ ಜಪ್ತಿ ಮಾಡಿದ್ದಾರೆ. ಭಾಲ್ಕಿ, ಮೇಹಕರ್, ಹುಮ್ನಾಬಾದ್ ಪೊಲೀಸ್ ಠಾಣೆಗಳಲ್ಲಿ ಕಳ್ಳತನದ ವಿವಿಧ ಪ್ರಕರಣಗಳು ದಾಖಲಾಗಿದ್ದವು. ಪ್ರಕರಣದ ಬೆನ್ನು ಹತ್ತಿದ ಪೊಲೀಸರು 11 ಕಳ್ಳತನದ ಪ್ರಕರಣಗಳನ್ನು ಭೇದಿಸಿ ಬಂಗಾರ, ಬೆಳ್ಳಿ, ದ್ವಿಚಕ್ರ ವಾಹನ, ಎಮ್ಮೆ ಸೇರಿದಂತೆ 12 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಮಂದಿರ ಕಳ್ಳತನ ಪ್ರಕರಣದಲ್ಲಿ 11 ಗ್ರಾಂ ಬೆಳ್ಳಿ ಮತ್ತು 1 ಗ್ರಾಂ ಚಿನ್ನಾಭರಣ ಹಾಗೂ ತೆಲಂಗಾಣದಲ್ಲಿ ಕಳ್ಳತನವಾಗಿದ್ದ 10 ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಲಾಗಿದೆ. ಎಮ್ಮೆ ಕಳ್ಳತನ ಪ್ರಕರಣ ಭೇದಿಸಿದ ಮೇಹಕರ್ ಠಾಣೆಯ ಪೊಲೀಸರು ಸೂಮಾರು 7 ಲಕ್ಷ ರೂ. ಬೆಲೆಬಾಳುವ ಎಮ್ಮೆ ವಶಕ್ಕೆ ಪಡೆದುಕೊಂಡಿದ್ದಾರೆ. ಘಟನೆಗೆ ಸಂಬಂಧಿಸಿದಂತೆ 5 ಜನ ಆರೋಪಿಗಳನ್ನು ಬಂಧಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

## ಜಲಾಶಯದ ಸುರಕ್ಷತೆ ಮುಖ್ಯ ಶಿವರಾಜ್ ತಂಗಡಗಿ

• ಉದಯವಾಹಿನಿ, ಹೊಸಪೇಟೆ

ಡ್ಯಾಂ ಅಧಿಕಾರಿಗಳಿಂದ ಮಾಹಿತಿ ಪಡೆದಿರುವೆ. ಜಲಾಶಯಕ್ಕೆ ತಜ್ಞರು ಬೇಟಿ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ಹೇಳಿದರು. ಟಿಬಿಡ್ಯಾಂ ಕ್ರಷ್ಟ್ ಗೇಟ್ ಚೈನ್ ಕಟ್ ಪ್ರಕರಣ ಹಿನ್ನೆಲೆ ಸ್ಥಳಕ್ಕೆ ಬೇಟಿ ನೀಡಿದ ಅವರು, ಸದ್ಯದ ಮಾಹಿತಿ ಪ್ರಕಾರ 50 ರಿಂದ 60 ಟಿಎಂಸಿ ಕಾಲಿ ಮಾಡಬೇಕಿದೆ.20 ಅಡಿ ನೀರು ಕಡಿಮೆಯಾಗಬೇಕು. ಚೈನ್ ಲಿಂಕ್ ಪುರ್ಣ ಕಟ್ ಆಗಿದೆ. ನೀರು ಕೆಳಗೆ ಇಳಿದ ಮೇಲೆ ಗೊತ್ತಾಗಲಿದೆ ಎಂದು ಅಧಿಕಾರಿಗಳು ಹೇಳುತ್ತಿದ್ದಾರೆ. ಡ್ಯಾಂ ಡಿಸೈನ್ ಮಾಡಿದ ಅಧಿಕಾರಿಗಳು, ಇಂಜಿನಿಯರ್‌ಗಳು ಹೈದರಾಬಾದ್ ನಿಂದ ಬರಲಿದ್ದಾರೆ ಎಂದರು.

ನೀರಿನ ಪೋರ್ಸ್ ಪ್ರಮಾಣ ತುಂಬಾ ಇದೆ, ಹೀಗಾಗಿ ಅಲ್ಲಿ ಇಳಿದು ಕೆಲಸ ಮಾಡಲು ಆಗ್ತಿಲ್ಲ. ಡ್ಯಾಂ ನ 32 ಗೇಟ್ ಗಳನ್ನ ಓಪನ್ ಮಾಡಲಾಗಿದೆ. ಈಗ 1 ಲಕ್ಷ ಕ್ಯೂಸೆಕ್ ನೀರು ಹೊರ ಹೋಗುತ್ತಿದೆ. ಎಲ್ಲಾ ಗೇಟ್ ಓಪನ್ ಮಾಡಿರೋದರಿಂದ ಹಳ್ಳಿಗಳಿಗೆ ಎಲ್ಲಾ ಕಡೆ ಮಾಹಿತಿ ನೀಡಿದ್ದೇವೆ. 2.35 ಸಾವಿರ ಕ್ಯೂಸೆಕ್ ವರೆಗೆ ನೀರು ಬಿಟ್ಟರೆ ಯಾವುದೇ ಎಫೇಕ್ಟ್ ಆಗಲ್ಲ. 2.35 ಲಕ್ಷ ನೀರು ಬಿಟ್ಟರೆ ಕೆಲವು ಕಡೆ ಎಫೆಕ್ಟ್ ಆಗುವ ಸಾಧ್ಯತೆಯಿದೆ. ಸದ್ಯ ನಾವು ಡ್ಯಾಂ ಸೇಪ್ಟಿ ಬಗ್ಗೆ ನೋಡ್ತಾಯಿದ್ದೇವೆ. ತಜ್ಞರು ಬಂದು ನಂತರ ಎನೂ ಮಾಡಬೇಕು ಎಂದು ತಿರ್ಮಾನ ಮಾಡುತ್ತೇವೆ. ಸಿಎಂ ಅವರ ಗಮನಕ್ಕೆ ತರುವೆ ಎಂದರು. ಈಗ 65 ಟಿಎಂಸಿ ನೀರು ಖಾಲಿ ಮಾಡಿದ ಬಳಿಕವೇ ಅಲ್ಲಿ ಕೆಲಸ ಮಾಡಲು ಬರತ್ತದೆ. ಅಗಷ್ಟ 13 ಕ್ಕೆ ಸಿಎಂ ಸಿದ್ದರಾಮಯ್ಯ ಭಾಗಿನ ಅರ್ಪಿಸೋದು ಕಾರ್ಯಕ್ರಮ ಆ.16 ನಿಗದಿಯಾಗಿತ್ತು. ನೋಡನ ಮುಂದೆ ಎನಾಗತ್ತೆ ಅಂತ ಎಂದರು.

## ಟಿಬಿ ಡ್ಯಾಂನಲ್ಲಿ ಸಣ್ಣ ತಪ್ಪು ದೊಡ್ಡದಾಗಿದೆ: ಟಿಬಿಬಿ ಕಾರ್ಯದರ್ಶಿ

• ಉದಯವಾಹಿನಿ, ಹೊಸಪೇಟೆ

ತುಂಗಭದ್ರಾ ಜಲಾಶಯದ ನಿರ್ವಹಣೆಯಲ್ಲಿ ಸಮಸ್ಯೆಯಾಗಿದ್ದು, ಸಣ್ಣ ಸಮಸ್ಯೆ ಈಗ ದೊಡ್ಡದಾಗಿದೆ ಎಂದು ಟಿಬಿಬಿ ಕಾರ್ಯದರ್ಶಿ ಒ.ಆರ್.ಕೆ. ರೆಡ್ಡಿ ಹೇಳಿದರು. ನಗರದ ಟಿಬಿಡ್ಯಾಂನ ವೈಕುಂಟದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಜ್ಞರ ಸರ್ವ ಏಜನ್ಸಿ ಕಳೆದ ವರ್ಷ ಪರಿಶೀಲಿಸಿ ಇನ್ನೂ 70 ವರ್ಷ ಗೇಟ್‌ಗಳು ಎನು ಆಗಲ್ಲ ಎಂದು ವರದಿ ನೀಡಿತು. ಪ್ರತಿ ವರ್ಷ ಜಲಾಶಯಕ್ಕೆ ಶೇ.7 5 ರಷ್ಟು ದುರಸ್ತಿ ಕಾರ್ಯನ ಡೆಯು ತ್ತದೆ. 5 ವರ್ಷಕ್ಕೊಮ್ಮೆ ಸರ್ವೇ ನಡೆಯುತ್ತದೆ.

ಈ ಬಾರಿಯೂ ನಿರ್ವಹಣೆ ಮಾಡಲಾಗಿದೆ ಶೇ.50 ರಷ್ಟು ಜಲಾಶಯ ಖಾಲಿಯಾಗಲೇಬೇಕು.ಆಗ ಜಲಾಶಯದ ಗೇಟ್ ದುರಸ್ತಿ ಕಾರ್ಯ ನಡೆಯಲಿದೆ. ಇನ್ನೂ ಎರಡು ಮೂರು ದಿನಗಳ ವರೆಗೆ ನೀರು ಹೊರಗೆ ಹೋಗಲಿದೆ. ಜಲಾಶಯ ಪರಿಶೀಲನೆಗೆ ತಜ್ಞರ ತಂಡ ಇನ್ನೂ ಬರಬೇಕಿದೆ. ನಂತರ ದುರಸ್ತಿ ಕಾರ್ಯ ನಡೆದಿದೆ.

## ಲಾರ್ವ ಸಮೀಕ್ಷಾ ಅಭಿಯಾನಕ್ಕೆ ಎ.ಸಿ ಚಾಲನೆ


• ಉದಯವಾಹಿನಿ, ತರೀಕೆರೆ

ಪಟ್ಟಣದ ಬಯಲು ರಂಗಮಂದಿರದಲ್ಲಿ 'ಲಾರ್ವ ಸಮೀಕ್ಷಾ ಅಭಿಯಾನ'ಕ್ಕೆ ಉಪ ವಿಭಾಗಾಧಿಕಾರಿ ಡಾ.ಕೆ.ಜೆ. ಕಾಂತರಾಜ್ ಚಾಲನೆ ನೀಡಿದರು. ತರೀಕೆರೆ ಮತ್ತು ಅಜ್ಜಂಪುರ ಪಟ್ಟಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಕಂದಾಯ, ಆರೋಗ್ಯ ಇಲಾಖೆ, ಪುರಸಭೆ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಯೋಗದಲ್ಲಿ 'ಡೆಂಗಿ ನಿಯಂತ್ರಿಸಲು ಲಾರ್ವ ಸಮೀಕ್ಷಾ ಅಭಿಯಾನ'ವನ್ನು ಹಮ್ಮಿಕೊಳ್ಳಲಾಗಿತ್ತು.ತಹಶೀಲ್ದಾರ್ ವಿ.ಎಸ್. ರಾಜೀವ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಚಂದ್ರಶೇಖರ್ ಬಿ.ಜಿ, ಪುರಸಭಾ ಮುಖ್ಯಾಧಿಕಾರಿ ಪ್ರಶಾಂತ್, ಸಿಡಿಪಿಒ ಚರಣ್ ರಾಜ್, ಸಾರ್ವಜನಿಕ ಆಸ್ಪತ್ರೆಯ ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ. ದೇವರಾಜ, ರೇಡಿಯಾಲಜಿಸ್ಟ್ ಡಾ. ನಾಗರಾಜ್ ಇದ್ದರು. ತರೀಕೆರೆ ಪಟ್ಟಣದಲ್ಲಿ 8,010 ಮತ್ತು ಅಜ್ಜಂಪುರ ಪಟ್ಟಣದಲ್ಲಿ 3,115 ಮನೆಗಳಿಗೆ ಭೇಟಿ ನೀಡಲಾಯಿತು. ಎರಡು ಪಟ್ಟಣಗಳ 343 ಮನೆಗಳಲ್ಲಿ ಡೆಂಗಿ ಹರಡುವ ಈಡೀಸ್ ಸೊಳ್ಳೆಯ ಲಾರ್ವಗಳು ಕಂಡುಬಂದಿದ್ದು, ಲಾರ್ವ ಉತ್ಪತ್ತಿ ತಾಣಗಳನ್ನು ನಾಶಪಡಿಸಿ ಡೆಂಗಿ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು.

# ಅಮೆರಿಕ ಅಧ್ಯಕ್ಷೀಯ ಚುನಾವಣೆ ಪ್ರಚಾರದಲ್ಲಿ ಇರಾನ್ ಹ್ಯಾಕರ್‌ಗಳ ಕಿತಾಪತಿ

## ಪ್ರಚಾರ ಅಭಿಯಾನದ ವೆಬ್‌ಸೈಟ್ ಹ್ಯಾಕ್ ಮಾಡಲು ಯತ್ನ, ಸಾರ್ವಜನಿಕವಾಗಿ ಲಭ್ಯ ಇರುವ ಮಾಹಿತಿಗಳನ್ನಷ್ಟೇ ಹ್ಯಾಕ್ ಮಾಡಲು ಶಕ್ತ

**ಇರಾನ್ ಸರ್ಕಾರ ಹ್ಯಾಕರ್‌ಗಳಿಂದ ಪ್ರಯತ್ನ**



**ಅಮೆರಿಕ:** ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಪ್ರಚಾರದಲ್ಲಿ ಇರಾನ್ ಸರ್ಕಾರ ಹಾಗೂ ಇರಾನ್‌ನ ಹ್ಯಾಕರ್‌ಗಳು ಮಧ್ಯ ಪ್ರವೇಶ ಮಾಡುತ್ತಿದ್ದಾರೆ ಎಂದು ರಿಪಬ್ಲಿಕನ್ ಪಕ್ಷದ ಅಧ್ಯಕ್ಷೀಯ ಚುನಾವಣಾ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಗಂಭೀರ ಆರೋಪ ಮಾಡಿದ್ದಾರೆ. ಚುನಾವಣಾ ಪ್ರಚಾರ ಸಭೆಯೊಂದರಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್, ಮೈಕ್ರೋಸಾಫ್ಟ್ ಸಂಸ್ಥೆಯು ಈ ಕುರಿತಾಗಿ ತಮ್ಮ ಗಮನಕ್ಕೆ ತಂದಿದೆ ಎಂದು ಹೇಳಿದ್ದಾರೆ.

ನಮ್ಮ ಪ್ರಚಾರ ಅಭಿಯಾನದ ವೆಬ್‌ಸೈಟ್ ಹ್ಯಾಕ್ ಮಾಡಲು ಇರಾನ್ ಸರ್ಕಾರ, ಹ್ಯಾಕರ್‌ಗಳು ಪ್ರಯತ್ನ ಮಾಡಿದ್ದರು. ಆದರೆ ಅವರು ಕೇವಲ ಸಾರ್ವಜನಿಕವಾಗಿ ಲಭ್ಯ ಇರುವ ಮಾಹಿತಿಗಳನ್ನಷ್ಟೇ ಹ್ಯಾಕ್ ಮಾಡಲು ಶಕ್ತರಾಗಿದ್ದಾರೆ. ಇದಕ್ಕಿಂತ ಹೆಚ್ಚಿನ ಮಾಹಿತಿ ಅವರಿಗೆ ಲಭ್ಯ ಆಗಿಲ್ಲ ಎಂದು ಟ್ರಂಪ್ ಹೇಳಿದ್ದಾರೆ. ಈ ಕುರಿತಾಗಿ ತಮ್ಮ ಟ್ರೂತ್ ಸಾಮಾಜಿಕ ಜಾಲತಾಣದಲ್ಲೂ ಬರೆದುಕೊಂಡಿರುವ ಟ್ರಂಪ್, ಇರಾನ್‌ನ ಹ್ಯಾಕರ್‌ಗಳು ಇದಕ್ಕಿಂತಲೂ ಹೆಚ್ಚಿನ ಹಾನಿ ಮಾಡಲು ಸಾಧ್ಯವಿಲ್ಲ ಎಂದಿದ್ದಾರೆ. ಆದರೆ, ಇರಾನ್ ಮತ್ತು ಇತರರು ಇಷ್ಟಕ್ಕೇ ನಿಲ್ಲೋದಿಲ್ಲ. ಏಕೆಂದರೆ ನಮ್ಮ ಸರ್ಕಾರ, ವ್ಯವಸ್ಥೆ ದುರ್ಬಲವಾಗಿದೆ, ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿಲ್ಲ. ಈ ಸನ್ನಿವೇಶ ತುಂಬಾ ದಿನ ಹೀಗೆಯೇ ಇರೋದಿಲ್ಲ ಎಂದೂ ಟ್ರಂಪ್ ಹೇಳಿದ್ದಾರೆ. ಇರಾನ್ ಹ್ಯಾಕರ್‌ಗಳು ಅಮೆರಿಕದ ಮಾಹಿತಿಗಳನ್ನ ಹ್ಯಾಕ್ ಮಾಡುತ್ತಿರುವ ಕುರಿತಾಗಿ ಮೊದಲಿಗೆ ಪೊಲಿಟಿಕೋ ಮಾಧ್ಯಮ ಮಾಹಿತಿ ನೀಡಿತ್ತು. ಈ ಕುರಿತಾಗಿ ಜುಲೈನಿಂದಲೇ ಇಮೇಲ್ ಬರಲು ಆರಂಭಿಸಿತ್ತು. ಅನಧಿಕೃತ ಬೇನಾಮಿ ಖಾತೆಗಳಿಂದ ಮೇಲ್ ಬರುತ್ತಿತ್ತು. ರಿಪಬ್ಲಿಕನ್ ಪಕ್ಷದ ಉಪಾಧ್ಯಕ್ಷ ಚುನಾವಣಾ ಅಭ್ಯರ್ಥಿ ಜೆ. ಡಿ. ವ್ಯಾನ್ಸ್ ಅವರ ಮಾಹಿತಿ ಕಳ್ಳತನಕ್ಕೂ ಯತ್ನಗಳು ನಡೆದಿದ್ದವು.

ಈ ಕುರಿತಾಗಿ ಮೈ ಕ್ರೋ ಸಾಫ್ಟ್ ಸಂಸ್ಥೆ ಈ ಕುರಿತಾಗಿ ಪರಿಶೀಲನೆ ನಡೆಸಿತ್ತು. ಟ್ರಂಪ್ ಅವರ ಪ್ರಚಾರ ಸಂಸ್ಥೆ ತನ್ನ ಮಾಹಿತಿ ಕಳ್ಳತನ ಆಗಿರುವ ಕುರಿತಾಗಿ ಒಪ್ಪಿಕೊಂಡಿತ್ತು. ನವೆಂಬರ್‌ನಲ್ಲಿ ನಡೆಯಲಿರುವ ಅಮೆರಿಕ ಅಧ್ಯಕ್ಷೀಯ ಚುನಾವಣೆಗೆ ಪೂರ್ವಭಾವಿಯಾಗಿ ಈ ಹ್ಯಾಕಿಂಗ್ ನಡೆದಿತ್ತು. ಜೂನ್‌ನಲ್ಲೇ ಫಿಶಿಂಗ್ ಇಮೇಲ್‌ಗಳು ಅಮೆರಿಕಗೆ ಬರಲಾರಂಭಿಸಿತ್ತು. ಅದರಲ್ಲೂ ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಪ್ರಚಾರದಲ್ಲಿ ಭಾಗಿಯಾಗಿರುವ ಅತ್ಯುನ್ನತ ಅಧಿಕಾರಿಗಳಿಗೇ ಇಮೇಲ್‌ಗಳು ಬರು ತ್ತಿದ್ದವು ಎಂದು ಮೈಕ್ರೋಸಾಫ್ಟ್ ಹೇಳಿತ್ತು. ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಜೊತೆ ಸಂಪರ್ಕ ಹೊಂದಿರುವ ಇರಾನ್‌ನ ಗ್ರೂಪ್ ಈ ಕೆಲಸ ಮಾಡುತ್ತಿದೆ ಎಂದು ಮೈಕ್ರೋ ಸಾಫ್ಟ್ ಹೇಳಿತ್ತು. ಆದರೆ ಈ ಕುರಿತಾಗಿ ತಮ್ಮ ಪಾತ್ರ ಏನೂ ಇಲ್ಲ ಎಂದು ವಿಶ್ವ ಸಂಸ್ಥೆಯಲ್ಲಿ ಇರುವ ಇರಾನ್ ಪ್ರತಿನಿಧಿಗಳು ಹೇಳಿದ್ದಾರೆ. ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ನಾವು ಯಾವುದೇ ಹಸ್ತಕ್ಷೇಪ ಮಾಡೋದಿಲ್ಲ ಎಂದೂ ಇರಾನ್ ಹೇಳಿದೆ.

**ಮೈಕ್ರೋಸಾಫ್ಟ್ ವರದಿಯಲ್ಲಿ ಏನಿದೆ?**

**ಇರಾನ್ ಸರ್ಕಾರ ಹಾಗೂ ಹ್ಯಾಕರ್‌ಗಳು ಅಮೆರಿಕ ಅಧ್ಯಕ್ಷೀಯ ಚುನಾವಣೆಯನ್ನು ಗುರಿ ಯಾಗಿಸಿಕೊಂಡು ದಾಳಿ ನಡೆಸುತ್ತಿದ್ದಾರೆ. ಸುಳ್ಳು ಸುದ್ದಿ ಹರಡುವ ವೆಬ್‌ಸೈಟ್ ಮೂಲಕ ಮತದಾರರನ್ನು ಪ್ರಚೋದಿಸುತ್ತಿದ್ದಾರೆ. ಚುನಾವಣೆಯ ಪ್ರಚಾರ ಅಭಿಯಾನದ ಮಾಹಿತಿಯನ್ನು ಕಳ್ಳತನ ಮಾಡಲಾಗುತ್ತಿದೆ ಎಂದು ಹೇಳಿತ್ತು.**

**ಇರಾನ್ ಹಾಗೂ ಅಮೆರಿಕ ನಡುವಣ ಹಲವು ಕಾರಣಗಳಿಗೆ ನಡೆಯುತ್ತಿರುವ ಗುದ್ದಾಟ ಇದೀಗ ಮತ್ತೊಂದು ಹಂತ ತಲುಪಿದೆ. ಟ್ರಂಪ್ ಹತ್ಯೆಗೆ ಸುಪಾರಿ ಸೇರಿ ದಂತೆ ಹಲವು ವಿಚಾರಗಳಲ್ಲಿ ಈಗಾಗಲೇ ಉಭಯ ದೇಶಗಳ ನಡುವೆ ಗುದ್ದಾಟ ನಡೆ ದಿದೆ. ಇದೀಗ ಇರಾನ್ ಹ್ಯಾಕರ್‌ಗಳು ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಮಾಹಿತಿ ಕಳ್ಳತನ ಮಾಡಲು ಯತ್ನಿಸಿದ್ದರು ಎನ್ನಲಾಗಿದೆ. ಈ ಕುರಿತಾಗಿ ಟ್ರಂಪ್ ತಮ್ಮ ಎಂದಿನ ಶೈಲಿಯಲ್ಲೇ ಉತ್ತರ ಕೊಟ್ಟು ಮುಂದೆ ಸಾಗಿದ್ದಾರೆ.**

## ಅಮೆರಿಕ ಅಧ್ಯಕ್ಷ ಚುನಾವಣೆ : ಕಮಲಾ ಹ್ಯಾರಿಸ್‌ಗೆ ಮುನ್ನಡೆ



**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷೀಯ ಚುನಾವಣೆ ರೇಸ್‌ನಲ್ಲಿ ಡೆಮಾಕ್ರಟಿಕ್ ಪಕ್ಷದ ಭಾರತೀಯ ಮೂಲದ ಕಮಲಾ ಹ್ಯಾರಿಸ್ ಅವರು ತಮ್ಮ ಎದುರಾಳಿ ರಿಪಬ್ಲಿಕನ್ ಪಕ್ಷದ ಡೊನಾಲ್ಡ್ ಟ್ರಂಪ್ ಅವರಿಗಿಂತ ಮುಂದಿದ್ದಾರೆ. ಅಮೆರಿಕ ಅಧ್ಯಕ್ಷೀಯ ಚುನಾವಣೆಗೆ ಮೂರು ತಿಂಗಳು ಬಾ ಕಿ ಇರುವಾಗಲೆ ಕಮಲಾ ಅವರು ನಿರ್ಣಾಯಕ ರಾಜ್ಯ ಗಳಾದ ವಿಸ್ಕಾನ್ಸಿನ್, ಪೆನ್ಸಿಲ್ವೇನಿಯಾ ಮತ್ತು ಮಿಚಿಗನ್ ರಾಜ್ಯಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ.

ನ್ಯೂಯಾರ್ಕ್ ಟೈಮ್ಸ್, ಸಿಯೆನಾ ಕಾಲೇಜ್ ನಡೆಸಿದ ಇತ್ತೀಚಿನ ಸಮೀಕ್ಷೆಗಳ ಪ್ರಕಾರ, ಮೂರು ರಾಜ್ಯಗಳಾದ್ಯಂತ 1,973 ನೋಂದಾಯಿತ ಮತದಾರರಲ್ಲಿ ಈ ಅಂಶ ಬೆಳಕಿಗೆ ಬಂದಿದೆ. ಕಮಲಾ ಹ್ಯಾರಿಸ್ ಅವರು ಮಿನ್ನೇಸೋಟದ ಗವರ್ನರ್ ಟಿಮ್ ವಾಲ್ಜ್ ಅವರನ್ನು ತಮ್ಮ ಸಹ ಆಟಗಾರ ಎಂದು ಹೆಸರಿಸಿದ ವಾರದಲ್ಲಿ ಸಮೀಕ್ಷೆಗಳನ್ನು ನಡೆಸಲಾಯಿತು. ಮಾದರಿ ದೋಷದ ಅಂಚು ಮಿಚಿಗನ್ನಲ್ಲಿ ಪ್ಲಸ್ ಅಥವಾ ಮೈನಸ್ 4.8 ಶೇಕಡಾ ಪಾಯಿಂಟ್ಗಳು, ಪೆನ್ಸಿಲ್ವೇನಿಯಾದಲ್ಲಿ ಪ್ಲಸ್ ಅಥವಾ ಮೈನಸ್ 4.2 ಪಾಯಿಂಟ್ಗಳು ಮತ್ತು ವಿಸ್ಕಾನ್ಸಿನ್ನಲ್ಲಿ ಪ್ಲಸ್ ಅಥವಾ ಮೈನಸ್ 4.3 ಪಾಯಿಂಟ್ಗಳು ಅವರ ಪರವಾಗಿ ಬಂದಿವೆ. ತನ್ನ ಫಿಟ್ನೆಸ್ ಬಗ್ಗೆ ಕಳವಳಗಳ ನಡುವೆ ಬಿಡೆನ್ ಅವರು ಅನುಮೋದಿಸಿದ ನಂತರ ಯುಎಸ್ ಉಪಾಧ್ಯಕ್ಷರು ಈ ನಿರ್ಣಾಯಕ ಯುದ್ಧಭೂಮಿ ರಾಜ್ಯಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ.

ನವೆಂಬರ್ 5 ರ ಚುನಾವಣೆಯ ಮೊದಲು ಬಹಳಷ್ಟು ಬದಲಾಗಬಹುದು, ಆದರೆ ಡೆಮೋಕ್ರಾಟ್ಗಳು ಕಮಲಾ ಹ್ಯಾರಿಸ್ ಅವರ ಉಮೇದುವಾರಿಕೆಯ ಬಗ್ಗೆ ಉತ್ಸಾಹದಿಂದಿರುವುದೆ ಇದಕ್ಕೆ ಕಾರಣ ಎನ್ನಲಾಗಿದೆ. ಆದಾಗ್ಯೂ, ಡೆಮೋಕ್ರಾಟ್‌ಗಳು ಹ್ಯಾರಿಸ್ನ ದೇಶದ ದೃಷ್ಟಿಕೋನವನ್ನು ಉತ್ತಮವಾಗಿ ಸಂವಹನ ಮಾಡಬೇಕಾಗಿದೆ. ಹಿಂದಿನ ಸಮೀಕ್ಷೆಯು 60% ನೋಂದಾಯಿತ ಮತದಾರರು ಟ್ರಂಪ್ಗೆ ಸ್ಪಷ್ಟವಾದ ದೃಷ್ಟಿಕೋನವನ್ನು ಹೊಂದಿದ್ದಾರೆಂದು ಭಾವಿಸುತ್ತಾರೆ.

## ಬಾಂಗ್ಲಾದೇಶದಲ್ಲಿ ಸಿಡಿದೆದ್ದ ಹಿಂದೂಗಳು, ಬೃಹತ್ ಪ್ರತಿಭಟನೆ





**ಢಾಕಾ:** ಶೇಖ್ ಹಸೀನಾ ಅವರ ಪದಚ್ಯುತಿ ನಂತರವೂ ಬಾಂಗ್ಲಾದಲ್ಲಿ ಹಿಂದೂಗಳ ಮೇಲಿನ ದಾಳಿ ಮುಂದುವರೆದಿರುವುದನ್ನು ಖಂಡಿಸಿ ಅಲ್ಲಿನ ಲಕ್ಷಾಂತರ ಹಿಂದೂಗಳು ಬೃಹತ್ ಪ್ರತಿಭಟನೆ ನಡೆಸುತ್ತಿದ್ದಾರೆ. ಬಾಂಗ್ಲಾದೇಶದ ರಾಜಧಾನಿ ಢಾಕಾ, ದೇಶದ ಎರಡನೇ ಅತಿದೊಡ್ಡ ನಗರವಾದ ಚಿತ್ತಗಾಂಗ್ಗಳಲ್ಲಿ ನಡೆದ ಹಿಂದೂಗಳ ಬೃಹತ್ ಪ್ರತಿಭಟನೆಯಲ್ಲಿ ಲಕ್ಷಾಂತರ ಹಿಂದೂಗಳು ಪಾಲ್ಗೊಂಡಿದ್ದರು. ಹಿಂಸಾಚಾರ ಪೀಡಿತ ಬಾಂಗ್ಲಾದೇಶದ ಅಲ್ಪಸಂಖ್ಯಾತ ಸಮುದಾಯಗಳ ಸದಸ್ಯರು ಆ.5ರಂದು ಶೇಖ್ ಹಸೀನಾ ನೇತೃತ್ವದ ಸರ್ಕಾರ ಪತನದ ನಂತರ 52 ಜಿಲ್ಲೆಗಳಲ್ಲಿ 205ಕ್ಕೂ ಹೆಚ್ಚು ದಾಳಿಯ ಘಟನೆಗಳನ್ನು ಎದುರಿಸಿದ್ದಾರೆ. ನೂರಾರು ಹಿಂದೂಗಳು ತಮ್ಮ ಮನೆಗಳು, ವ್ಯವಹಾರಗಳ ಮೇಲಿನ ದಾಳಿಯಲ್ಲಿ ಗಾಯಗೊಂಡಿದ್ದಾರೆ ಎನಲಾಗಿದೆ. ಹಲವಾರು ಹಿಂದೂ ದೇವಾಲಯಗಳನ್ನು ಸಹ ಧ್ವಂಸಗೊಳಿಸಲಾಗಿದೆ ಮತ್ತು ಶೇಖ್ ಹಸೀನಾ ಅವರ ಅವಾಮಿ ಲೀಗ್ ಪಕ್ಷದೊಂದಿಗೆ ಸಂಬಂಧ ಹೊಂದಿರುವ ಇಬ್ಬರು ಹಿಂದೂ ನಾಯಕರು ಹಿಂಸಾಚಾರದಲ್ಲಿ ಕೊಲ್ಲಲ್ಪಟ್ಟಿದ್ದಾರೆ. ಹಿಂಸಾಚಾರದಿಂದ ತಪ್ಪಿಸಿಕೊಳ್ಳಲು ಸಾವಿರಾರು ಬಾಂಗ್ಲಾದೇಶಿ ಹಿಂದೂಗಳು ಭಾರತಕ್ಕೆ ಪಲಾಯನ ಮಾಡಲು ಪ್ರಯತ್ನಿಸುತ್ತಿದ್ದಾರೆ. ಅಲ್ಪಸಂಖ್ಯಾತರಿಗೆ ಕಿರುಕುಳ ನೀಡುವವರ ವಿಚಾರಣೆಯನ್ನು ತ್ವರಿತಗೊಳಿಸಲು ವಿಶೇಷ ನ್ಯಾಯ ಮಂಡಳಿಗಳ ರಚನೆ, ಅಲ್ಪಸಂಖ್ಯಾತರಿಗೆ ಶೇ. 10ರಷ್ಟು ಸಂಸದೀಯ ಸ್ಥಾನಗಳ ಹಂಚಿಕೆ ಮತ್ತು ಇತರರೊಂದಿಗೆ ಅಲ್ಪಸಂಖ್ಯಾತರ ರಕ್ಷಣೆಗಾಗಿ ಕಾನೂನು ಜಾರಿಗೆ ಒತ್ತಾಯಿಸಿ ಹಿಂದೂ ಪ್ರತಿಭಟನಾಕಾರರ ರ್‍ಯಾಲಿಯು ಕೇಂದ್ರದ ಶಾಹಬಾಗ್‌ನಲ್ಲಿ 3 ಗಂಟೆಗಳ ಕಾಲ ಸಂಚಾರವನ್ನು ನಿರ್ಬಂಧಿಸಿತ್ತು.

ವಿದ್ಯಾರ್ಥಿಗಳು ಸೇರಿದಂತೆ ಸಾವಿರಾರು ಮುಸ್ಲಿಂ ಪ್ರತಿಭಟನಾಕಾರರು ಅಲ್ಪಸಂಖ್ಯಾತರ ಪರವಾಗಿ ಒಗ್ಗಟ್ಟನ್ನು ವ್ಯಕ್ತಪಡಿಸಿದರು.

ಚಿತ್ತಗಾಂಗ್ನಲ್ಲಿ ಐತಿಹಾಸಿಕ ಚೆರಗಿ ಪಹಾರ್ ಚೌಕದಲ್ಲಿ ಬೃಹತ್ ಸಮಾವೇಶ ನಡೆಯಿತು. ನೊಬೆಲ್ ಪ್ರಶಸ್ತಿ ವಿಜೇತರಾದ ಮುಹ ಮ್ಮದ್ ಯೂನಸ್ ಅವರು ಪ್ರತಿಭಟನೆಯ ಮುಂಚೂಣಿಯಲ್ಲಿರುವ ವಿದ್ಯಾರ್ಥಿಗಳನ್ನು, ಎಲ್ಲಾ ಹಿಂದೂ, ಕ್ರಿಶ್ಚಿಯನ್ ಮತ್ತು ಬೌದ್ಧ ಕು ಟುಂಬಗಳನ್ನು ಹಾನಿಯಿಂದ ರಕ್ಷಿಸುವಂತೆ ಮನವಿ ಮಾಡಿಕೊಂಡಿದ್ದಾರೆ.

**ಕೆಲವು ವರದಿಗಳ ಪ್ರಕಾರ, 7 ಲಕ್ಷಕ್ಕೂ ಹೆಚ್ಚು ಜನರು ರ್‍ಯಾಲಿಯಲ್ಲಿ ಭಾಗವಹಿಸಿದ್ದರು. ಬಾಂಗ್ಲಾದೇಶದ ಹಂಗಾಮಿ ನಾಯಕ ಮುಹಮ್ಮದ್ ಯೂನಸ್ ಹಿಂಸಾಚಾರ ಪೀಡಿತ ರಾಷ್ಟ್ರದಲ್ಲಿ ಅಲ್ಪಸಂಖ್ಯಾತ ಸಮುದಾಯಗಳ ಮೇಲಿನ ದಾಳಿಯನ್ನು ಖಂಡಿಸಿದ್ದಾರೆ. ಈ ಕೃತ್ಯವನ್ನು ಹೇಯ ಕೃತ್ಯ ಎಂದು ಟೀಕಿಸಿದ್ದಾರೆ.**

# ರಾಜ್ಯಸಭಾ ಅಧ್ಯಕ್ಷ ಧನ್‌ಕರ್ ವಿರುದ್ಧ ಅವಿಶ್ವಾಸ ನಿರ್ಣಯ



**ನವದೆಹಲಿ:** ರಾಜ್ಯಸಭಾ ಅಧ್ಯಕ್ಷ ಜಗದೀಪ್ ಧನ್‌ಕರ್‌ವಿರುದ್ಧ ಪ್ರತಿಪಕ್ಷಗಳು ಅವಿಶ್ವಾಸ ನಿರ್ಣಯ ಮಂಡಿಸಲು ಸಿದ್ಧತೆ ನಡೆಸುತ್ತಿವೆ. 18ನೇ ಅಧಿವೇಶನದಲ್ಲಿ ರಾಜ್ಯಸಭೆಯಲ್ಲಿ ವಿರೋಧ ಪಕ್ಷಗಳ ನಾಯಕರು, ಸಭಾಪತಿ ಜಗದೀಪ್ ಧನ್‌ಕರ್ ನಡುವೆ ವಾಗ್ವಾದ ನಡೆದಿದ್ದು, ಅವರ ವಿರುದ್ಧ ನೋಟೀಸ್ ಸಲ್ಲಿಸಲು ಪ್ರತಿಪಕ್ಷ ಇಂಡಿಯಾ ಮೈತ್ರಿಕೂಟ ಮುಂದಾಗಿವೆ. ಮೂಲಗಳ ಪ್ರಕಾರ ನೋಟೀಸ್ ಬಗ್ಗೆ ಚರ್ಚಿಸಿ ನಿರ್ಧರಿಸಬೇಕಿದೆ. ಇದು ಯಾವ ಸಮಯದವರೆಗೆ ಎಂಬುದು ತಿಳಿದು ಬಂದಿಲ್ಲ. ವಿರೋಧ ಪಕ್ಷಗಳು ಅವರನ್ನು ಪದಚ್ಯುತಗೊಳಿಸಲು ಸಂಖ್ಯಾಬಲವನ್ನು ಹೊಂದಿಲ್ಲದ ಕಾರಣ ನಿರ್ಣಯ ಜಾರಿಯಾಗದಿದ್ದರೂ ಇದು ಅಧ್ಯಕ್ಷರಿಗೆ ವಿರೋಧವನ್ನು ಎತ್ತಿ ತೋರಿಸುವ ವಿಧಾನವಾಗುತ್ತದೆ ಎನ್ನುವುದು ಪ್ರತಿಪಕ್ಷಗಳ ಲೆಕ್ಕಾಚಾರವಾಗಿದೆ. ಧನ್‌ಕರ್ ವಿರುದ್ಧ ಕ್ರಮ ಕೈಗೊಳ್ಳುವ ಪ್ರಸ್ತಾವನೆಗೆ 87 ಸದಸ್ಯರು ಸಹಿ ಹಾಕಿದ್ದಾರೆ ಎಂದು ವಿರೋಧ ಪಕ್ಷದ ಮೂಲಗಳು ತಿಳಿಸಿವೆ. ಪ್ರತಿಪಕ್ಷಗಳ ಆತಂಕವೇನು ಸದನದಲ್ಲಿ ವಿರೋಧ ಪಕ್ಷದ ನಾಯಕರ ಮೈಕ್ ಅನ್ನು ಪದೇಪದೇ ಆಫ್ ಮಾಡಲಾಗುತ್ತಿದೆ ಎಂದು ವಿರೋಧ ಪಕ್ಷಗಳು ಕಳವಳ ವ್ಯಕ್ತಪಡಿಸಿವೆ. ಸದನವನ್ನು ನಿಯಮ, ಸಂಪ್ರದಾಯಗಳ ಪ್ರಕಾರ ನಡೆಸಬೇಕೆಂದು ಬಯಸುತ್ತಿದ್ದು, ಸದಸ್ಯರ ವಿರುದ್ಧ ವೈಯಕ್ತಿಕ ಟೀಕೆಗಳು ಸ್ವೀಕಾರಾರ್ಹವಲ್ಲ ಎಂದು ಹೇಳಿದ್ದಾರೆ.

ವಿರೋಧ ಪಕ್ಷಗಳ ವಿರುದ್ಧ ಅವರು ಪಕ್ಷಪಾತ ನಡೆಸುತ್ತಿದ್ದಾರೆ ಎಂದು ಕಾಂಗ್ರೆಸ್ ಆರೋಪಿಸಿದ್ದರಿಂದ ಧನ್‌ಕರ್, ಇಂಡಿಯಾ ಮೈತ್ರಿ ಪಕ್ಷಗಳ ನಡುವೆ ಸಾಕಷ್ಟು ವಾಗ್ವಾದ ನಡೆಯಿತು. ಸೋನಿಯಾ ಗಾಂಧಿ ನೇತೃತ್ವದ ಪ್ರತಿಪಕ್ಷಗಳು ರಾಜ್ಯ ಸಭೆಯಿಂದ ಹೊರನಡೆದ ಬೆನ್ನಲ್ಲೇ ಕಾಂಗ್ರೆಸ್ ಪತ್ರಿಕಾಗೋಷ್ಠಿ ನಡೆಸಿ ರಾಜ್ಯ ಸಭಾಧ್ಯಕ್ಷರು ಮೇಲ್ಮನೆಯಲ್ಲಿ ಪ್ರತಿಪಕ್ಷಗಳಿಗೆ ನೀಡಬೇಕಾದ ಪ್ರಾಮುಖ್ಯತೆ ನೀಡುತ್ತಿಲ್ಲ ಎಂದು ಆರೋಪಿಸಿದೆ.

ಸಮಾಜವಾದಿ ಪಕ್ಷದ ಸಂಸದೆ ಜಯಾ ಬಚ್ಚನ್ ಮತ್ತು ಧನ್‌ಕರ್ ನಡುವೆ ತೀವ್ರ ವಾಗ್ವಾದ ನಡೆದ ಬಳಿಕ ಕಾಂಗ್ರೆಸ್ ನೇತೃತ್ವದಲ್ಲಿ ವಿರೋಧ ಪಕ್ಷಗಳ ನಾಯಕರು ಸದನದಿಂದ ಹೊರನಡೆದಿದ್ದರು. ಇದಕ್ಕೆ ಪ್ರತಿಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದ ನಡ್ಡಾ, ಪ್ರತಿಪಕ್ಷಗಳು ಕ್ಷಮೆ ಯಾಚಿಸಬೇಕು ಎಂದು ಒತ್ತಾಯಿಸಿದ್ದರು.

ಸೋನಿಯಾ ಗಾಂಧಿ, ಇತರ ವಿರೋಧ ಪಕ್ಷದ ನಾಯಕರನ್ನು ಒಳಗೊಂದು ಸುದ್ದಿಗೋಷ್ಠಿ ನಡೆಸಿದ ಜಯಾ ಬಚ್ಚನ್, ನಾವು ಶಾಲಾ ಮಕ್ಕಳಲ್ಲ. ನಾನು ಅವರ ಮಾತಿನಿಂದ ಅಸಮಾಧಾನಗೊಂಡಿದ್ದೇನೆ. ವಿಶೇಷವಾಗಿ ಮಾತನಾಡಲು ನಿಂತಾಗ, ಮೈಕ್ ಸ್ವಿಚ್ ಆಫ್ ಆಗಿತ್ತು. ಅವರು ಪ್ರತಿ ಬಾರಿಯೂ ಅಸಂಸದೀಯ ಪದಗಳನ್ನು ಬಳಸುತ್ತಾರೆ ಎಂದು ಆರೋಪಿಸಿದ್ದರು.

ಸಭಾಪತಿಯ ಧೋರಣೆ ಪಕ್ಷಪಾತದಿಂದ ಕೂಡಿದೆ. ರಾಜ್ಯಸಭೆಯಲ್ಲಿ ಸಭಾಪತಿ ಪಕ್ಷಾತೀತ ಆಗಿರಬೇಕು. ಎಲ್ಲಾ ಆಯ್ಕೆಗಳು ಮುಕ್ತವಾಗಿವೆ.

ಕಾನೂನು, ನಿಯಮ ಪುಸ್ತಕದಲ್ಲಿ ಏನೇ ಇರಲಿ, ಸಂವಿಧಾನದಲ್ಲಿ ಏನೇ ಇರಲಿ, ನಡವಳಿಕೆಯ ಕಾರ್ಯ ವಿಧಾನದೊಳಗೆ, ಕಾನೂನಿನಲ್ಲಿ ಯಾವುದೇ ನಿಬಂಧನೆಗಳು ಇರಲಿ, ಎಲ್ಲಾ ಆಯ್ಕೆಗಳು ನಮಗೆ ಮುಕ್ತವಾಗಿವೆ. ಪ್ರಜಾಪ್ರಭುತ್ವವನ್ನು ಕೊಲ್ಲುತ್ತಿರುವಾಗ ನಾವು ಮೂಕ ಪ್ರೇಕ್ಷಕರಾಗಿ ಉಳಿಯಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್ ನಾಯಕ ಅಜಯ್ ಮಾಕೆನ್ ತಿಳಿಸಿದ್ದಾರೆ. ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮಾತನಾಡಲು ಅವಕಾಶವಿಲ್ಲ. ಅವರಿಗೂ ಆಗಾಗ ಅಡ್ಡಿಪಡಿಸಲಾಗುತ್ತದೆ.

ಅವರ ಮೈಕ್‌ಗಳನ್ನು ಆಗಾಗ ಆಫ್ ಮಾಡಲಾಗುತ್ತದೆ ಎಂದು ರಾಜ್ಯಸಭೆಯ ಕಾಂಗ್ರೆಸ್ ಉಪನಾಯಕ ಪ್ರಮೋದ್ ತಿವಾರಿ ಆರೋಪಿಸಿದ್ದಾರೆ.

**ಏನು ಪ್ರಕ್ರಿಯೆ**

**ಪದಚ್ಯುತಿ ನಿರ್ಣಯವನ್ನು ರಾಜ್ಯಸಭೆಯಲ್ಲಿ ಮಾತ್ರ ಮಂಡಿಸಬಹುದೇ ಹೊರತು ಲೋಕಸಭೆಯಲ್ಲಿ ಅಲ್ಲ. ನಿರ್ಣಯವನ್ನು ರಾಜ್ಯಸಭೆಯಲ್ಲಿ ಬಹುಮತದಿಂದ ಅಂಗೀಕರಿಸಬೇಕಾಗುತ್ತದೆ. ಬಳಿಕ ಲೋಕಸಭೆಯಲ್ಲಿ ಸರಳ ಬಹುಮತ ದಿಂದಾದರೂ ಒಪ್ಪಿಗೆ ಸೂಚಿಸಬೇಕಾಗುತ್ತದೆ. ನಿರ್ಣಯವು ಪರಿಗಣನೆಯಲ್ಲಿರುವಾಗ ಅಧ್ಯಕ್ಷರು ಸದನದ ಅಧ್ಯಕ್ಷತೆ ವಹಿಸುವಂತಿಲ್ಲ. ಹಾಜರಾಗಬಹುದು, ಮಾತನಾಡಬಹುದು ಮತ್ತು ಕಲಾಪದಲ್ಲಿ ಭಾಗವಹಿಸಬಹುದು. ಆದರೆ ಮತ ಚಲಾಯಿಸಲು ಸಾಧ್ಯವಿಲ್ಲ. ರಾಜ್ಯಸಭೆಯ ಅಧ್ಯಕ್ಷರ ಪದಚ್ಯುತಿಗೆ ನಿರ್ಣಯವು ಪರಿಗಣನೆಯಲ್ಲಿರುವಾಗ ಸಮಾನ ಮತಗಳು ಬಂದರೆ ಲೋಕಸಭೆಯ ಅಧ್ಯಕ್ಷರು ತಮ ಮತ ಚಲಾಯಿಸಬಹುದಾಗಿದೆ.**

## ಹಿಂಡೆನ್‌ಬರ್ಗ್ ಆರೋಪಗಳು ಆಧಾರ ರಹಿತ: ಸೆಬಿ ಅಧ್ಯಕ್ಷೆ

**ನವದೆಹಲಿ:** ಹಿಂಡೆನ್‌ಬರ್ಗ್ ಮಾಡಿರುವ ಆರೋಪಗಳನ್ನು ನಿರಾಧಾರ, ಸುಳ್ಳು, ನಿರಾಧಾರ ಎಂದು ಸೆಬಿ ಅಧ್ಯಕ್ಷೆ ಮಾಧಬಿ ಪುರಿ ಬುಚ್, ಅವರ ಪತಿ ಧವಲ್ ಬುಚ್ ಹೇಳಿದ್ದಾರೆ. ತಮ್ಮ ಹಣಕಾಸು ತೆರೆದ ಪುಸ್ತಕ ವಾಗಿದೆ ಎಂದು ಪ್ರತಿಪಾದಿಸಿದ್ದಾರೆ. ಹಿಂಡೆನ್‌ಬರ್ಗ್ ರಿಸರ್ಚ್ ಮಾಹಿತಿ ದುರದಷ್ಟಕರ ಎಂದು ಹೇಳಿದ್ದಾರೆ. ಅದಾನಿ ಕಂಪನಿಯ ಕಡಲಾಚೆಯ ನಿಧಿಗಳಲ್ಲಿ ಸೆಬಿ ಅಧ್ಯಕ್ಷೆ ಮಧಬಿ ಪುರೋ ಬುಚ್ ಮತ್ತು ಅವರ ಪತಿ ಪಾಲುಗಳನ್ನು ಹೊಂದಿದ್ದಾರೆ ಎಂದು ಅಮೆರಿಕದ ಹಿಂಡೆನ್ ಬರ್ಗ್ ರಿಸರ್ಚ್ ಆರೋಪಿಸಿ ಮತ್ತೆ ಗೊಂದಲ ಸೃಷ್ಟಿಗೆ ಮುಂದಾಗಿದೆ. ಆರೋ ಪಕ್ಕೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಮಾಧಬಿ ಪುರಿ ಬುಚ್ ನಮ ವಿರುದ್ಧ ಆ.10 ರಂದು ಹಿಂಡೆನ್‌ಬರ್ಗ್ ವರದಿಯಲ್ಲಿ ಮಾಡಿದ ಆರೋಪಗಳು ಆಧಾರರಹಿತ, ನಾವು ಬಲ ವಾಗಿ ನಿರಾಕರಿಸುತ್ತೇವೆ ಎಂದು ಹೇಳಿದ್ದಾರೆ. ಅವುಗಳು ಯಾವುದೇ ಸತ್ಯವನ್ನು ಹೊಂದಿಲ್ಲ. ನಮ್ಮ ಜೀವನ ತೆರೆದ ಪುಸ್ತಕವಾಗಿದೆ. ಅಗತ್ಯವಿರುವ ಎಲ್ಲಾ ಬಹಿರಂಗಪಡಿಸುವಿಕೆಗಳನ್ನು ಈಗಾಗಲೇ ವರ್ಷಗಳಲ್ಲಿ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ. ನಾವು ಕಟ್ಟುನಿಟ್ಟಾಗಿ ಖಾಸಗಿ ನಾಗರಿಕರಾಗಿದ್ದ ಅವಧಿಗೆ ಸಂಬಂಧಿಸಿದವುಗಳನ್ನು ಒಳಗೊಂಡಂತೆ ಯಾವುದೇ, ಎಲ್ಲಾ ಹಣಕಾಸಿನ ದಾಖಲೆಗಳನ್ನು ಬಹಿರಂಗಪಡಿಸಲು ಯಾವುದೇ ಹಿಂಜರಿಕೆಯಿಲ್ಲ ಎಂದು ಹೇಳಿದರು. ಇದಲ್ಲದೆ, ಸಂಪೂರ್ಣ ಪಾರದರ್ಶಕತೆಯ ಹಿತದಷ್ಟಿಯಿಂದ, ನಾವು ಸರಿಯಾದ ಸಮಯದಲ್ಲಿ ವಿವರವಾದ ಹೇಳಿಕೆಯನ್ನು ನೀಡುತ್ತೇವೆ ಎಂದು ತಿಳಿಸಿದ್ದಾರೆ.

## ತುಂಗಭದ್ರಾ ಜಲಾಶಯದ ಕ್ರಸ್ಟ್‌ಗೇಟ್ ತುಂಡು ಆಂಧ್ರದಲ್ಲಿ ಜಾಗರೂಕತೆಗೆ ಸೂಚನೆ



**ಹೈದರಾಬಾದ್:** ಕರ್ನಾಟಕದ ಮುನಿರಾಬಾದ್‌ನಲ್ಲಿರುವ ತುಂಗಭದ್ರಾ ಜಲಾಶಯ ಕ್ರಸ್ಟ್‌ಗೇಟ್‌ವೊಂದು ತುಂಡಾಗಿ ಭಾರಿ ಪ್ರಮಾಣದ ನೀರು ನದಿ ಗೆ ಹರಿಯುತ್ತಿರುವ ಹಿನ್ನೆಲೆಯಲ್ಲಿ ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ಅಧಿಕಾರಿಗಳ ಸಭೆ ನಡೆಸಿ, ಪರಿಸ್ಥಿತಿ ಮೇಲೆ ನಿಗಾ ಇರಿಸುವಂತೆ ಭಾನುವಾರ ಸೂಚಿಸಿದ್ದಾರೆ. ಗೇಟ್ ಅಳವಡಿಕೆ ಕಾರ್ಯದಲ್ಲಿ ತುಂಗಭದ್ರಾ ಅಣೆಕಟ್ಟೆ ಅಧಿಕಾರಿಗಳಿಗೆ ನೆರವಾಗಲು ಎಂಜಿನಿಯರುಗಳ ತಂಡವೊಂದನ್ನು ಅವಘಡ ಸಂಭವಿಸಿದ ಸ್ಥಳಕ್ಕೆ ಕಳುಹಿಸುವಂತೆ ರಾಜ್ಯದ ಜಲಸಂಪನ್ಮೂಲ ಇಲಾಖೆಗೆ ನಾಯ್ಡು ಸೂಚನೆ ನೀಡಿದ್ದಾರೆ. 'ಸ್ಟಾಪ್‌ಲಾಕ್ ಗೇಟ್ ಬಳಸಿ, ತುಂಡಾಗಿರುವ ಗೇಟ್ ಅನ್ನು ತಾತ್ಕಾಲಿಕವಾಗಿ ಮರುಜೋಡಣೆ ಮಾಡಬಹುದು' ಎಂದು ಸರ್ಕಾರದ ವಿಶೇಷ ಮುಖ್ಯ ಕಾರ್ಯದರ್ಶಿ ಜಿ.ಸಾಯಿ ಪ್ರಸಾದ್ ಸಭೆಗೆ ಮಾಹಿತಿ ನೀಡಿದರು.

'ಅಣೆಕಟ್ಟೆಯು ಹಳೆ ವಿನ್ಯಾಸದಿಂದ ಕೂಡಿರುವ ಕಾರಣ ಸ್ಟಾಪ್‌ಲಾಕ್ ಗೇಟ್ ಅಳವಡಿಕೆ ಕಷ್ಟ' ಎಂದು ಜಲ ಸಂಪನ್ಮೂಲ ಸಚಿವ ನಿಮ್ಮಲ ರಾಮ ನಾಯ್ಡು ಅಭಿಪ್ರಾಯಪಟ್ಟರು. ನದಿಗೆ ಹೆಚ್ಚುವರಿಯಾಗಿ ನೀರು ಹರಿಯುತ್ತಿರುವ ಕಾರಣ, ಸಂಭಾವ್ಯ ಪರಿಸ್ಥಿತಿ ಎದುರಿಸಲು ಸಜ್ಜಾಗಿರುವಂತೆ ಶ್ರೀಶೈಲಂ, ನಾಗರಾರ್ಜುನ ಸಾಗರ ಹಾಗೂ ಪುಲಿಚಿಂತಲ ಯೋಜನೆಗಳ ಎಂಜಿನಿಯರ್‌ಗಳಿಗೆ ಸಚಿವ ನಿಮ್ಮಲ ರಾಮ ನಾಯ್ಡು ಸೂಚಿಸಿದ್ದಾರೆ.

**ಎಚ್ಚರಿಕೆ** **ತುಂಗಭದ್ರಾ ಜಲಾಶಯ ಕ್ರಸ್ಟ್‌ಗೇಟ್‌ವೊಂದು ತುಂಡಾಗಿ, ಅಪಾರ ಪ್ರಮಾಣದ ನೀರು ನದಿಗೆ ಹರಿಯುತ್ತಿರುವುದರಿಂದ ಕರ್ನೂಲು ಜಿಲ್ಲೆಯಲ್ಲಿ ನದಿಪಾತ್ರದ ಜನರು ಜಾಗರೂಕರಾಗಿರುವಂತೆ ಆಂಧ್ರಪ್ರದೇಶ ವಿಪತ್ತು ನಿರ್ವಹಣಾ ಪ್ರಾಧಿಕಾರ ಎಚ್ಚರಿಕೆ ನೀಡಿದೆ.**

## ನದಿಯಲ್ಲಿ ಕೊಚ್ಚಿಹೋದ ಕಾರು: ಒಂದೇ ಕುಟುಂಬದ 9 ಮಂದಿ ದುರ್ಮರಣ

**ನವದೆಹಲಿ:** ಪಂಜಾಬ್‌ನ ಹೋಶಿಯಾರ್ಪುರ ಜಿಲ್ಲೆಯ ಹೊರವಲಯದಲ್ಲಿ ಪ್ರವಾಹದ ಹೊಳೆಯಲ್ಲಿ ಎಸ್ಯುವಿ ಕಾರೊಂದು ಕೊಚ್ಚಿಹೋದ ನಂತರ ಹಿಮಾಚಲ ಪ್ರದೇಶದ ಕುಟುಂಬವೊಂದು ದುರ್ಮರಣವನ್ನು ಹೊಂದಿದ್ದಾರೆ. ಭಾನುವಾರ ನಡೆದಂತ ಘೋರ ಘಟನೆಯಲ್ಲಿ ಓರ್ವ ಸಂಬಂಧಿ ಸೇರಿದಂತೆ ಒಂದೇ ಕುಟುಂಬದ ಒಂಭತ್ತು ಮಂದಿ ಸಾವನ್ನಪ್ಪಿದ್ದಾರೆ. ಪೊಲೀಸರ ಪ್ರಕಾರ, ಹೋಶಿಯಾರ್ಪುರ ಜಿಲ್ಲೆಯಿಂದ 34 ಕಿ.ಮೀ ದೂರದಲ್ಲಿರುವ ಜೈಜೋನ್ ಚೋ ಎಂಬ ಋತುಮಾನದ ಹೊಳೆಯಲ್ಲಿ ಚಾಲಕನೊಂದಿಗೆ ಒಂದೇ ಕುಟುಂಬದ ಹನ್ನೊಂದು ಸದಸ್ಯರು ಎಸ್ಯುವಿಯಲ್ಲಿ ಪ್ರಯಾಣಿಸುತ್ತಿದ್ದಾಗ ಕೊಚ್ಚಿಹೋಗಿದ್ದಾರೆ.

ಹಿಮಾಚಲ ಪ್ರದೇಶದ ಉನಾ ಜಿಲ್ಲೆಯ ಮೆಹತ್ಪುರ ಬಳಿಯ ಡೆಹ್ರಾಡೂನ್ ಮೂಲದ ಕುಟುಂಬವು ಮದುವೆಯಲ್ಲಿ ಭಾಗವಹಿಸಲು ಪಂಜಾಬ್ನ ಎಸ್ಬಿಎಸ್ ನಗರ ಜಿಲ್ಲೆಯ ಮೆಹ್ರೋವಾಲ್ ಗ್ರಾಮಕ್ಕೆ ತೆರಳುತ್ತಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಕಳೆದ ಕೆಲವು ದಿನಗಳಿಂದ ಪಂಜಾಬ್ನ ಕೆಲವು ಭಾಗಗಳಲ್ಲಿ ಭಾರಿ ಮಳೆಯಿಂದಾಗಿ ಪ್ರವಾಹಕ್ಕೆ ಸಿಲುಕಿದ್ದ ಜೈಜೋನ್ ಚೋ ನದಿಯನ್ನು ದಾಟುತ್ತಿದ್ದಾಗ ಅವರ ವಾಹನವು ಕೊಚ್ಚಿಹೋಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನದಿಯಲ್ಲಿ ಬಲವಾದ ನೀರಿನ ಪ್ರವಾಹದಿಂದಾಗಿ ಜೈಜೋನ್ ಚೋ ದಾಟದಂತೆ ಸ್ಥಳೀಯರು ಎಸ್ ಯುವಿ ಚಾಲಕನಿಗೆ ಎಚ್ಚರಿಕೆ ನೀಡಿದ್ದರು. ಆದರೆ ಅವರು ಎಚ್ಚರಿಕೆಯನ್ನು ನಿರ್ಲಕ್ಷಿಸಿ ಮುಂದೆ ಸಾಗಿದರು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಘಟನೆಯ ನಂತರ, ಹಲವಾರು ಸ್ಥಳೀಯರು ದೀಪಕ್ ಭಾಟಿಯಾ ಎಂಬ ನಿವಾಸಿಯನ್ನು ರಕ್ಷಿಸುವಲ್ಲಿ ಯಶಸ್ವಿಯಾದರು. ಅವರನ್ನು ಜೈಜೋನ್ನ ಸರ್ಕಾರಿ ಡಿಸ್ಪೆನ್ಸರಿಗೆ ಕರೆದೊಯ್ದರು ಎಂದು ಅಧಿಕಾರಿ ತಿಳಿಸಿದ್ದಾರೆ.

# ಬಾಂಗ್ಲಾದೇಶ ರಾಜಕೀಯ ಅಸ್ಥಿರತೆ, ಹಿಂಸಾಚಾರಕ್ಕೆ ಅಮೆರಿಕ ಕಾರಣ?

## ನಾನು ನನ್ನ ದೇಶದ ಪರಮಾಧಿಕಾರವನ್ನು ಅವರಿಗೆ ಒಪ್ಪಿಸಲು ಬಯಸಲಿಲ್ಲ: ಮಾಜಿ ಪ್ರಧಾನ ಮಂತ್ರಿ, ಶೇಖ್ ಹಸೀನಾ

**ಶೇಖ್ ಹಸೀನಾ ಸುಳಿವು**

**ಹೊಸದಿಲ್ಲಿ:** ಬಾಂಗ್ಲಾದೇಶದಲ್ಲಿ ಉಂಟಾಗಿರುವ ರಾಜಕೀಯ ಅಸ್ಥಿರತೆಗೆ ಅಮೆರಿಕ ಕಾರಣ ಎಂದು ಬಾಂಗ್ಲಾದೇಶದ ಮಾಜಿ ಪ್ರಧಾನ ಮಂತ್ರಿ, ಶೇಖ್ ಹಸೀನಾ ಪರೋಕ್ಷ ಆರೋಪ ಮಾಡಿದ್ದಾರೆ. ಬಾಂಗ್ಲಾದೇಶದ ಪ್ರಧಾನ ಮಂತ್ರಿ ಹುದ್ದೆಗೆ ತರಾತುರಿಯಲ್ಲಿ ರಾಜೀನಾಮೆ ನೀಡಿ, ದೇಶದಿಂದ ಪಲಾಯನ ಮಾಡಿ ಭಾರತಕ್ಕೆ ಆಗಮಿಸಿದ ಬಳಿಕ ಇದೇ ಮೊದಲ ಬಾರಿಗೆ ಮಾಧ್ಯಮಗಳಿಗೆ ಭಾನುವಾರ ಈ ಕುರಿತು ಪ್ರತಿಕ್ರಿಯೆ ನೀಡಿರುವ ಶೇಖ್ ಹಸೀನಾ, ಬಾಂಗ್ಲಾದೇಶದಲ್ಲಿ ನಡೆದ ನಾಟಕೀಯ ರಾಜಕೀಯ ವಿದ್ಯಮಾನಗಳಿಗೆ ಅಮೆರಿಕ ಕಾರಣ ಎಂಬರ್ಥದ ಹೇಳಿಕೆ ನೀಡಿದ್ದಾರೆ.

ಅವರು ಬಾಂಗ್ಲಾದೇಶದಲ್ಲಿ ಅಧಿಕಾರ ಕಿತ್ತುಕೊಳ್ಳಲು ಬಯಸಿದ್ದರು. ಹೀಗಾಗಿ ವಿದ್ಯಾರ್ಥಿಗಳು ಮೀಸಲಾತಿ ಹೆಸರಲ್ಲಿ ಹಿಂಸಾತ್ಮಕ ಹೋರಾಟ ನಡೆಸಿದರು. ನಾನು ರಾಜೀನಾಮೆ ನೀಡೋದನ್ನ ನಿರಾಕರಿಸುತ್ತಲೇ ಇದ್ದೆ. ಆದರೆ ಹಿಂಸಾಚಾರ ನಿಲ್ಲದ ಕಾರಣ ಶಾಂತಿಗಾಗಿ ನಾನು ರಾಜೀನಾಮೆ ನೀಡಿದೆ ಎಂದು ದಿ ಎಕನಾಮಿಕ್ ಟೈಮ್ಸ್‌ಗೆ ನೀಡಿರುವ ಸಂದರ್ಶನದಲ್ಲಿ ಶೇಖ್ ಹಸೀನಾ ವಿವರಿಸಿದ್ದಾರೆ.

ಅಮೆರಿಕ ದೇಶವು ಸೇಂಟ್ ಮಾರ್ಟಿನ್ ದ್ವೀಪದಲ್ಲಿ ತನ್ನ ನೆಲೆ ಹೊಂದಲು ಬಯಸುತ್ತಿತ್ತು. ಬಂಗಾಳ ಕೊಲ್ಲಿಯಲ್ಲಿ ತನ್ನ ಅಸ್ಥಿತ್ವ ಸ್ಥಾಪನೆ ಮಾಡಲು ಬಯಸಿತ್ತು. ಆದರೆ, ನಾನು ನನ್ನ ದೇಶದ ಪರಮಾಧಿಕಾರವನ್ನು ಅವರಿಗೆ ಒಪ್ಪಿಸಲು ಬಯಸಲಿಲ್ಲ. ಹೀಗಾಗಿ ಈ ಪರಿಸ್ಥಿತಿ ಎದುರಾಯ್ತು ಎಂದಿರುವ ಶೇಖ್ ಹಸೀನಾ, ನನ್ನ ದೇಶದ ಜನರು ಮೂಲಭೂತವಾದಿಗಳ ಸಂಚಿಗೆ ಬಲಿಯಾಗಬಾ ರದು ಎಂದು ನಾನು ಬಯಸುತ್ತೇನೆ ಎಂದಿದ್ದಾರೆ.



ಇದೇ ವೇಳೆ ತಮ್ಮ 'ರಜಾಕಾರ ಹೇಳಿಕೆ' ಕುರಿತಾಗಿಯೂ ಸ್ಪಷ್ಟನೆ ನೀಡಿದ ಶೇಖ್ ಹಸೀನಾ, 'ಮೂಲಭೂತವಾದಿಗಳು ನಿಮ್ಮನ್ನು ಕೆರಳಿಸಲು ನನ್ನ ಮಾತುಗಳನ್ನು ತಿರುಚಿದರು. ನೀವು ನನ್ನ ಸಂದರ್ಶನದ ಪೂರ್ಣ ವಿಡಿಯೋವನ್ನು ಒಮ್ಮೆ ನೋಡಿ. ಆಗಲೇ ನಿಮಗೆ ಈ ಸಂಚಿನ ಬಗ್ಗೆ ಅರಿವಾಗುತ್ತದೆ. ದೇಶವನ್ನು ಅಸ್ಥಿರಗೊಳಿಸಲು ಮುಗ್ಧ ಜನರನ್ನು ಬಳಸಿಕೊಂಡು ಅವರ ಮೇಲೆ ದೌರ್ಜನ್ಯ ನಡೆಸಲಾಗುತ್ತಿದೆ ಎಂದು ಶೇಖ್ ಹಸೀನಾ ಹೇಳಿದ್ದಾರೆ.

ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರು ಆಗಸ್ಟ್ 5 ರಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದರು. ಬಳಿಕ ಭಾರತಕ್ಕೆ ಪಲಾಯನ ಮಾಡಿದ್ದರು. ಮೀಸಲಾತಿ ವಿರೋಧಿ ಪ್ರತಿಭಟನಾಕಾರರು ಶೇಖ್ ಹಸೀನಾ ಪಲಾಯನದ ಬಳಿಕವೂ ತಮ್ಮ ಹಿಂಸಾಚಾರ ಮುಂದುವರೆಸಿದರು. ಬಾಂಗ್ಲಾದೇಶದ ರಾಜಧಾನಿ ಢಾಕಾ ಸೇರಿದಂತೆ ದೇಶಾದ್ಯಂತ ಹಿಂಸಾಚಾರ ಮುಂದುವರೆಯಿತು. ಪ್ರಮುಖವಾಗಿ ಹಿಂದೂಗಳನ್ನೇ ಗುರಿಯಾಗಿಸಿ ದಾಳಿಗಳು ನಡೆದವು.

ಶೇಖ್ ಹಸೀನಾ ಅವರ ಪಕ್ಷವಾದ ಆವಾಮಿ ಲೀಗ್ ನಾಯಕರನ್ನೂ ಕೊಲೆ ಮಾಡಲಾಯ್ತು. ಪ್ರತಿಭಟನೆಗಳನ್ನ ತಡೆಯಲು ಬಾಂಗ್ಲಾದೇಶದ ಸೇನೆ ಕೂಡಾ ಮುಂದಾಗಲಿಲ್ಲ. ಇನ್ನು ಮಧ್ಯಂತರ ಸರ್ಕಾರದ ಮುಖ್ಯಸ್ಥ ನೊಬೆಲ್ ಪ್ರಶಸ್ತಿ ವಿಜೇತ ಮೊಹಮ್ಮದ್ ಯೂನುಸ್ ಕೂಡಾ ಈ ವಿಚಾರದಲ್ಲಿ ಯಾವುದೇ ಕ್ರಮ ಕೈಗೊಳ್ಳಲಿಲ್ಲ ಎಂಬ ಆರೋಪವಿದೆ.

ಆದಾಗ್ಯೂ, ಬಾಂಗ್ಲಾದೇಶದಲ್ಲಿ ಆದಷ್ಟು ಬೇಗ ಚುನಾವಣೆ ನಡೆಸಲು ಮಧ್ಯಂತರ ಸರ್ಕಾರಮುಂದಾಗಿದೆ ಎನ್ನಲಾಗಿದೆ.

- **ಬಂಗಾಳ ಕೊಲ್ಲಿಯಲ್ಲಿ ತನ್ನ ಅಸ್ಥಿತ್ವ ಸ್ಥಾಪನೆ ಮಾಡಲು ಬಯಸಿತು,**
- **ಅಮೆರಿಕ ದೇಶವು ಸೇಂಟ್ ಮಾರ್ಟಿನ್ ದ್ವೀಪದಲ್ಲಿ ತನ್ನ ನೆಲೆ ಹೊಂದಲು ಬಯಸುತ್ತಿತ್ತು**

**ರಾಜಕೀಯ ಅಸ್ಥಿರತೆ**

**ಬಿಳಿಯ ವ್ಯಕ್ತಿಯೊಬ್ಬ ಬಾಂಗ್ಲಾದಲ್ಲಿ ಸ್ವತಂತ್ರ್ಯ ದೇಶ ರಚಿಸಲು ಅವಕಾಶ ಕೋರಿದ್ದ ಅನ್ನೋ ಮಾತು ಈ ಹಿಂದೆ ಹರಿದಾಡುತ್ತಿತ್ತು. ಇದೀಗ ಈ ಕುರಿತಾಗಿ ವಿಸ್ತಾರವಾಗಿ ಹೇಳಿರುವ ಶೇಖ್ ಹಸೀನಾ, ಅಮೆರಿಕ ದೇಶ ಬಾಂಗ್ಲಾದಲ್ಲಿ ನೆಲೆ ಸ್ಥಾಪಿಸಲು ಮುಂದಾಗಿತ್ತು. ಆದರೆ, ನಾನು ನಮ್ಮ ಪರಮಾಧಿಕಾರ ಬಿಟ್ಟು ಕೊಡದ ಕಾರಣ ಈ ಗಲಭೆ, ರಾಜಕೀಯ ಅಸ್ಥಿರತೆ ಉಂಟಾಗಿದೆ ಎಂದು ಸೂಚ್ಯವಾಗಿ ಮಾಹಿತಿ ಬಹಿರಂಗಪಡಿಸಿದ್ದಾರೆ.**


ಉದಯ ವಾಹಿನಿ

ದೇಶ/ವಿದೇಶ

ಸೋಮವಾರ 12 ಆಗಸ್ಟ್ 2024




# ಮಿನಿ ನ್ಯೂಸ್

## ಟಿಬಿ ಡ್ಯಾಂನಿಂದ ಅಪಾರ ನೀರು ಬಿಡುಗಡೆ, ಆಂಧ್ರದಲ್ಲಿ ಕಟ್ಟೆಚ್ಚರ

**ಅಮರಾವತಿ:** ಕರ್ನಾಟಕದ ತುಂಗ ಭದ್ರಾ ಅಣೆ ಕಟ್ಟಿನ ಕ್ರಸ್ಟ್ ಗೇಟ್ ಕೊಚ್ಚಿಹೋಗಿರುವ ಹಿನ್ನೆಲೆಯಲ್ಲಿ ಆಂಧ್ರಪ್ರದೇಶ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿ ಕಾರ (ಎಪಿಎಸ್ಡಿಎಂಎ) ಕೃಷ್ಣಾ ನದಿಯ ದಡದಲ್ಲಿ ವಾಸಿಸುವ ಜನರಿಗೆ ಎಚ್ಚರಿಕೆ ನೀಡಿದೆ. ಚೈನ್ ಲಿಂಕ್ ತೊಂದರೆಯಿಂದ ಪ್ರವಾಹದ ತೀವ್ರತೆಗೆ ಗೇಟ್ ಸಂಖ್ಯೆ 19 ಕೊಚ್ಚಿಹೋಗಿದೆ ಎಂದು ಪ್ರಾಧಿಕಾರದ ವ್ಯವಸ್ಥಾಪಕ ನಿರ್ದೇಶಕ ಆರ್ ಕೂರ್ಮನಾಥ್ ಹೇಳಿದ್ದಾರೆ. ಸುಮಾರು 35,000 ಕ್ಯೂಸೆಕ್ನಷ್ಟು ಪ್ರವಾಹದ ನೀರು ಹರಿದು ಬರುತ್ತಿದ್ದು, ಒಟ್ಟು 48,000 ಕ್ಯೂಸೆಕ್ಸ್ ನೀರನ್ನು ಹೊರ ಬಿಡಲಾಗುತ್ತಿದೆ ಹೀಗಾಗಿ ಕರ್ನೂಲ್ ಜಿಲ್ಲೆಯ ಕೋಸಿರಿ, ಮಂತ್ರಾಲಯ, ನಂದಾವರಂ, ಕೌತಾಲಂನಲ್ಲಿರುವ ಜನರು ಎಚ್ಚರಿಕೆ ವಹಿಸಬೇಕು ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಇದಲ್ಲದೆ, ಕೃಷ್ಣಾ ನದಿ ತೀರದ ನಿವಾಸಿಗಳು ಕಾಲುವೆಗಳು ಮತ್ತು ಹೊಳೆಗಳನ್ನು ದಾಟು ವುದನ್ನು ತಪ್ಪಿಸುವಂತೆ ವ್ಯವಸ್ಥಾಪಕ ನಿರ್ದೇಶಕರು ಮನವಿ ಮಾಡಿಕೊಂಡಿದ್ದಾರೆ.

## ಮುಂಬೈನಲ್ಲಿ ಅಕ್ರಮವಾಗಿ ತಂಗಿದ್ದ 5 ಬಾಂಗ್ಲಾದೇಶಿ ಪ್ರಜೆಗಳ ಬಂಧನ

**ಥಾಣೆ:** ಮಹಾರಾಷ್ಟ್ರದ ನವಿ ಮುಂಬೈ ಟೌನ್‌ಶಿಪ್‌ನಲ್ಲಿ ಅಕ್ರಮವಾಗಿ ತಂಗಿದ್ದ ಆರೋಪದ ಮೇಲೆ ಐವರು ಬಾಂಗ್ಲಾದೇಶಿ ಪ್ರಜೆಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸಿಕ್ಕ ಸುಳಿವಿನ ಮೇರೆಗೆ ನವಿ ಮುಂಬೈ ಪೊಲೀಸರ ಮಾನವ ಕಳ್ಳಸಾಗಣೆ ವಿರೋಧಿ ಸೆಲ್ ಕೋಪರ್ಖೈರನೆ‌ರ್ ಪ್ರದೇಶದ ವಸತಿ ಕಟ್ಟಡದ ಮೇಲೆ ದಾಳಿ ನಡೆಸಿ ನಾಲ್ವರು ಮಹಿಳೆಯರು, ಒಬ್ಬ ಪುರುಷನನ್ನು ಬಂಧಿಸಿದ್ದಾರೆ.

ವಿಚಾರಣೆ ವೇಳೆ ಅವರು ನಕಲಿ ದಾಖಲೆಗಳನ್ನು ಬಳಸಿ ಭಾರತಕ್ಕೆ ಪ್ರವೇಶಿಸಿರುವುದು ಬೆಳಕಿಗೆ ಬಂದಿದೆ ಎಂದು ಕೋಪರ್ಖೈರನೆ‌ರ್ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸುಮಾರು 34 ರಿಂದ 45 ವರ್ಷದೊಳಗಿನ ನಾಲ್ವರು ಮಹಿಳೆಯರು ಮನೆಗೆಲಸದಲ್ಲಿ ಕೆಲಸ ಮಾಡುತ್ತಿದ್ದರೆ, 38 ವರ್ಷ ವಯಸ್ಸಿನ ಪುರುಷ ಪೇಂಟಿಂಗ್ ಕೆಲಸ ಮಾಡುತ್ತಿದ್ದರು ಎಂದು ಅವರು ಹೇಳಿದರು. ವಂಚನೆ ಮತ್ತು ನಕಲಿಗಾಗಿ ಭಾರತೀಯ ನ್ಯಾಯ ಸಂಹಿತಾ ಸೆಕ್ಷನ್‌ಗಳ ಅಡಿಯಲ್ಲಿ ಮತ್ತು ಪಾಸ್‌ಪೋರ್ಟ್ (ಭಾರತಕ್ಕೆ ಪ್ರವೇಶ) ನಿಯಮಗಳು-1950, ವಿದೇಶಿಯರ ಕಾಯಿದೆ-1946 ರ ನಿಬಂಧನೆಗಳ ಅಡಿಯಲ್ಲಿ ಅವರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

## ಸೈಯದ್ ರೆಫಾತ್ ಅಹ್ಮದ್ ನೂತನ ಸಿಜೆ

**ಢಾಕಾ:** ಹೈಕೋರ್ಟ್‌ನ ಹಿರಿಯ ನ್ಯಾಯಮೂರ್ತಿ ಸೈಯದ್ ರೆಫಾತ್ ಅಹ್ಮದ್ ಅವರು ಬಾಂಗ್ಲಾದೇಶ ಸುಪ್ರೀಂ ಕೋರ್ಟ್‌ನ ನೂತನ ಮುಖ್ಯನ್ಯಾಯಮೂರ್ತಿಯಾಗಿ ಅಧಿಕಾರ ಸ್ವೀಕರಿಸಿದ್ದಾರೆ. ಅಧ್ಯಕ್ಷ ಮೊಹಮ್ಮದ್ ಶಹಾಬುದ್ದೀನ್ ಅವರು ಸಿಜೆ ಸೈಯದ್ ರೆಫಾತ್ ಅಹ್ಮದ್ ಅವರಿಗೆ ಪ್ರತಿಜ್ಞಾವಿಧಿ ಬೋಧಿಸಿದ್ದಾರೆ ಎಂದು ಅಧ್ಯಕ್ಷರ ಪತ್ರಿಕಾ ಕಾರ್ಯದರ್ಶಿ ಶಿಪ್ಲು ಜಮಾನ್ ತಿಳಿಸಿದ್ದಾರೆ. ಅಹ್ಮದ್ ಅವರು ಬಾಂಗ್ಲಾದೇಶದ 25ನೇ ಮುಖ್ಯ ನ್ಯಾಯಮೂರ್ತಿಯಾಗಿದ್ದಾರೆ. ಢಾಕಾ ವಿಶ್ವವಿದ್ಯಾಲಯದಲ್ಲಿ ಅಧ್ಯಯನದ ನಂತರ ಅವರು ಆಕ್ಸ್‌ಫರ್ಡ್ ವಿ.ವಿ, ಅಮೆರಿಕದ ಟಫ್ಟ್ಸ್ ವಿ.ವಿಯಲ್ಲಿ ಉನ್ನತ ವ್ಯಾಸಂಗ ಪೂರೈಸಿದ್ದಾರೆ. ವಿದ್ಯಾರ್ಥಿಗಳ ಪ್ರತಿಭಟನೆ ಹಾಗೂ ಎಚ್ಚರಿಕೆಗೆ ಮಣಿದು, ಒಬೇದುಲ್ಲಾ ಹಸನ್ ಅವರು ಮುಖ್ಯನ್ಯಾಯಮೂರ್ತಿ ಹುದ್ದೆಗೆ ಶನಿವಾರ ರಾಜೀನಾಮೆ ನೀಡಿದ್ದರು. ಅವರು ಮಾಜಿ ಪ್ರಧಾನಿ ಶೇಖ್ ಹಸೀನಾ ನಿಷ್ಠರಾಗಿದ್ದು, ಕೂಡಲೇ ರಾಜೀನಾಮೆ ನೀಡಬೇಕು ಎಂದು ಪ್ರತಿಭಟನೆ ನಿರತ ವಿದ್ಯಾರ್ಥಿಗಳು ಆಗ್ರಹಿಸಿದ್ದರು.

## ಯಾರೂ ಕಾಲ್, ಮೆಸೇಜ್ ಮಾಡಬೇಡಿ: ಸಂಸದೆ

**ಮುಂಬೈ:** ಮಾಜಿ ಕೇಂದ್ರ ಸಚಿವ, ಎನ್ ಸಿಪಿ ಮುಖ್ಯಸ್ಥ ಶರದ್ ಪವಾರ್ ಪುತ್ರಿ, ಸಂಸದೆ ಸುಪ್ರಿಯಾ ಸುಳೆ ಅವರ ಫೋನ್ ಹ್ಯಾಕ್ ಆಗಿದೆ. ಇದರ ಜೊತೆಗೆ ಅವರ ವಾಟ್ಸ್ ಆಪ್ ಕೂಡ ಹ್ಯಾಕ್ ಆಗಿದೆ. ಇದರ ಹಿನ್ನೆಲೆಯಲ್ಲಿ ಯಾರೂ ತನಗೆ ಕರೆ ಮಾಡಬೇಡಿ ಎಂದು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಹಾಕಿರುವ ಪೋಸ್ಟ್‌ನಲ್ಲಿ ಹೇಳಿದ್ದಾರೆ.

ಯಾರೂ ಸಹ ಕರೆ ಮಾಡಬೇಡಿ ಅಥವಾ ಸಂದೇಶಗಳನ್ನು ಕಳುಹಿಸಬೇಡಿ ಎಂದು ಅವರು ಕೇಳಿಕೊಂಡಿದ್ದಾರೆ. ಹ್ಯಾಕ್ ಆಗಿರುವ ಕುರಿತು ಪೊಲೀಸರಿಗೆ ದೂರು ನೀಡಿರುವುದಾಗಿ ಸುಪ್ರಿಯಾ ಸುಳೆ ತಿಳಿಸಿದ್ದಾರೆ.

ಇತ್ತೀಚೆಗೆ ನಡೆದ ಲೋಕಸಭೆ ಚುನಾವಣೆಯಲ್ಲಿ ಸುಪ್ರಿಯಾ ಸುಳೆ ಬಾರಾಮತಿ ಕ್ಷೇತ್ರದಿಂದ 1.55 ಲಕ್ಷ ಮತಗಳ ಭಾರಿ ಬಹುಮತದಿಂದ ಗೆದ್ದಿದ್ದಾರೆ. ಮಹಾರಾಷ್ಟ್ರದ ಅತ್ಯಂತ ಪ್ರಮುಖ ಸ್ಪರ್ಧೆಯಾಗಿರುವ ಬಾರಾಮತಿ ಕ್ಷೇತ್ರದಲ್ಲಿ ಸುಪ್ರಿಯಾ ಅವರು ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರ ಪತ್ನಿ ಸುನೇತ್ರಾ ಪವಾರ್ ವಿರುದ್ಧ ಭಾರಿ ಅಂತರದಿಂದ ಗೆದ್ದಿದ್ದಾರೆ.


## ರಾಜ್ಯಸಭೆಯಲ್ಲಿ ಬಹುಮತ ಸಾಧಿಸಲು ಕಣ್ಣಿಟ್ಟಿರುವ ಎನ್‌ಡಿಎ

**ಹೊಸದಿಲ್ಲಿ:** ಮುಂದಿನ ತಿಂಗಳು ನಿಗದಿಯಾಗಿರುವ 12 ಸ್ಥಾನಗಳಿಗೆ ನಡೆಯಲಿರುವ ಉಪಚುನಾವಣೆಯ ನಂತರ ರಾಜ್ಯಸಭೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸ್ಪಷ್ಟ ಬಹುಮತವನ್ನು ಸಾಧಿಸುವ ನಿರೀಕ್ಷೆ ಯಿದೆ. ಸರಕಾರ ವಕ್ಫ್ ಮಸೂದೆಯಂತಹ ಪ್ರಮುಖ ಶಾಸನಗಳಿ ಗೆ ಅನುಮೋದನೆ ಪಡೆಯಲು ಬಹುಮತ ಅಗತ್ಯವಾಗಿದೆ. ಸದ್ಯ 229 ರ ಬಲದ ಮೇಲ್ಮನೆಯಲ್ಲಿ ಬಿಜೆಪಿ 87 ಸಂಸದರನ್ನು ಹೊಂದಿದ್ದು ಮಿತ್ರಪಕ್ಷಗಳ ಸೇರಿ ಸಂಖ್ಯೆ 105 ಇದೆ. ಆರು ನಾಮನಿರ್ದೇಶಿತ ಸದಸ್ಯರು, ಸಾಮಾನ್ಯವಾಗಿ ಸರಕಾರದೊಂದಿಗೆ ತಮ್ಮ ಮತವನ್ನು ಚಲಾಯಿಸುತ್ತಾರೆ. ಹೀಗಾಗಿ ಎನ್‌ಡಿಎ ಬಲ 111 ಕ್ಕೆ ತಲುಪುತ್ತದೆ. ಅಂದರೆ 115 ರ ಬಹುಮತದ ಸಂಖ್ಯೆಗಿಂತ ನಾಲ್ಕು ಸ್ಥಾನ ಕಡಿಮೆ. ಮೇಲ್ಮನೆಯಲ್ಲಿ ಕಾಂಗ್ರೆಸ್ 26 ಸದಸ್ಯರನ್ನು ಹೊಂದಿದ್ದು, ಮಿತ್ರಪಕ್ಷಗಳು ಸಂಖ್ಯೆ 58 ಇದ್ದು ವಿಪಕ್ಷ ಮೈತ್ರಿಯ ಸಂಖ್ಯೆಯನ್ನು 84 ಕ್ಕೆ ತಲುಪುತ್ತದೆ. ವೈಎಸ್‌ಆರ್ ಕಾಂಗ್ರೆಸ್ ಪಕ್ಷ 11 ಸದಸ್ಯರನ್ನು ಹೊಂದಿದ್ದು, ಬಿಜೆಡಿ ಎಂಟು ಸದಸ್ಯರನ್ನು ಹೊಂದಿದೆ.

## ಉತ್ತರ ಪ್ರದೇಶ ಉಪಚುನಾವಣೆ 10 ಸ್ಥಾನಗಳಲ್ಲಿ ಬಿಎಸ್ ಪಿ ಸ್ಪರ್ಧೆ

**ಲಖನೌ:** ಉತ್ತರ ಪ್ರದೇಶದ ಉಪಚುನಾವಣೆಯಲ್ಲಿ ಎಲ್ಲಾ 10 ಸ್ಥಾನಗಳಲ್ಲಿ ಸ್ಪರ್ಧಿಸುವುದಾಗಿ ಬಿಎಸ್ ಪಿ ಮುಖ್ಯಸ್ಥೆ ಮಾಯಾವತಿ ಘೋಷಿಸಿದ್ದಾರೆ. ಕರ್ಹಾಲ್, ಮಿಲ್ಕಿಪುರ್, ಕತೇಹಾರಿ, ಕುಂದರ್ಕಿ, ಘಾಜಿಯಾಬಾದ್, ಖೈರ್, ಮೀರಾಪುರ್, ಫುಲ್ಪುರ್, ಮಜವಾನ್, ಸಿಸಾಮೌ ಕ್ಷೇತ್ರಗಳ ಉಪಚುನಾವಣೆಗೆ ದಿನಾಂಕವನ್ನು ಚುನಾವಣಾ ಆಯೋಗ ಶೀಘ್ರವೇ ಘೋಷಣೆ ಮಾಡಲಿದೆ.

# ಸೂಪರ್ ಓವರ್ ಆಡಲು ನಿರಾಕರಿಸಿದ ಶಕೀಬ್ ಅಲ್ ಹಸನ್



## ಟೂರ್ನಿಯಿಂದಲೇ ತಂಡ ಔಟ್

ಕೆನಡಾದಲ್ಲಿ ನಡೆಯುತ್ತಿರುವ ಗ್ಲೋಬಲ್ ಟಿ20 ಲೀಗ್ ಟೂರ್ನಿಯಿಂದ ಬಾಂಗ್ಲಾ ಟೈಗರ್ಸ್ ಮಿಸ್ಸಿಸೌಗಾ ತಂಡ ಹೊರಬಿದ್ದಿದೆ. ಅದು ಕೂಡ ನಿರ್ಣಾಯಕ ಪಂದ್ಯದಲ್ಲಿ ಸೂಪರ್ ಓವರ್ ಆಡಲು ನಿರಾಕರಿಸುವ ಮೂಲಕ ಎಂಬುದೇ ಅಚ್ಚರಿ. ಈ ಟೂರ್ನಿಯ ಎಲಿಮಿನೇಟರ್ ಪಂದ್ಯದಲ್ಲಿ ಬಾಂಗ್ಲಾ ಟೈಗರ್ಸ್ ಮಿಸ್ಸಿಸೌಗಾ ಮತ್ತು ಟೊರೊಂಟೊ ನ್ಯಾಷನಲ್ಸ್ ತಂಡಗಳು ಮುಖಾಮುಖಿಯಾಗಿದ್ದವು.

ಮಳೆಯ ಕಾರಣ ಪಂದ್ಯವು ನಿಗದಿತ ಸಮಯದಲ್ಲಿ ಆರಂಭವಾಗಿರಲಿಲ್ಲ. ಇದಾಗ್ಯೂ ಫಲಿತಾಂಶ ನಿರ್ಧರಿಸಲು ಆಯೋಜಕರು ಸೂಪರ್ ಓವರ್ ಆಡಲು ನಿರ್ಧರಿಸಿದ್ದರು. ಆದರೆ ಬಾಂಗ್ಲಾ ಟೈಗರ್ಸ್ ಮಿಸ್ಸಿಸೌಗಾ ತಂಡದ ನಾಯಕ ಶಕೀಬ್ ಅಲ್ ಹಸನ್ ಸೂಪರ್ ಓವರ್ ಅಡಲು ನಿರಾಕರಿಸಿದ್ದಾರೆ.

ಐಸಿಸಿ ನಿಯಮದ ಪ್ರಕಾರ ಫಲಿತಾಂಶ ನಿರ್ಧರಿಸಲು ಕನಿಷ್ಠ 5 ಓವರ್‌ಗಳ ಪಂದ್ಯವನ್ನು ಆಯೋಜಿಸಬೇಕೆಂದು ಶಕೀಬ್ ಹಾಗೂ ಬಾಂಗ್ಲಾ ಟೈಗರ್ಸ್ ಮಿಸ್ಸಿಸೌಗಾ ತಂಡವು ಆಗ್ರಹಿಸಿದೆ. ಆದರೆ ಅದಾಗಲೇ ಮೈದಾನವು ಸಂಪೂರ್ಣ ಒದ್ದೆಯಾಗಿದ್ದರಿಂದ 5 ಓವರ್‌ಗಳ ಪಂದ್ಯ ನಡೆಸುವಂತಹ ಯಾವುದೇ ಪರಿಸ್ಥಿತಿ ಇರಲಿಲ್ಲ.

ಇತ್ತ ಸೂಪರ್ ಓವರ್ ಮೂಲಕ ಪಂದ್ಯದ ಫಲಿತಾಂಶ ನಿರ್ಧರಿಸಲು ಆಯೋಜಕರು ಮುಂದಾದರೂ ಶಕೀಬ್ ಅಲ್ ಹಸನ್ ಅದಕ್ಕೆ ಸಮ್ಮತಿ ಸೂಚಿಸಿರಲಿಲ್ಲ. ಹೀಗಾಗಿ ಎಲಿಮಿನೇಟರ್ ಪಂದ್ಯವನ್ನು ರದ್ದುಗೊಳಿಸಲಾಯಿತು. ಈ ಪಂದ್ಯದ ರದ್ದತಿಯಿಂದಾಗಿ ಬಾಂಗ್ಲಾ ಟೈಗರ್ಸ್ ಮಿಸ್ಸಿಸೌಗಾ ತಂಡವು ಗ್ಲೋಬಲ್ ಟಿ20 ಲೀಗ್‌ನಿಂದ ಹೊರಬಿದ್ದಿದೆ.

ಅತ್ತ ಎಲಿಮಿನೇಟರ್ ಪಂದ್ಯವಾಡದೇ ಟೊರೊಂಟೊ ನ್ಯಾಷನಲ್ಸ್ ತಂಡವು ಕ್ವಾಲಿಫೈಯರ್-2 ಗೆ ಅರ್ಹತೆ ಪಡೆದುಕೊಂಡಿದೆ. ಅಲ್ಲದೆ ದ್ವಿತೀಯ ಕ್ವಾಲಿಫೈಯರ್ ಪಂದ್ಯದಲ್ಲಿ ಟೊರೊಂಟೊ ನ್ಯಾಷನಲ್ಸ್ ಹಾಗೂ ಬ್ರಾಂಪ್ಟನ್ ವೋಲ್ವ್ಸ್ ತಂಡಗಳು ಮುಖಾಮುಖಿಯಾಗಿದೆ.

ಈ ಮ್ಯಾಚ್‌ನಲ್ಲಿ 5 ವಿಕೆಟ್‌ಗಳ ಜಯ ಸಾಧಿಸುವ ಮೂಲಕ ಟೊರೊಂಟೊ ನ್ಯಾಷನಲ್ಸ್ ತಂಡವು ಇದೀಗ ಫೈನಲ್‌ಗೆ ಪ್ರವೇಶಿಸಿದೆ. ಅದರಂತೆ ಆಗಸ್ಟ್ 11 ರಂದು ನಡೆಯಲಿರುವ ಅಂತಿಮ ಹಣಾಹಣಿಯಲ್ಲಿ ಮಾಂಟ್ರಿಯಲ್ ಟೈಗರ್ಸ್ ಮತ್ತು ಟೊರೊಂಟೊ ನ್ಯಾಷನಲ್ಸ್ ತಂಡಗಳು ಮುಖಾಮುಖಿಯಾಗಲಿದ್ದು, ಈ ಪಂದ್ಯದಲ್ಲಿ ಗೆಲ್ಲುವ ತಂಡ ಚಾಂಪಿಯನ್ ಪಟ್ಟ ಕ್ಕೇರಲಿದೆ.

# 6 ಪದಕಗಳೊಂದಿಗೆ ಭಾರತದ ಒಲಿಂಪಿಕ್ಸ್ ಅಭಿಯಾನ ಅಂತ್ಯ

ಈ ಬಾರಿಯ ಒಲಿಂಪಿಕ್ಸ್‌ನಲ್ಲಿ ಭಾರತದ 117 ಕ್ರೀಡಾಪಟುಗಳು ಭಾಗವಹಿಸಿದ್ದರು. ಇವರಲ್ಲಿ ಪದಕಗಳನ್ನು ಗೆದ್ದಿರುವುದು ಕೇವಲ ಐವರು ಮಾತ್ರ ಎಂಬುದು ಇಲ್ಲಿ ಉಲ್ಲೇಖಾರ್ಹ. ಅಂದರೆ ಮನು ಭಾಕರ್ ಎರಡು ಪದಕಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಅದರಂತೆ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತೀಯರು ಗೆದ್ದ ಪದಕಗಳ ಪಟ್ಟಿ ಈ ಕೆಳಗಿನಂತಿದೆ...

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತಕ್ಕೆ ಮೊದಲ ಪದಕ ಗೆದ್ದುಕೊಟ್ಟಿದ್ದು ಯಂಗ್ ಶೂಟರ್ ಮನು ಭಾಕರ್. ಮಹಿಳಾ 10 ಮೀಟರ್ ಏರ್ ಪಿಸ್ತೂಲ್ ಶೂಟಿಂಗ್‌ನಲ್ಲಿ ಕಂಚಿನ ಪದಕಕ್ಕೆ ಕೊರಳೊಡ್ಡುವ ಮೂಲಕ ಮನು ಭಾರತದ ಪದಕದ ಖಾತೆ ತೆರೆದಿದ್ದರು.



ಆ ಬಳಿಕ 10 ಮೀಟರ್ ಏರ್ ಪಿಸ್ತೂಲ್ ಮಿಶ್ರ ಸ್ಪರ್ಧೆಲಿ ಸರಬ್ಜೋತ್ ಸಿಂಗ್ ಜೊತೆಗೂಡಿ ಮನು ಭಾಕರ್ ಭಾರತಕ್ಕೆ 2ನೇ ಕಂಚಿನ ಪದಕ ತಂದುಕೊಟ್ಟರು. ಈ ಮೂಲಕ ಒಂದೇ ಒಲಿಂಪಿಕ್ಸ್ ಆವೃತ್ತಿಯಲ್ಲಿ ಎರಡು ಪದಕ ಗೆದ್ದ ಭಾರತದ ಮೊದಲ ಕ್ರೀಡಾಪಟು ಎನಿಸಿಕೊಂಡರು.

ಭಾರತಕ್ಕೆ ಮೂರನೇ ಪದಕ ಒಲಿದು ಬಂದಿದ್ದು ಕೂಡ ಶೂಟಿಂಗ್‌ನಲ್ಲೇ ಎಂಬುದು ವಿಶೇಷ. 50 ಮೀ ರೈಫಲ್ ಶೂಟಿಂಗ್‌ನಲ್ಲಿ 3ನೇ ಸ್ಥಾನ ಪಡೆಯುವ ಮೂಲಕ ಸ್ವಪ್ನಿಲ್ ಕುಸಾಲೆ ಕಂಚಿನ ಪದಕವನ್ನು ತಮ್ಮದಾಗಿಸಿಕೊಂಡರು.

ನಾಲ್ಕನೇ ಪದಕ ಮೂಡಿಬಂದಿರುವುದು ಪುರುಷರ ಹಾಕಿ ಆಟದಿಂದ. 3ನೇ ಸ್ಥಾನಕ್ಕಾಗಿ ನಡೆದ ಪಂದ್ಯದಲ್ಲಿ ಸ್ಪೇನ್ ತಂಡವನ್ನು 2-1 ಅಂತರದಿಂದ ಮಣಿಸುವ ಮೂಲಕ ಭಾರತೀಯ ಹಾಕಿ ತಂಡ ಕಂಚಿನ ಪದಕವನ್ನು ತಮ್ಮದಾಗಿಸಿಕೊಂಡರು.

ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಗೆದ್ದಿದ್ದ ಜಾವೆಲಿನ್ ಎಸೆತಗಾರ ನೀರಜ್ ಚೋಪ್ರಾ ಈ ಬಾರಿ 2ನೇ ಸ್ಥಾನ ಪಡೆಯುವ ಮೂಲಕ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟುಕೊಂಡರು. ಈ ಮೂಲಕ ಸತತ ಎರಡು ಆವೃತ್ತಿಗಳಲ್ಲಿ ಪದಕ ಗೆದ್ದ ವಿಶೇಷ ಸಾಧನೆ ಮಾಡಿದರು.

ಭಾರತಕ್ಕೆ ಆರನೇ ಪದಕ ಗೆದ್ದುಕೊಡುವಲ್ಲಿ ಯುವ ಕುಸ್ತಿಪಟು ಅಮನ್ ಸೆಹ್ರಾವತ್ ಯಶಸ್ವಿಯಾದರು. ಪುರುಷರ ಕುಸ್ತಿ ಫ್ರೀಸ್ಟೈಲ್ 57 ಕೆ.ಜಿ ವಿಭಾಗದಲ್ಲಿ ಸ್ಪರ್ಧಿಸಿದ್ದ 21 ವರ್ಷದ ಅಮನ್ ಕಂಚಿನ ಪದಕಕ್ಕೆ ಕೊರಳೊಡ್ಡಿದ್ದರು.

## ಕೂದಲೆಳೆ ಅಂತರದಲ್ಲಿ ಭಾರತದ ಕೈತಪ್ಪಿದ 7 ಪದಕಗಳು

ಮನು ಭಾಕರ್ ಈ ಒಲಿಂಪಿಕ್ಸ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿ 2 ಕಂಚಿನ ಪದಕಗಳನ್ನು ಗೆದ್ದಿದ್ದಾರೆ. ಆದರೆ, ಮನು ಭಾಕರ್‌ಗೆ ಇನ್ನೂ ಒಂದು ಪದಕ ಗೆಲ್ಲುವ ಅವಕಾಶವಿತ್ತು. 25 ಮೀಟರ್ ಏರ್ ರೈಫಲ್ ಶೂಟಿಂಗ್ ಸ್ಪರ್ಧೆಯಲ್ಲಿ ಅವರು ಪದಕ ಗೆಲ್ಲಬಹುದಿತ್ತು. ಆದರೆ ಕೂದಲೆಳೆ ಅಂತರದಲ್ಲಿ ಪದಕ ಗೆಲ್ಲುವುದನ್ನು ತಪ್ಪಿಸಿಕೊಂಡರು. ಭಾರತದ ಸ್ಟಾರ್ ಷಟ್ಲರ್ ಲಕ್ಷ್ಯ ಸೇನ್ ಬ್ಯಾಡ್ಮಿಂಟನ್ ಕ್ರೀಡಾಕೂಟದಲ್ಲಿ ಸೆಮಿಫೈನಲ್ ತಲುಪಿದ್ದರು. ಆದೆ ಸೆಮಿಫೈನಲ್ ಪಂದ್ಯದಲ್ಲಿ ಅವರು ಸೋಲನುಭವಿಸಬೇಕಾಯಿತು. ಇದಾದ ಬಳಿಕ ಕಂಚಿನ ಪದಕದ ಪಂದ್ಯದಲ್ಲಿ ಆರಂಭದಲ್ಲಿ ಮುನ್ನಡೆ ಸಾಧಿಸಿದ ಅವರು ಆ ಬಳಿಕ ತಮ್ಮ ಲಯ ಕಳೆದುಕೊಂಡು ಮಲೇಷ್ಯಾದ ಲೀ ಜಿ ಜಿಯಾ ಅವರ ವಿರುದ್ಧ 13-21, 21-16, 21-11 ಅಂತರದಿಂದ ಸೋಲೊಪ್ಪಿಕೊಂಡರು.

ಶೂಟಿಂಗ್ ಸ್ಪರ್ಧೆಯಲ್ಲಿ ಮಹೇಶ್ವರಿ ಚೌಹಾಣ್ ಮತ್ತು ಅನಂತ್ ಜೋಡಿಗೆ ಭಾರತಕ್ಕೆ ಪದಕ ಗೆಲ್ಲುವ ಅವಕಾಶ ಸಿಕ್ಕಿತ್ತು. ಎರಡೂ ಜೋಡಿಗಳು ಕಂಚಿನ ಪದಕದ ಪಂದ್ಯದಲ್ಲಿ ಚೀನಾದ ಜಿಯಾಂಗ್ ಯುಟಿಂಗ್ ಮತ್ತು ಲಿಯು ಜಿಯಾಲಿನ್ ಜೋಡಿಯನ್ನು ಎದುರಿಸಿದ್ದರು. ಆದರೆ ಕೇವಲ 1 ಅಂಕದಿಂದ ಸೋಲುವ ಮೂಲಕ ಭಾರತದ ಪದಕದ ಆಸೆ ಭಗ್ನಗೊಂಡಿತು. ಅಂತಿಮವಾಗಿ ಈ ಜೋಡಿ ನಾಲ್ಕನೇ ಸ್ಥಾನ ಗಳಿಸಿತು. ಮಿಶ್ರ ಆರ್ಚರಿ ತಂಡದಲ್ಲಿ ಧೀರಜ್ ಬೊಮ್ಮದೇವರ ಮತ್ತು ಅಂಕಿತಾ ಭಕತ್ ಭಾರತವನ್ನು ಪ್ರತಿನಿಧಿಸುತ್ತಿದ್ದರು. ಈ ಜೋಡಿ ಕಂಚಿನ ಪದಕದ ಪಂದ್ಯವನ್ನೂ ಆಡಿತ್ತು. ಈ ಕೂಟದಲ್ಲಿ ಭಾರತಕ್ಕೆ ಮತ್ತೊಂದು ಪದಕ ಸಿಗಲಿದೆ ಎಂದು ನಂಬಲಾಗಿತ್ತು. ಆದರೆ ಅಮೆರಿಕದ ಕೇಸಿ ಕೌಫೊಲ್ಡ್ ಮತ್ತು ಬ್ರಾಡಿ ಎಲಿಸನ್ ಜೋಡಿ ಧೀರಜ್ ಬೊಮ್ಮದೇವರ ಮತ್ತು ಅಂಕಿತಾ ಭಕತ್ ಜೋಡಿಯನ್ನು 2-6 ಅಂತರದಿಂದ ಸೋಲಿಸಿ ಭಾರತದ ಪದಕ ಗೆಲ್ಲುವ ಕನಸು ಭಗ್ನಗೊಳಿಸಿತು. ಇಲ್ಲಿಯೂ ಭಾರತದ ಈ ಜೋಡಿ ನಾಲ್ಕನೇ ಸ್ಥಾನ ಪಡೆದುಕೊಂಡಿತು.

# ಸರ್ಕಾರಿ ಉದ್ಯೋಗ ತಿರಸ್ಕರಿಸಿದ ಸರಬ್ಜೋತ್

2024 ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತ ಒಟ್ಟು 6 ಪದಕಗಳನ್ನು ಗೆದ್ದುಕೊಳ್ಳುವ ಮೂಲಕ ತನ್ನ ಒಲಿಂಪಿಕ್ಸ್ ಪ್ರಯಾಣವನ್ನು ಅಂತ್ಯಗೊಳಿಸಿದೆ. ಭಾರತ ಶೂಟಿಂಗ್, ಹಾಕಿ, ಕುಸ್ತಿ ಮತ್ತು ಅಥ್ಲೆಟಿಕ್ಸ್ ಕ್ರೀಡಾಕೂಟಗಳಲ್ಲಿ ಈ ಪದಕಗಳನ್ನು ಗೆದ್ದುಕೊಂಡಿತು. ಭಾರತಕ್ಕೆ ಪದಕ ತಂದುಕೊಟ್ಟ ಆಟಗಾರರ ಸಾಧನೆಗೆ ಭಾರಿ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಇದಲ್ಲದೆ ಪದಕ ವಿಜೇತ ಆಟಗಾರರಿಗೆ ಅವರವರ ರಾಜ್ಯ ಸರ್ಕಾರಗಳು ಗೌರವಧನವನ್ನೂ ನೀಡಿ ಗೌರವಿಸುತ್ತಿವೆ. ಇದಲ್ಲದೆ ಸರ್ಕಾರಿ ಉದ್ಯೋಗವನ್ನೂ ನೀಡುತ್ತಿವೆ. ಆದರೆ ಈ ಬಾರಿಯ ಒಲಿಂಪಿಕ್ಸ್‌ನಲ್ಲಿ ಪದಕ ವಿಜೇತ ಆಟಗಾರನೊಬ್ಬ ರಾಜ್ಯ ಸರ್ಕಾರ ನೀಡಿದ ಎರಡೆರಡು ಸರ್ಕಾರಿ ಕೆಲಸವನ್ನು ನಿರಾಕರಿಸಿದ್ದಾನೆ. ಇದರ ಹಿಂದಿರುವ ಕಾರಣವನ್ನೂ ಆ ಅಥ್ಲೀಟ್ ನೀಡಿದ್ದಾರೆ. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ 10 ಮೀಟರ್ ಏರ್ ಪಿಸ್ತೂಲ್ ಟೀಮ್ ಶೂಟಿಂಗ್ ಸ್ಪರ್ಧೆಯಲ್ಲಿ ಮನು ಭಾಕರ್ ಅವರೊಂದಿಗೆ ಭಾರತಕ್ಕೆ ಕಂಚಿನ ಪದಕ ಗೆದ್ದುಕೊಟ್ಟ ಹರ್ಯಾಣದ ಅಂಬಾಲಾದ ಧೀನ್ ಗ್ರಾಮದ ನಿವಾಸಿ ಸರಬ್ಜೋತ್ ಸಿಂಗ್ ಅವರಿಗೆ ಹರಿಯಾಣ ಸರ್ಕಾರ ಸರ್ಕಾರಿ ಉದ್ಯೋಗವನ್ನು ನೀಡುವುದಾಗಿ ಘೋಷಿಸಿದೆ. ಆದರೆ ಸರಬ್ಜೋತ್ ಮಾತ್ರ ಸರ್ಕಾರಿ ಉದ್ಯೋಗವನ್ನು ಸರಾಸಗಟಾಗಿ ತಿರಸ್ಕರಿಸಿದ್ದಾರೆ.

ಸರಬ್ಜೋತ್ ಸಿಂಗ್ ರೈತರಾದ ಜತೀಂದರ್ ಸಿಂಗ್ ಮತ್ತು ಹರ್ದೀಪ್ ಕೌರ್ ಅವರ ಮಗ. ಚಂಡೀಗಢದಲ್ಲಿ ವ್ಯಾಸಂಗ ಮುಗಿಸಿದ್ದಾರೆ. ಇದಕ್ಕೂ ಮೊದಲು 2019ರ ಜೂನಿಯರ್ ವಿಶ್ವಕಪ್‌ನಲ್ಲಿ ಸರಬ್ಜೋತ್ ಸಿಂಗ್ ಭಾರತಕ್ಕೆ ಚಿನ್ನದ ಪದಕ ಗೆದ್ದುಕೊಟ್ಟಿದ್ದರು. ಅದೇ ಸಮಯದಲ್ಲಿ, ಸರಬ್ಜೋತ್ ಸಿಂಗ್ 2022 ರ ಏಷ್ಯನ್ ಗೇಮ್ಸ್‌ನಲ್ಲಿ ಭಾರತೀಯ ಶೂಟಿಂಗ್ ತಂಡದ ಭಾಗವಾಗಿ ಚಿನ್ನದ ಪದಕವನ್ನು ಗೆದ್ದಿದ್ದರು. ಇದಲ್ಲದೆ ಏಷ್ಯನ್ ಗೇಮ್ಸ್‌ನಲ್ಲಿ ಸರಬ್ಜೋತ್ ಸಿಂಗ್ ಭಾರತಕ್ಕೆ ಬೆಳ್ಳಿ ಪದಕ ಗೆದ್ದುಕೊಟ್ಟಿದ್ದಾರೆ.

ಇದೆಲ್ಲದರ ಜೊತೆಗೆ ಇದೀಗ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಪದಕ ಗೆಲ್ಲುವ ಮೂಲಕ ಭಾರತ ಹೆಮ್ಮೆ ಪಡುವಂತೆ ಮಾಡಿದ ಸರಬ್ಜೋತ್ ಸಿಂಗ್ ಅವರಿಗೆ ಹರಿಯಾಣ ಮತ್ತು ಪಂಜಾಬ್ ಸರ್ಕಾರವು ಕ್ರೀಡಾ ಇಲಾಖೆಯಲ್ಲಿ ಉಪನಿರ್ದೇಶಕ ಹುದ್ದೆಯನ್ನು ನೀಡಿದೆ.

ಇದರೊಂದಿಗೆ ಹರಿಯಾಣ ಸರ್ಕಾರದಿಂದ 2.50 ಕೋಟಿ ರೂಪಾಯಿ ನಗದು ಬಹುಮಾನವನ್ನೂ ನೀಡಲಾಗಿದೆ. ಹರಿಯಾಣ ಕ್ರೀಡಾ ಸಚಿವ ಸಂಜಯ್ ಸಿಂಗ್ ಈ ಬಹುಮಾನವನ್ನು ಘೋಷಿಸಿದ್ದಾರೆ. ಆದರೆ 22 ವರ್ಷದ ಸರಬ್ಜೋತ್ ಸಿಂಗ್ ಅವರು ಹರಿಯಾಣ ಮತ್ತು ಪಂಜಾಬ್ ಸರ್ಕಾರಗಳು ನೀಡಿದ್ದ ಉದ್ಯೋಗಗಳನ್ನು ತಿರಸ್ಕರಿಸಿದ್ದಾರೆ. ಇದರ ಹಿಂದಿನ ಕಾರಣವನ್ನು ವಿವರಿಸಿದ ಸರಬ್ಜೋತ್ ಸಿಂಗ್, 'ಕೆಲಸ ಚೆನ್ನಾಗಿದೆ, ಆದರೆ ನಾನು ಈಗ ಅದನ್ನು ಮಾಡುವುದಿಲ್ಲ ಎಂದರು.



# ಒಂದು ದಾಖಲೆಗೆ ಮುಂದಿನ ವರ್ಷದವರೆಗೆ ಕಾಯಬೇಕು..!

## ಸಿಕರ್ ಸರದಾರ ಕ್ರಿಸ್ ಗೇಲ್

ಶ್ರೀಲಂಕಾ ವಿರುದ್ಧದ ಏಕದಿನ ಸರಣಿಯಲ್ಲಿ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಇದೀಗ ವಿಶ್ವ ದಾಖಲೆಯ ಹೊಸ್ತಿಲಲ್ಲಿದ್ದಾರೆ. ಆದರೆ ಈ ವಿಶ್ವ ದಾಖಲೆ ನಿರ್ಮಿಸಲು ಹಿಟ್‌ಮ್ಯಾನ್ ಮುಂದಿನ ವರ್ಷದವರೆಗೆ ಕಾಯಲೇಬೇಕು ಎಂಬುದೇ ವಿಶೇಷ.

ಅಂದರೆ ಏಕದಿನ ಕ್ರಿಕೆಟ್‌ನಲ್ಲಿ ಅತ್ಯಧಿಕ ಸಿಕ್ಸ್ ಸಿಡಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲಿ ಹಿಟ್‌ಮ್ಯಾನ್ ಇದೀಗ ದ್ವಿತೀಯ ಸ್ಥಾನಕ್ಕೇರಿದ್ದಾರೆ. ಅದು ಸಹ ಸಿಕ್ಸರ್ ಸರದಾರ ಕ್ರಿಸ್ ಗೇಲ್ ಅವರ ಸಿಕ್ಸರ್ ದಾಖಲೆಯನ್ನು ಸರಿಗಟ್ಟುವ ಮೂಲಕ. ಇದೀಗ ಗೇಲ್ ಅವರನ್ನು ಹಿಂದಿಕ್ಕಲು ರೋಹಿತ್ ಶರ್ಮಾಗೆ ಒಂದು ಸಿಕ್ಸ್‌ನ ಅವಶ್ಯಕತೆಯಿದೆ.

ಈ ಒಂದು ಸಿಕ್ಸ್ ಸಿಡಿಸಲು ರೋಹಿತ್ ಶರ್ಮಾ ಮುಂದಿನ ವರ್ಷ ಫೆಬ್ರವರಿಯಲ್ಲಿ ನಡೆಯಲಿರುವ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯವರೆಗೆ ಕಾಯಲೇಬೇಕು. ಏಕೆಂದರೆ ಈ ವರ್ಷ ಭಾರತ ತಂಡಕ್ಕೆ ಯಾವುದೇ ಏಕದಿನ ಸರಣಿಯಿಲ್ಲ. ಹೀಗಾಗಿ 2025 ರಲ್ಲಿ ನಡೆಯುವ ಇಂಗ್ಲೆಂಡ್ ವಿರುದ್ಧದ ಸರಣಿಯ ಮೂಲಕವಷ್ಟೇ ಹಿಟ್‌ಮ್ಯಾನ್ ಸಿಕ್ಸರ್ ಸರದಾರರ ಪಟ್ಟಿಯಲ್ಲಿ ಮೇಲೇರಬಹುದು.

ಏಕದಿನ ಕ್ರಿಕೆಟ್‌ನಲ್ಲಿ ಅತ್ಯಧಿಕ ಸಿಕ್ಸ್ ಬಾರಿಸಿದ ವಿಶ್ವ ದಾಖಲೆ ಪಾಕಿಸ್ತಾನದ ಮಾಜಿ ಸ್ಫೋಟಕ ದಾಂಡಿಗ ಶಾಹಿದ್ ಅಫ್ರಿದಿ ಹೆಸರಿನಲ್ಲಿದೆ. 369 ಏಕದಿನ ಇನಿಂಗ್ಸ್ ಆಡಿರುವ ಅಫ್ರಿದಿ ಒಟ್ಟು 351 ಸಿಕ್ಸ್‌ಗಳನ್ನು ಸಿಡಿಸುವ ಮೂಲಕ ಈ ವಿಶ್ವ ದಾಖಲೆ ನಿರ್ಮಿಸಿದ್ದಾರೆ.

ಈ ಪಟ್ಟಿಯಲ್ಲಿ ಕ್ರಿಸ್ ಗೇಲ್ ದ್ವಿತೀಯ ಸ್ಥಾನದಲ್ಲಿದ್ದಾರೆ. ಯುನಿವರ್ಸ್ ಬಾಸ್ ಖ್ಯಾತಿಯ ಗೇಲ್ 294 ಏಕದಿನ ಇನಿಂಗ್ಸ್‌ಗಳಿಂದ 331 ಸಿಕ್ಸ್‌ಗಳನ್ನು ಬಾರಿಸಿದ್ದಾರೆ. ಈ ಮೂಲಕ ಒನ್‌ಡೇ ಕ್ರಿಕೆಟ್‌ನ 2ನೇ ಸಿಕ್ಸರ್ ಕಿಂಗ್ ಎನಿಸಿಕೊಂಡಿದ್ದಾರೆ. ಇದೀಗ ಕ್ರಿಸ್ ಗೇಲ್ ದಾಖಲೆಯನ್ನು ರೋಹಿತ್ ಶರ್ಮಾ ಸರಿಗಟ್ಟಿದ್ದಾರೆ. 257 ಏಕದಿನ ಇನಿಂಗ್ಸ್ ಆಡಿರುವ ಹಿಟ್‌ಮ್ಯಾನ್ ಒಟ್ಟು 331 ಸಿಕ್ಸ್‌ಗಳನ್ನು ಸಿಡಿಸಿದ್ದಾರೆ. ಇನ್ನೊಂದು ಸಿಕ್ಸ್ ಬಾರಿಸಿದರೆ ಕ್ರಿಸ್ ಗೇಲ್ ಅವರ ದಾಖಲೆಯನ್ನು ಮುರಿದು ಸಿಕ್ಸರ್ ಸರದಾರರ ಪಟ್ಟಿಯಲ್ಲಿ ರೋಹಿತ್ ಶರ್ಮಾ ದ್ವಿತೀಯ ಸ್ಥಾನಕ್ಕೇರಲಿದ್ದಾರೆ.



# ಸಮಂತಾಗೆ ಬಂತು ಪ್ರಪೋಸಲ್

## ಗ್ರೀನ್ ಸಿಗ್ನಲ್ ಕೊಟ್ರಾ ನಟಿ



ಸಮಂತಾ ಮಾಜಿ ಪತಿ ನಾಗ ಚೈತನ್ಯ ಅವರು ಆಗಸ್ಟ್ 8 ರಂದು ಶೋಭಿತಾ ಧೂಳಿಪಾಲ ಅವರೊಂದಿಗೆ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ. ಇದರ ಬೆನ್ನಲ್ಲೇ ಸಮಂತಾ ರುತ್ ಪ್ರಭು ಇತ್ತೀಚೆಗೆ ಅಭಿಮಾನಿಯಿಂದ ಮದುವೆಯ ಆಫರ್‌ವೊಂದನ್ನು ಸ್ವೀಕರಿಸಿದ್ದಾರೆ. ಈ ಬಗ್ಗೆ ನಟಿಯೂ ಪ್ರತಿಕ್ರಿಯೆ ನೀಡಿದ್ದಾರೆ.

ಮುಕೇಶ್ ಎಂಬವರು ಇನ್‌ಸ್ಟಾಗ್ರಾಮ್‌ನಲ್ಲಿ ವಿಡಿಯೊವೊಂದನ್ನು ಶೇರ್ ಮಾಡಿದ್ದಾರೆ ಅದರಲ್ಲಿ ಮೊದಲಿಗೆ ಮುಕೇಶ್ ಸಮಂತಾಗೆ ಚಿಂತಿಸಬೇಕಾಗಿಲ್ಲ ಏಕೆಂದರೆ ನಾನು ಯಾವಾಗಲೂ ಅವರೊಂದಿಗೆ ಇರುತ್ತೇನೆ ಎಂದು ಹೇಳಿದ್ದಾರೆ. ರೀಲ್‌ನಲ್ಲಿ ಸಮಂತಾ 'ಮನೆ'ಯನ್ನು ತಲುಪಿದ ನಂತರ ಜಿಮ್‌ಗೆ ಹೋಗುತ್ತಾರೆ. ಬಳಿಕ ಅಲ್ಲಿಯೇ 'ಹೃದಯ'ವನ್ನು ನೀಡಿ ಬೇಡಿಕೊಳ್ಳುವುದರೊಂದಿಗೆ ರೀಲ್ಸ್ ಕೊನೆಗೊಳ್ಳುತ್ತದೆ. ಅಷ್ಟೇ ಅಲ್ಲ ಆರ್ಥಿಕವಾಗಿ 2 ವರ್ಷದೊಳಗೆ ಗಟ್ಟಿಯಾಗುತ್ತೇನೆ ಎಂದು ಪ್ರಪೋಸ್ ಬಗ್ಗೆ ಮನವರಿಕೆ ಮಾಡುತ್ತಾರೆ. ಈ ರೀಲ್ಸ್ ಭಾರಿ ವೈರಲ್ ಆಗುತ್ತಿದ್ದಂತೆ ಸಮಂತಾ ಅವರ ಗಮನ ಕೂಡ ಸೆಳೆದಿದೆ.

ಫಿಟ್‌ನೆಸ್ ಫ್ರೀಕ್ ಎಂದು ಹೆಸರುವಾಸಿಯಾಗಿರುವ ಸಮಂತಾ ರೀಲ್ಸ್‌ಗೆ ಪ್ರತಿಕ್ರಿಯೆ ನೀಡಿದ್ದು ಹೀಗೆ, ''ಹಿನ್ನೆಲೆಯಲ್ಲಿರುವ ಜಿಮ್ ನೋಡಿ ನನಗೆ ಬಹುತೇಕ ಮನವರಿಕೆ ಆಗಿದೆ'' ಎಂದು ಕಮೆಂಟ್ ಮಾಡಿದ್ದಾರೆ. ಬಳಿಕ ಮತ್ತೆ ಮುಕೇಶ್ ಅವರು ''ಜಗತ್ತು ಸಮಂತಾ ವಿರುದ್ಧವಾಗಿದ್ದರೆ, ನಾನು ಪ್ರಪಂಚದ ವಿರುದ್ಧವಾಗಿರುತ್ತೇನೆ'' ಎಂದು ಅವರು ಇನ್ಸ್ಟಾಗ್ರಾಮ್ ಸ್ಟೋರಿಸ್‌ನಲ್ಲಿ ಬರೆದಿದ್ದಾರೆ. ಸಮಂತಾ ಮತ್ತು ಚೈತನ್ಯ ಹೈದರಾಬಾದ್‌ನಲ್ಲಿ ನಿಶ್ಚಿತಾರ್ಥ ಮಾಡಿಕೊಳ್ಳುವ ಮೊದಲು ವರ್ಷಗಳ ಕಾಲ ಡೇಟಿಂಗ್ ಮಾಡುತ್ತಿದ್ದರು. 2017ರಲ್ಲಿ ಮದುವೆಯಾಗಿ 2021ರಲ್ಲಿ ವಿಚ್ಛೇದನ ಪಡೆದರು. ಇದೀಗ ಚೈತನ್ಯ ಆಗಸ್ಟ್ 8 ರಂದು ಹೈದರಾಬಾದ್‌ನಲ್ಲಿರುವ ತಮ್ಮ ನಿವಾಸದಲ್ಲಿ ಶೋಭಿತಾ ಅವರೊಂದಿಗೆ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ.

# ಗೋಪಿಲೋಲ ಹಾಡು ರಿಲೀಸ್!



ಈ ಹಿಂದೆ ಕನ್ನಡದಲ್ಲಿ ಛಲಗಾರ, ಸರ್ಕಾರಿ ಕೆಲಸ ದೇವರ ಕೆಲಸ, ಮನಸ್ಸಿನಾಟ, ಬಂಗಾರದ ಮಕ್ಕಳು, ಮರಾಠಿಯಲ್ಲಿ ಫೆಬ್ರವರಿ 14, ಮಿಷನ್ ಅಂಬ್ಯುಲೆನ್ಸ್ ಸಿನಿಮಾಗಳನ್ನು ನಿರ್ದೇಶಿಸಿದ್ದ ಆರ್ ರವೀಂದ್ರ ಈಗ 'ಗೋಪಿಲೋಲ' ಸಿನಿಮಾ ಮೂಲಕ ಪ್ರೇಕ್ಷಕರ ಎದುರು ಬರುತ್ತಿದ್ದಾರೆ. ಇದೀಗ ಈ ಚಿತ್ರದ ಎರಡನೇ ಹಾಡು ಬಿಡುಗಡೆ ಕಾರ್ಯಕ್ರಮ ಇತ್ತೀಚೆಗಷ್ಟೇ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆಯಿತು. ಹಿರಿಯ ನಿರ್ದೇಶಕ ರಾಜೇಂದ್ರ ಸಿಂಗ್ ಬಾಬು, ನಿರ್ಮಾಪಕ ಉಮೇಶ್ ಬಣಕಾರ್ ನಿನ್ನೆ ನಿನ್ನೆ ನೆಚ್ಚಿಕೊಂಡೆ ಎಂಬ ಹಾಡನ್ನು ಅನಾವರಣ ಮಾಡಿದರು. ಬಳಿಕ ರಾಜೇಂದ್ರ ಸಿಂಗ್ ಬಾಬು ಮಾತನಾಡಿ, ಒಂದು ಸಾಂಗ್ ನಾವು ನೋಡುತ್ತವೆ. ಆದರೆ ಆ ಹಾಡಿನ ಹಿಂದೆ ಎಷ್ಟು ಕೆಲಸ ಮಾಡಿರುತ್ತಾರೆ ಎಂದರೆ ಮೇಕಪ್, ಪ್ರೊಡಕ್ಷನ್, ಪ್ರೊಡಕ್ಷನ್ ಮ್ಯಾನೇಜರ್, ಕಾಸ್ಟ್ಯೂಮ್ ಡಿಸೈನ್..ಈ ರೀತಿ ಹಲವರ ಪ್ರಯತ್ನ ಇರುತ್ತದೆ. ಈ ಹಾಡನ್ನು ಅಚ್ಚುಕಟ್ಟಾಗಿ ಮಾಡಿದ್ದಾರೆ. ಲೋಕೇಷನ್, ನಟನೆ ಓವರ್ ಆಗಿ ಮಾಡದೇ ಹಾಡಿಗೆ ಎಷ್ಟು ಬೇಕೋ ಅಷ್ಟೂ ಮಾಡಿದ್ದಾರೆ. ನಿರ್ದೇಶಕರು, ಕೊರಿಯೋಗ್ರಫರ್ ಎಲ್ಲಾರೂ ಅದ್ಭುತ ಕೆಲಸ ಮಾಡಿದ್ದಾರೆ. ಎಲ್ಲಿಯೂ ಹೊಸಬರು ಎನ್ನುವಂತೆ ಕಾಣುವುದಿಲ್ಲ.

# ಜ್ಯೂ. ಎನ್‌ಟಿಆರ್ ವಾಚ್ ಬೆಲೆ ಎಷ್ಟು ಗೊತ್ತಾ




ಜೂನಿಯರ್ ಎನ್ ಟಿಆರ್ (ಮತ್ತು ನಿರ್ದೇಶಕ ಪ್ರಶಾಂತ್ ನೀಲ್ ಕಾಂಬಿನೇಷನ್‌ನಲ್ಲಿ ಮೂಡಿಬರುತ್ತಿರುವ ಇನ್ನೂ ಶೀರ್ಷಿಕೆ ಅಂತಿಮವಾಗದ ಸಿನಿಮಾದ ಬಿಡುಗಡೆ ದಿನಾಂಕವನ್ನು ಚಿತ್ರ ನಿರ್ಮಾಣ ಸಂಸ್ಥೆ ಮೈತ್ರಿ ಮೂವಿ ಮೇಕರ್ಸ್ ಶುಭ ಶುಕ್ರವಾರದಂದು ಘೋಷಣೆ ಮಾಡಿದ್ದಾರೆ. ಈ ಬಿಗ್ ಬಜೆಟ್ ಸಿನಿಮಾ 2026ರ ಜನವರಿ 9 ರಂದು ಬಿಡುಗಡೆಯಾಗಲಿದೆ. ಅದ್ದೂರಿಯಾಗಿ ಮುಹೂರ್ತ ಕಾರ್ಯಕ್ರಮವೂ ಜರುಗಿದ್ದು, ಇನ್ನೇನು ಶೀಘ್ರದಲ್ಲಿ ಶೂಟಿಂಗ್ ಸಹ ಶುರುವಾಗಲಿದೆ. ಸಿನಿಮಾದ ಮುಹೂರ್ತಕ್ಕೆ ಆಗಮಿಸಿದ್ದಾಗ ವಾಚ್ ಒಂದನ್ನು ಜೂ ಎನ್‌ಟಿಆರ್ ಧರಿಸಿದ್ದರು. ಕೈಗೆ ತೊಟ್ಟಿದ್ದ ಗಡಿಯಾರ ಸಖತ್ ಗಮನ ಸೆಳೆಯಿತು. ಅಂದಹಾಗೆ ಈ ಗಡಿಯಾರದ ಬೆಲೆಗೆ ಒಂದು ಸಣ್ಣ ಬಜೆಟ್‌ನ ಸಿನಿಮಾ ನಿರ್ಮಾಣ ಮಾಡಿಬಿಡಬಹುದು.

ಜೂ ಎನ್‌ಟಿಆರ್ ಕಪ್ಪು ಬಣ್ಣದ ಲೆದರ್ ಬೆಲ್ಟ್ ಹೊಂದಿರುವ ನೀಲಿ-ಚಿನ್ನದ ಬಣ್ಣದ ಡಯಲ್ ಹೊಂದಿರುವ, ನೋಡಲು ತೀರ ಅದ್ದೂರಿ ಎಂದೇನೂ ಅನಿಸದಿದ್ದ ವಾಚ್ ಒಂದನ್ನು ಧರಿಸಿದ್ದರು. ಇದರ ಬೆಲೆ ಬರೋಬ್ಬರಿ 2.53 ಕೋಟಿ ರೂಪಾಯಿಗಳು. ಜೂ ಎನ್‌ಟಿಆರ್ ಧರಿಸಿದ್ದು ಪೆಟೆಕ್ ಫಿಲಿಫ್ ಸಂಸ್ಥೆಯ ವಾಚ್. ಫಿಲಿಪ್ 5370 ಪಿ ಸ್ಪ್ಲಿಟ್-ಸೆಕೆಂಡ್ಸ್ ಕ್ರೊನೊಗ್ರಾಫ್ ವಾಚ್. ಸೆಲ್ಫ್ ವೆಂಡಿಂಗ್ ಮೆಕ್ಯಾನಿಕಲ್ ಮೂಮೆಂಟ್ ಹೊಂದಿದೆ.

# ತರುಣ್ ಸುಧೀರ್ -ಸೋನಲ್ ಕಲ್ಯಾಣ

ನಿರ್ದೇಶಕ ತರುಣ್ ಸುಧೀರ್ ಹಾಗೂ ಸೋನಲ್ ಮೊಂಥೆರೋ ಸಪ್ತಪದಿ ತುಳಿದಿದ್ದಾರೆ. ತರುಣ್ ಮತ್ತು ಸೋನಲ್ ಸತಿ-ಪತಿ ಆಗಿದ್ದಾರೆ.

ಆಗಸ್ಟ್-11 ರಂದು ಬೆಳಗ್ಗೆ 10:50 ರಿಂದ 11:35 ಸಮಯದ ತುಲಾ ಲಗ್ನದಲ್ಲಿ ಮಾಂಗಲ್ಯ ಧಾರಣೆ ನೆರವೇರಿದೆ. ಹಿಂದೂ ಸಂಪ್ರದಾಯದಂತೆ ನಡೆಯಲಿರೋ ಈ ಮದುವೆಗೆ ಗಣ್ಯಾತಿ ಗಣ್ಯರು ಹಾಗೂ ಸಿನಿಮಾ ಗಣ್ಯರು ಆಗಮಿಸಿದ್ದರು. ಬೆಂಗಳೂರಿನ ಮೈಸೂರು ರಸ್ತೆಯಲ್ಲಿರುವ ಪೂರ್ಣಿಮಾ ಪ್ಯಾಲೇಸ್‌ನಲ್ಲಿ ಅದ್ದೂರಿಯಾಗಿ ಆರತಕ್ಷತೆ ಹಾಗೂ ಮದುವೆ ನಡೆದಿದೆ.



ಇನ್ನು ತರುಣ್‌ಗೆ ಗಾಡ್ ಫಾದರ್ ಆಗಿರುವ ದರ್ಶನ್ ಜೈಲಿನಲ್ಲಿ ಇದ್ದಾರೆ. ಹೀಗಾಗಿ ಅವರ ಪತ್ನಿ ವಿಜಯಲಕ್ಷ್ಮಿ ದರ್ಶನ್ ಮೊದಲ ಆಮಂತ್ರಣ ಪತ್ರಿಕೆ ನೀಡಿದ್ದರು. ತರುಣ್ ಸುಧೀರ್ ಹಾಗೂ ಸೋನಲ್ ಮದುವೆ ಅದ್ದೂರಿಯಾಗಿಯೇ ಪ್ಲಾನ್ ಆಗಿದೆ. ಮದುವೆ ಹಾಲ್ ಎಂಟ್ರನ್ಸ್ ವಿಶೇಷವಾಗಿಯೇ ಡಿಸೈನ್ ಆಗಿದೆ. ಮದುವೆ ಹಾಲ್‌ನ ಔಟ್ ಡೋರ್ ಫಿಲ್ಮ್ ಕಾನ್ಸೆಪ್ಟ್‌ನಲ್ಲಿಯೇ ರೆಡಿ ಆಗಿದೆ. ಸೋನಲ್ ಅವರು ಮಂಗಳೂರಿನವರು. ಅವರು ಮೊದಲು ತಮಿಳು ಸಿನಿಮಾದಲ್ಲಿ ನಟಿಸಿದ್ದರು. ತರುಣ್ ಸುಧೀರ್ ಅವರಿಗೆ 41 ವರ್ಷ ಎನ್ನಲಾಗಿದೆ. ಈಗ ಅವರು ಜನಿಸಿದ್ದು 1983ರಲ್ಲಿ. ಅಂದರೆ, ಇಬ್ಬರ ಮಧ್ಯೆ ಸುಮರು 12 ವರ್ಷಗಳ ಅಂತರ ಇದೆ.



# ಅಬ್ಬರ ಮುಂದುವರಿಸಿದ ಭೀಮ: ಕಲೆಕ್ಷನ್ ಎಷ್ಟು

## ಮೊದಲ ದಿನ 3.5 ಕೋಟಿ ಕಲೆಕ್ಷನ್

ದುನಿಯಾ ವಿಜಯ್ ನಟಿಸಿ, ನಿರ್ದೇಶನ ಮಾಡಿರುವ 'ಭೀಮ' ಸಿನಿಮಾ ರಾಜ್ಯಾದ್ಯಂತ ಅದ್ದೂರಿಯಾಗಿ ಆಗಸ್ಟ್ 9ರಂದು ರಿಲೀಸ್ ಆಗಿದೆ. ಸಲಗ ಸಿನಿಮಾದ ನಂತರ ಸಿನಿಪ್ರೇಕ್ಷಕರ ಮುಂದೆ ಮತ್ತೆ ಬಂದಿದ್ದಾರೆ ದುನಿಯಾ. ಹೀಗಾಗಿ ಸಹಜವಾಗಿಯೇ ಸಿನಿಮಾ ನಿರೀಕ್ಷೆ ಮೂಡಿಸಿತ್ತು. ಒಂದರ್ಥದಲ್ಲಿ ಈ ವರ್ಷ ಬಂದಿರುವ ಮೊದಲ ಸ್ಟಾರ್ ನಟನ ಸಿನಿಮಾ. ದುನಿಯಾ ವಿಜಯ್ ಅವರ ನಟನೆಯ 'ಭೀಮ' ಮೊದಲ ದಿನ 3.5 ಕೋಟಿ ರೂಪಾಯಿ ಕಲೆಕ್ಷನ್ ಮಾಡಿದೆ ಎಂದು ವರದಿಯಾಗಿತ್ತು. ಈ ಸಮಯದಲ್ಲಿ 'ಭೀಮ' ಸಿನಿಮಾ ಎರಡು ದಿನ ಸೇರಿ ಒಟ್ಟು 20 ಕೋಟಿ ರೂಪಾಯಿ ಗಳಿಸಿದೆ ಎನ್ನಲಾಗುತ್ತಿದೆ. ಆದರೆ 'ಭೀಮ' ಸಿನಿಮಾ ಬಾಕ್ಸ್ ಆಫಿಸ್ ಕಲೆಕ್ಷನ್ ಬಗ್ಗೆ ದುನಿಯಾ ವಿಜಯ್ ಅವರೇ ಆಗಲಿ ಅಥವಾ ಸಿನಿಮಾ ತಂಡವೇ ಆಗಲಿ ಅಧಿಕೃತ ಮಾಹಿತಿ ನೀಡಿಲ್ಲ. ಕೃಷ್ಣ ಸಾರ್ಥಕ್ ಹಾಗೂ ಜಗದೀಶ್ ಗೌಡ ನಿರ್ಮಾಣದ 'ಭೀಮ' ಚಿತ್ರದಲ್ಲಿ ಅನುಭವಿ ಕಲಾವಿದರ ಜೊತೆ ಹೊಸ ಪ್ರತಿಭೆಗಳಿಗೆ ಅವಕಾಶ ಸಿಕ್ಕಿದೆ. ಮಾಸ್ತಿ ಸಂಭಾಷಣೆ, ಚರಣ್ ರಾಜ್ ಸಂಗೀತ ಚಿತ್ರಕ್ಕೆ ಪ್ಲಸ್ ಆಗಿದೆ. ಒಂದಷ್ಟು ತಪ್ಪುಗಳ ನಡುವೆಯೂ ಮಾಸ್ ಪ್ರೇಕ್ಷಕರನ್ನು ಸಿನಿಮಾ ರಂಜಿಸ್ತಿದೆ. ಮತ್ತೆ ಚಿತ್ರಮಂದಿರಗಳಲ್ಲಿ ಶಿಳ್ಳೆ ಚಪ್ಪಾಳೆ ಸದ್ದು ಕೇಳುವಂತಾಗಿದೆ. ಚಿತ್ರಮಂದಿರಗಳಲ್ಲಿ 'ಭೀಮ'ನ ಕಾರುಬಾರು ಜೋರಾಗಿತ್ತು. ರಜಾ ದಿನ ಅಲ್ಲದೇ ವಾರದ ದಿನದಲ್ಲಿ(ಶುಕ್ರವಾರ) ಕೆಲವೆಡೆ ಶೋಗಳು ಹೌಸ್‌ಫುಲ್ ಆಗಿತ್ತು. ಸಂಜೆ ಮೇಲೆ ಶೋಗಳಿಗೆ ಭರ್ಜರಿ ರೆಸ್ಪಾನ್ಸ್ ಸಿಕ್ಕಿತ್ತು. ಬುಕ್‌ಮೈ ಶೋನಲ್ಲಿ ಟಿಕೆಟ್ ಬುಕ್ಕಿಂಗ್‌ಗೂ ರೆಸ್ಪಾನ್ಸ್ ಚೆನ್ನಾಗಿತ್ತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966